27 May 2026 Wednesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಉಪ್ಪು ಹೆಚ್ಚಾದರೆ ನಾಲಗೆ ಕೊರೆಯುತ್ತೆ,
ಖಾರ ಹೆಚ್ಚಾದರೆ ಬಾಯಿ ಉರಿಯುತ್ತೆ!
ಹೀಗಾಗಿ ಊಟದಲ್ಲಾಗಲಿ, ಜೀವನದಲ್ಲಾಗಲಿ
ಹದವರಿತು ನಡೆಯಬೇಕು!

» ಸ್ನೇಹಾ ಆನಂದ್

info.varthaman@gmail.com



ಭೋವಿ ಸಮುದಾಯಕ್ಕೆ 11 ಗ್ಯಾರಂಟಿ! ಪುಟ ಸಂ. 2



ರಾಜಕಾರಣದಲ್ಲಿ ಯಾರೂ ಪ್ರಾಮಾಣಿಕರೂ ಹೇಳಿ: ಸಾರಾ ಪುಟ ಸಂ. 3



ರಸಗೊಬ್ಬರ ಖರೀದಿಗೆ ಎಫ್‌ಐಡಿ ಕಡ್ಡಾಯ ವಿರೋಧಿಸಿ ಪ್ರತಿಭಟನೆ ಪುಟ ಸಂ. 2

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 181 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಕುರ್ಚಿ ಕಚ್ಚಾಟಕ್ಕೆ 'ಶಾರ್ಟ್ ಬ್ರೇಕ್'

## ಮುಖ್ಯಮಂತ್ರಿ ಸ್ಥಾನ ಬಿಟ್ಟುಕೊಡಲು ಒಪ್ಪದ ಸಿಎಂ ಸಿದ್ದರಾಮಯ್ಯ | ಸಿಎಂ ಸ್ಥಾನ ಹೊರತುಪಡಿಸಿ ಬೇರೆ ಯಾವುದೇ ಸ್ಥಾನ ಬೇಡ: ಡಿಕೆಶಿ ಪಟ್ಟು

**ನವದೆಹಲಿ:** ನಾಯಕತ್ವ ಬದಲಾವಣೆ ವಿಚಾರದಲ್ಲಿ ಯಾವುದೇ ಅಂತಿಮ ನಿರ್ಧಾರ ಕೈಗೊಳ್ಳಲು ಸಾಧ್ಯವಾಗದ ಕಾರಣಕ್ಕೆ ಕಾಂಗ್ರೆಸ್ ಹೈಕಮಾಂಡ್ ಮತ್ತೊಂದು ಡೆಡ್‌ಲೈನ್ ವಿಸ್ತರಿಸಿದೆ.

ಪಂಚರಾಜ್ಯಗಳ ಚುನಾವಣೆ ಮುಗಿಯುತ್ತಿದ್ದಂತೆ ಮಂಗಳವಾರ ದೆಹಲಿಯ ಎಐಸಿಸಿ ಕಚೇರಿಯಲ್ಲಿ ಕರ್ನಾಟಕದ ನಾಯಕತ್ವ ಕುರಿತು ಹೈಕಮಾಂಡ್ ನಾಯಕರು ಮ್ಯಾರಾಥಾನ್ ಸಭೆ ನಡೆಸಿದರೂ ಅಂತಿಮ ನಿರ್ಧಾರ ಕೈಗೊಳ್ಳಲು ಸಾಧ್ಯವಾಗಿಲ್ಲ.

ಕಾಂಗ್ರೆಸ್ ಹೈಕಮಾಂಡ್ ಯಾವುದೇ ಆಫರ್ ನೀಡಿದರೂ ಮುಖ್ಯಮಂತ್ರಿ ಕುರ್ಚಿ ಬಿಟ್ಟುಕೊಡಲು ಸಿದ್ದರಾಮಯ್ಯ ಅವರು ಕುರ್ಚಿ ಬಿಟ್ಟುಕೊಡಲು ಒಪ್ಪಿಗೆ ನೀಡಲಿಲ್ಲ ಎನ್ನಲಾಗಿದೆ. ಅಲ್ಲದೆ, ಡಿ.ಕೆ.ಶಿವಕುಮಾರ್ ಸಹ ಸಿಎಂ ಕುರ್ಚಿಗೆ ಪಟ್ಟು ಹಿಡಿದು ಕುಳಿತ ಕಾರಣ ಹೈಕಮಾಂಡ್ ಸಂದಿಗ್ಧತೆಗೆ ಸಿಕ್ಕಿದಂತಾಗಿದೆ. ಇಬ್ಬರನ್ನೂ ಸಮಾಧಾನ ಮಾಡಲು ಹೈಕಮಾಂಡ್ ನಡೆಸಿದ ಸಕಲ ಪ್ರಯತ್ನವೂ ವಿಫಲವಾಗಿದೆ. ಸದ್ಯಕ್ಕೆ ಕುರ್ಚಿ ಕಚ್ಚಾಟಕ್ಕೆ ತಾತ್ಕಾಲಿಕ ಬ್ರೇಕ್ ಮುಂದಾಗಿದೆ. ಹೀಗಾಗಿ ಮತ್ತೆ ಮುಂದಿನ ವಾರ ಸಭೆ ಸೇರುವ ಮಾತುಕತೆಯೊಂದಿಗೆ ಮುಕ್ತಾಯ ಮಾಡಲಾಗಿದೆ ಎನ್ನಲಾಗಿದೆ.

ಸುಮಾರು 6 ಗಂಟೆಗಳ ಕಾಲ ನಡೆದ ಮ್ಯಾರಾಥಾನ್ ಸಭೆ ಬೆಳಗ್ಗೆ 11 ಗಂಟೆಗೆ ಆರಂಭವಾಗಿ ಸಂಜೆ 5:30ರ ಪುಟ 2ಕ್ಕೆ



### ಗುಟ್ಟುಬಿಡದ ಕೈ ಹೈಕಮಾಂಡ್: ನಾಯಕತ್ವ ಚರ್ಚೆಯೇ ನಡೆದಿಲ್ಲ!

**ನವದೆಹಲಿ:** ರಾಜ್ಯ ರಾಜಕೀಯದಲ್ಲಿ ತೀವ್ರ ಕುತೂಹಲ ಕೆರಳಿಸಿದ್ದ ನಾಯಕತ್ವ ಬದಲಾವಣೆ ಕುರಿತು ಕಾಂಗ್ರೆಸ್ ಹೈಕಮಾಂಡ್ ಮಂಗಳವಾರ ನಡೆಸಿದ ಮ್ಯಾರಥಾನ್ ಸಭೆಯ ಬಗ್ಗೆ ಯಾವುದೇ ಗುಟ್ಟು ಬಿಟ್ಟುಕೊಡದೆ ಗೌಪ್ಯತೆ ಕಾಪಾಡಿಕೊಳ್ಳಲಾಗಿದೆ.

ರಾಜ್ಯದ ಕಾಂಗ್ರೆಸ್ ನಾಯಕರ ಜೊತೆಗಿನ ಹೈಕಮಾಂಡ್ ಸಭೆಯ ಬೆನ್ನಲ್ಲೇ ಎದ್ದಿದ್ದ ಹಲವು ರಾಜಕೀಯ ಚರ್ಚೆಗಳು ಹಾಗೂ ವದಂತಿಗಳಿಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ತೆರೆ ಎಳೆದಿದ್ದಾರೆ.

ದೆಹಲಿಯಲ್ಲಿ ಸುದೀರ್ಘ ಹಲವು ಸುತ್ತಿನ ಸಭೆಯ ನಂತರ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಭೆಯಲ್ಲಿ ಕೇವಲ ಮುಂಬರುವ ಚುನಾವಣೆಗಳ ಬಗ್ಗೆ ಮಾತ್ರ ಚರ್ಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿ ಅವರು ಸಭೆ ವಿವರ ಹಂಚಿಕೊಂಡಿದ್ದಾರೆ.

ವೇಣುಗೋಪಾಲ್ ಹೇಳಿದ್ದೇನು?: ನಾವು ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಪುಟ 2ಕ್ಕೆ

### ಡಿಕೆಶಿ ಮೂರು ಷರತ್ತು: 'ಕೈಕಮಾಂಡ್ ತಬ್ಬಿಬ್ಬು'

**ನವದೆಹಲಿ:** ದೆಹಲಿಯ ಎಐಸಿಸಿ ಕಚೇರಿಯಲ್ಲಿ ಮಂಗಳವಾರ ನಡೆದ ಕಾಂಗ್ರೆಸ್ ನಾಯಕರ ಹೈವೋಲ್ಟೇಜ್ ಸಭೆಯಲ್ಲಿ ಹಲವು ಸುತ್ತಿನ ಕಾವೇರಿದ ಚರ್ಚೆ ನಡೆದಿದೆ. ಬೆಳಿಗ್ಗೆ 11ಕ್ಕೆ ಆರಂಭವಾದ ಸಭೆ ಸುಮಾರು 6 ಗಂಟೆಗೂ ಹೆಚ್ಚು ಕಾಲ ನಡೆದಿದೆ.

ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರ ಜೊತೆಗೆ ಮತ್ತು ಪ್ರತ್ಯೇಕವಾಗಿ ಹಲವು ಸುತ್ತಿನ ಮಾತುಕತೆ ನಡೆಯಿತು. ರಾಹುಲ್ ಗಾಂಧಿ ಅವರು ಇಬ್ಬರ ಜೊತೆಗೂ ಪ್ರತ್ಯೇಕವಾಗಿ ಸಭೆ ನಡೆಸಿದರು. ಆದರೆ, ಅಂತಿಮ ತೀರ್ಮಾನವನ್ನು ಬಹಿರಂಗವಾಗಿ ಘೋಷಿಸಲಿಲ್ಲ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೊಟ್ಟ ಮಾತು ಉಳಿಸಿಕೊಳ್ಳುವಂತೆ ಹೈಕಮಾಂಡ್ ನಾಯಕರಿಗೆ ಆಗ್ರಹಿಸಿದ್ದಾರೆ. ಅಧಿಕಾರ ಹಂಚಿಕೆಯ ಸೂತ್ರವನ್ನು ಮುಂದಿಟ್ಟುಕೊಂಡು ಡಿಕೆಶಿ ಹೈಕಮಾಂಡ್ ಅಂಗಳದಲ್ಲಿ ಮೂರು ಸ್ಫೋಟಕ ಷರತ್ತುಗಳನ್ನು ವಿಧಿಸಿ ಬಿಗಿಪಟ್ಟು ಹಿಡಿದ ಹಿನ್ನೆಲೆಯಲ್ಲಿ ಅಂತಿಮ ತೀರ್ಮಾನಕ್ಕೆ ಬರಲು ಸಾಧ್ಯವಾಗಿಲ್ಲ ಎಂದು ಮೂಲಗಳು ಪುಟ 2ಕ್ಕೆ

## 'ದ್ವೇಷ ಭಾಷಣ ತಡೆ'ಗೆ ಅಡ್ಡಗಾಲು

**ಹೊಸ ಮಸೂದೆಯ ಅಗತ್ಯವೇನು?: ಕೇಂದ್ರ ಸರ್ಕಾರದ ಪ್ರಶ್ನೆ**

**ಬೆಂಗಳೂರು:** ರಾಜ್ಯದಲ್ಲಿ ದ್ವೇಷ ಭಾಷಣವನ್ನು ನಿಗ್ರಹಿಸುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ತಡೆಗಟ್ಟುವಿಕೆ) ಮಸೂದೆಗೆ ಕೇಂದ್ರ ಸರ್ಕಾರ ತಡೆಹಾಕಿದೆ.

ರಾಜ್ಯ ಸರ್ಕಾರ ಈಗಾಗಲೇ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಿ ಅನುಮೋದನೆಗಾಗಿ ರಾಜ್ಯಪಾಲರಿಗೆ ಕಳುಹಿಸಿದೆ. ಆದರೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಇದಕ್ಕೆ ಇನ್ನೂ ಸಹಿ ಹಾಕಿಲ್ಲ.

ರಾಜ್ಯಪಾಲರು ಥಾವರ್‌ಚಂದ್ ಗೆಹ್ಲೋಟ್ ಅವರು ಅನುಮೋದನೆ ನೀಡಲು ನಿರಾಕರಿಸಿದ ನಂತರ, ಕರ್ನಾಟಕ ಸರ್ಕಾರ ಫೆಬ್ರವರಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಒಪ್ಪಿಗೆಗಾಗಿ ಮಸೂದೆಯನ್ನು ಗೃಹ ಸಚಿವಾಲಯಕ್ಕೆ ಕಳುಹಿಸಿದೆ.

ಈಗ ರಾಜ್ಯ ಸರ್ಕಾರದ 'ದ್ವೇಷ ಭಾಷಣ' ಮಸೂದೆಗೆ ಕೇಂದ್ರ ಸರ್ಕಾರ ಅಡ್ಡಗಾಲು ಹಾಕಿದೆ. ಈ ಹಂತದಲ್ಲಿ ಮಸೂದೆ ಅಗತ್ಯವಿಲ್ಲ ಮತ್ತು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟು ಈ ಸಮಸ್ಯೆಯನ್ನು ಪರಿಹರಿಸಲು ಸಮರ್ಪಕವಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

ಈ ಸಂಬಂಧ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿರುವ ಕೇಂದ್ರ ಗೃಹ ಸಚಿವಾಲಯ ಇಂಥದ್ದೊಂದು ಮಸೂದೆಯ ಅಗತ್ಯ ಏನಿದೆ ಎಂದು ಪ್ರಶ್ನಿಸಿದೆ.

ಬಿಜೆಪಿ ಮತ್ತು ಜೆಡಿ(ಎಸ್)ನ ತೀವ್ರ ವಿರೋಧದ ಹೊರತಾಗಿಯೂ ಕಳೆದ ಡಿಸೆಂಬರ್ 19ರಂದು ಮುಕ್ತಾಯಗೊಂಡ ಬೆಳಗಾವಿ ಅಧಿವೇಶನದಲ್ಲಿ ರಾಜ್ಯ ವಿಧಾನಮಂಡಲದ ಎರಡೂ ಸದನಗಳಲ್ಲಿ ಈ ಮಸೂದೆಯನ್ನು ಅಂಗೀಕರಿಸಲಾಗಿದೆ.

ಈ ವಿಷಯವನ್ನು ಸಿಎಸ್ ವಿಭಾಗದಲ್ಲಿ ಪರಿಶೀಲಿಸಲಾಗಿದೆ. ಪುಟ 2ಕ್ಕೆ

## ಜೂ.18ಕ್ಕೆ ಪರಿಷತ್ ಚುನಾವಣೆ

**ನವದೆಹಲಿ:** ಕರ್ನಾಟಕ ಹಾಗೂ ಬಿಹಾರ ವಿಧಾನ ಪರಿಷತ್‌ನ ದ್ವೈವಾರ್ಷಿಕ ಚುನಾವಣೆಗೆ ಚುನಾವಣಾ ಆಯೋಗ ಮಂಗಳವಾರ ವೇಳಾಪಟ್ಟಿ ಪ್ರಕಟಿಸಿದೆ.

ಬಿಹಾರದ 9 ಮತ್ತು ಕರ್ನಾಟಕದ ಏಳು ಸ್ಥಾನಗಳಲ್ಲಿ ದ್ವೈವಾರ್ಷಿಕ ಚುನಾವಣೆ ನಡೆಸಲು ಅಧಿಸೂಚನೆ ಹೊರಡಿಸಿದೆ. ಜೂನ್ 18ರಂದು ಮತದಾನ ನಡೆಯಲಿದೆ.

ಬಿಹಾರ ಹಾಗೂ ಕರ್ನಾಟಕದ ವಿಧಾನ ಪರಿಷತ್‌ನ 16 ಸದಸ್ಯರ ಅವಧಿಯು ಅನುಕ್ರಮವಾಗಿ ಜೂನ್ 28 ಹಾಗೂ 30ರಂದು ಮುಕ್ತಾಯ ಆಗಲಿದೆ.

ವಿಧಾನ ಪರಿಷತ್ ಸದಸ್ಯರಾದ ಗೋವಿಂದರಾಜು, ನಾಸೀರ್ ಅಹ್ಮದ್, ಎಂ.ಟಿ.ಬಿ ನಾಗರಾಜು, ಪ್ರತಾಪ ಸಿಂಹ ನಾಯಕ್ ಕೆ, ತಿಪ್ಪಣ್ಣಪ್ಪ, ಸುನಿಲ್ ವಲ್ಯಾಪುರ ಹಾಗೂ ಬಿ.ಕೆ. ಹರಿಪ್ರಸಾದ್ ಅವರ ಅವಧಿ ಜೂನ್ 30ರಂದು ಮುಕ್ತಾಯವಾಗಲಿದೆ.

### ವೇಳಾಪಟ್ಟಿ

- **ಚುನಾವಣೆ ಅಧಿಸೂಚನೆ: 01 ಜೂನ್ 2026**
- **ನಾಮಪತ್ರ ಸಲ್ಲಿಕೆಗೆ ಕೊನೇ ದಿನಾಂಕ: 08 ಜೂನ್ 2026**
- **ನಾಮಪತ್ರ ಪರಿಶೀಲನೆ: 09 ಜೂನ್ 2026**
- **ನಾಮಪತ್ರ ಹಿಂಪಡೆಯಲು ಕೊನೇ ದಿನಾಂಕ: 11 ಜೂನ್ 2026**
- **ಮತದಾನ: 18 ಜೂನ್ 2026**
- **ಮತ ಎಣಿಕೆ: 18 ಜೂನ್ 2026**

## ಮತ್ತೆ ಸಿಎನ್‌ಜಿ ಬೆಲೆಯೂ ಹೆಚ್ಚಳ

**ನವದೆಹಲಿ:** ಪೆಟ್ರೋಲ್, ಡೀಸೆಲ್ ಬಳಿಕ ಇದೀಗ ಸಿಎನ್‌ಜಿ ದರವನ್ನು ಪ್ರತಿ ಕೆಜಿಗೆ 2 ರೂ. ಏರಿಕೆ ಮಾಡಲಾಗಿದೆ. ದೆಹಲಿಯಲ್ಲಿ ಇಂದು ಬೆಳಗ್ಗೆ 6 ಗಂಟೆಯಿಂದ ಜಾರಿಗೆ ಬರುವಂತೆ ಸಿಎನ್‌ಜಿ ಬೆಲೆಯನ್ನು 2 ರೂ. ಗಳಷ್ಟು ಹೆಚ್ಚಿಸಲಾಗಿದೆ.

ಜಾಗತಿಕ ಮತ್ತು ತೈಲ ಬಿಕ್ಕಟ್ಟಿನಿಂದ ಪೆಟ್ರೋಲ್, ಡೀಸೆಲ್ ದರ ಏರಿಕೆ ನಡುವೆಯೇ ಸಿಎನ್‌ಜಿ ಬೆಲೆ ಹೆಚ್ಚಳ ಕಂಡುಬಂದಿದೆ. ಇತ್ತೀಚಿನ ದಿನಗಳಲ್ಲಿ ಸಿಎನ್‌ಜಿ ಬೆಲೆಗಳನ್ನು ಎರಡು ಬಾರಿ ಹೆಚ್ಚಿಸಲಾಗಿದೆ. ಒಟ್ಟಾರೆಯಾಗಿ, ಕಳೆದ 12 ದಿನಗಳಲ್ಲಿ ಪ್ರತಿ ಕೆಜಿಗೆ 6 ರೂ.ಗಳಷ್ಟು ಹೆಚ್ಚಳ ಮಾಡಲಾಗಿದೆ. ಒಟ್ಟಿನಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬಳಿಕ ಸಿಎನ್‌ಜಿ ಈಗ ಸಾಮಾನ್ಯ ಜನರ ಜೇಬಿನ ಕತ್ತರಿ ಹಾಕುತ್ತಿದೆ. ಸಿಎನ್‌ಜಿ ಬೆಲೆ ಹೆಚ್ಚಳದಿಂದ ವಾಣಿಜ್ಯ ವಾಹನ ಚಾಲಕರಿಗೆ ಹೆಚ್ಚು ಹೊರೆಯಾಗಲಿದೆ.


## ಪಶು ವಿವಿ ಹಗರಣ: ಮಾಜಿ ಕುಲಪತಿ ಸೇರಿ 6 ಜನರ ಬಂಧನ

**ಬೀದರ್:** ಬೀದರ್ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಬಹುಕೋಟಿ ಹಗರಣದಲ್ಲಿ ಲೋಕಾಯುಕ್ತ ಪೊಲೀಸರು ಮಾಜಿ ಉಪಕುಲಪತಿ ಸೇರಿದಂತೆ ಆರು ಜನರನ್ನು ಬಂಧಿಸಿದ್ದಾರೆ.

ಪಶು ವಿವಿಯ ಮಾಜಿ ಉಪಕುಲಪತಿ ಪ್ರೊ.ಎಚ್.ಡಿ. ನಾರಾಯಣಸ್ವಾಮಿ, 2017–18ರಲ್ಲಿ ವಿವಿಯ ಹಣಕಾಸು ನಿಯಂತ್ರಣಾಧಿಕಾರಿ ಕೆ.ಎಲ್.ಸುರೇಶ್, ಮೃತ್ಯುಂಜಯ ಹಿರೇಮಠ, ಬೋಪಣ್ಣ, ಮಂಜುನಾಥ ಹಾಗೂ ರಾಮಗೊಂಡ ಬಂಧಿತರು.

2017–18ರ ಅವಧಿಯಲ್ಲಿ ವಿಶ್ವವಿದ್ಯಾಲಯದ ಸಾಮಗ್ರಿ ಖರೀದಿಯಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಟಿಸಿ 45 ಕೋಟಿ ರೂ.ಗೂ ಅಧಿಕ ವಿವಿ ಹಣವನ್ನು ಲೂಟಿ ಮಾಡಿದ್ದರು. ಬಳಿಕ 2021ರಲ್ಲಿ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ತನಿಖೆ ತೀವ್ರಗೊಳಿಸಿದ್ದರು.

ಈ ಹಗರಣದಲ್ಲಿ ವಿಶ್ವವಿದ್ಯಾಲಯದ ಉನ್ನತಾಧಿಕಾರಿಗಳು, ಸಿಬ್ಬಂದಿ ಹಾಗೂ ಖಾಸಗಿ ಎಂಟರ್‌ಪ್ರೈಸಸ್ ಮಾಲೀಕರು ಶಾಮೀಲಾಗಿ ಯಾವುದೇ ಸಾಮಗ್ರಿ ಖರೀದಿಸದೆಯೇ



ನಕಲಿ ಬಿಲ್‌ಗಳನ್ನು ಸೃಷ್ಟಿಸಿರುವುದು ಸಾಬೀತಾಗಿದೆ. ಬೀದರ್ ಜಿಲ್ಲಾ ಸತ್ರ ನ್ಯಾಯಾಲಯ ವಾರೆಂಟ್ ಹೊರಡಿಸಿದ ಬೆನ್ನಲ್ಲೇ ಲೋಕಾಯುಕ್ತ ಪೊಲೀಸರು ಆರು ಜನರನ್ನು ಬಂಧಿಸಿದ್ದಾರೆ. ಸದ್ಯ ಬಂಧಿತ ಆರೋಪಿಗಳನ್ನು ಲೋಕಾಯುಕ್ತ ಪೊಲೀಸರು ನ್ಯಾಯಾಧೀಶರ ಮುಂದೆ ಹಾಜರುಪಡಿಸಿದ್ದು, ನ್ಯಾಯಾಂಗ ಬಂಧನಕ್ಕೆ ವಹಿಸಲಾಗಿದೆ.

## ಚಾಮುಂಡೇಶ್ವರಿಗೆ ರಣವೀರ್ ಪೂಜೆ


### ದೈವಕ್ಕೆ ಅಪಮಾನ ಆರೋಪಕ್ಕೆ ಕ್ಷಮೆಯಾಚಿಸಿದ ನಟ

**ಮೈಸೂರು:** ಕಾಂತಾರ ಚಿತ್ರದ ದೈವಕ್ಕೆ ಅಪಮಾನ ಮಾಡಿದ ಆರೋಪದ ಹಿನ್ನೆಲೆಯಲ್ಲಿ ಬಾಲಿವುಡ್ ನಟ ರಣವೀರ್ ಸಿಂಗ್ ಅವರು ಮೈಸೂರಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಮಂಗಳವಾರ ಭೇಟಿ ನೀಡಿ ಕ್ಷಮೆಯಾಚಿಸಿದ್ದಾರೆ.

ಕರ್ನಾಟಕ ಹೈಕೋರ್ಟ್ ನಿರ್ದೇಶನದ ಮೇರೆಗೆ ನಟ ರಣವೀರ್ ಸಿಂಗ್ ಅವರು ಮಂಗಳವಾರ ಬೆಳಗ್ಗೆ ಮೈಸೂರಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಿದರು ಮತ್ತು ಕ್ಷಮೆ ಕೋರಿದ್ದಾರೆ.

ಕಾಂತಾರ–1 ಚಿತ್ರದಲ್ಲಿ ದೈವಕ್ಕೆ ಅಪಮಾನ ಮಾಡಿದ ಪ್ರಕರಣದಲ್ಲಿ ರಣವೀರ್ ಸಿಂಗ್ ಅವರು ಬೇಷರತ್ ಕ್ಷಮೆಯಾಚಿಸಿದ ನಂತರ ನಟನ ವಿರುದ್ಧದ ವಿಚಾರಣೆಯನ್ನು ಹೈಕೋರ್ಟ್ ಕಳೆದ ತಿಂಗಳು ರದ್ದುಗೊಳಿಸಿತ್ತು.

ಈ ಪ್ರಕರಣ ಸಂಬಂಧ ಹೈಕೋರ್ಟ್ ವಿಚಾರಣೆ ನಡೆಸುತ್ತಿದ್ದಾಗ, ರಣವೀರ್ ಸಿಂಗ್ ಸ್ವತಃ ಎಕ್ಸ್‌ನಲ್ಲಿ ಕ್ಷಮೆ ಕೇಳಿದ್ದರು. ಜೊತೆಗೆ ಚಾಮುಂಡೇಶ್ವರಿ ದೇವಾಲಯಕ್ಕೆ ಭೇಟಿ ನೀಡಿ ಕ್ಷಮೆ ಕೇಳುವುದಾಗಿ ತಿಳಿಸಿದ್ದರು. ಅದರಂತೆ ರಣವೀರ್ ಸಿಂಗ್ ಅವರು ಚಾಮುಂಡೇಶ್ವರಿ ಬೆಟ್ಟಕ್ಕೆ ತೆರಳಿ ಪೂಜೆ ಸಲ್ಲಿಸಿ, ಕ್ಷಮೆಯಾಚಿಸಿದ್ದಾರೆ.



**ಏನಿದು ಪ್ರಕರಣ:** ಗೋವಾ ಚಲನಚಿತ್ರೋತ್ಸವ ಕಾರ್ಯಕ್ರಮದಲ್ಲಿ ರಣವೀರ್ ಸಿಂಗ್ ಮಾತನಾಡಿ, ಕಾಂತಾರ ಸಿನಿಮಾವನ್ನ ಥಿಯೇಟರ್‌ನಲ್ಲಿ ನಾನು ನೋಡಿದೆ. ಅದ್ಭುತವಾಗಿತ್ತು ನಿಮ್ಮ ನಟನೆ. ಅದರಲ್ಲೂ ಹೆಣ್ಣು ದೆವ್ವ ನಿಮ್ಮ ಮೈಸೇರುವ ದೃಶ್ಯವಂತೂ ಅತ್ಯದ್ಭುತವಾಗಿತ್ತು. ಆ ದೃಶ್ಯದಲ್ಲಿ ನಿಮ್ಮ ನಟನೆ ಹಾಗೂ ನಿಮ್ಮ ನೋಟ ಮಜವಾಗಿತ್ತು ಎಂದಿದ್ದ ರಣವೀರ್ ಸಿಂಗ್ ಅನುಕರಣೆ ಮಾಡಿದ್ದರು. ರಣವೀರ್ ಮಾಡಿದ ಅಪಹಾಸ್ಯಕ್ಕೆ ದೈವಾರಾಧಕರು ಆಕ್ರೋಶ ಹೊರಹಾಕಿದ್ದರು. ನಂತರ ಅವರ ವಿರುದ್ಧ ದೂರು ದಾಖಲಾಗಿತ್ತು.

## ಅಪಘಾತ: ಮಗು ಸೇರಿ ಮೂವರು ಸಾವು

**ಬೆಳಗಾವಿ:** ರಿಕ್ಷಾ ಹಾಗೂ ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ ಮೂವರು ಸಾವನ್ನಪ್ಪಿರುವ ಹೃದಯವಿದ್ರಾವಕ ಘಟನೆ ರಾಯಬಾಗ ರೈಲು ನಿಲ್ದಾಣದ ಬಳಿ ನಡೆದಿದೆ.

ಮೃತರನ್ನು ರಾಯಬಾಗ ತಾಲೂಕಿನ ಬೊಮ್ಮನಾಳ ನಿವಾಸಿಗಳಾದ ಮಹಾಂತೇಶ್ ಮಾನೆ ಮತ್ತು ಅವರ ಪತ್ನಿ ಸಾಕ್ಷಿ ಮಾನೆ ಹಾಗೂ 6 ತಿಂಗಳ ಮಗು ಎಂದು ಗುರುತಿಸಲಾಗಿದೆ. ಪತಿ, ಪತ್ನಿ ಹಾಗೂ ಮಗು ಬೈಕ್‌ನಲ್ಲಿ ತೆರಳುತ್ತಿದ್ದರು. ಈ ವೇಳೆ ರಿಕ್ಷಾ ಹಾಗೂ ಬೈಕ್ ನಡುವೆ ಅಪಘಾತ ಸಂಭವಿಸಿದೆ. ಪರಿಣಾಮ ಮೂವರು ಸಾವನ್ನಪ್ಪಿದ್ದಾರೆ.

## ಕಂದಾಯ ನಿರೀಕ್ಷಕ ಅಮಾನತು


**ಮೈಸೂರು:** ಸರ್ಕಾರಿ ಆಸ್ತಿಯನ್ನು ಖಾಸಗಿಯವರಿಗೆ ಇ–ಖಾತೆ ಮಾಡಿಕೊಟ್ಟಿದ್ದ ಆರೋಪ ಹೊತ್ತಿದ್ದ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಕಂದಾಯ ನಿರೀಕ್ಷಕ ಮಂಜುನಾಥ್ ರನ್ನು ಪೌರಾಡಳಿತ ನಿರ್ದೇಶನಾಲಯವು ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದೆ.

ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಕಂದಾಯ ನಿರೀಕ್ಷಕ ಮಂಜುನಾಥ್ ಪಟ್ಟಣ ಪಂಚಾಯಿತಿ ಕಚೇರಿ ಸ್ಥಳಾಂತರ ಹಾಗೂ ಸಾರ್ವಜನಿಕರಿಗೆ ಸಹಕರಿಸದಿರುವ ಬಗ್ಗೆ ಹಾಗೂ ಸರ್ಕಾರಿ ಆಸ್ತಿಯನ್ನು ಕಾನೂನು ಬಾಹಿರವಾಗಿ ಬೇರೊಬ್ಬರಿಗೆ ನೊಂದಣಿ ಮಾಡಿರುವ ಬಗ್ಗೆ ಸಾರ್ವಜನಿಕರಿಂದ ದೂರು ನೀಡಿದ್ದರು.

ಈ ಹಿನ್ನೆಲೆಯಲ್ಲಿ ನಗರಪಾಲಿಕೆ ಉಪ ಆಯುಕ್ತರಿಗೆ ಪತ್ರ ಬರೆದಿದ್ದ ಮೈಸೂರು ಜಿಲ್ಲಾಧಿಕಾರಿ ಡಾ.ಲಕ್ಷ್ಮಿಕಾಂತ ರೆಡ್ಡಿ ವರದಿ ನೀಡುವಂತೆ ಸೂಚನೆ ನೀಡಿದ್ದರು. ಅವರು ನೀಡಿದ ವರದಿಯ ಆಧಾರದ ಮೇರೆಗೆ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಹೇಶ್ ಹಾಗೂ ಕಂದಾಯ ನಿರೀಕ್ಷಕ ಮಂಜುನಾಥ್ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಶಿಫಾರಸ್ಸು ಮಾಡಿದ್ದರು. ಪುಟ 2ಕ್ಕೆ

## ಕಚ್ಚಾತೈಲ ಬೆಲೆ ಇಳಿಕೆ ಆದರೂ ಇಂಧನ ಬೆಲೆ ಇಳಿಸಿಲ್ಲ: ಖರ್ಗೆ ಕಿಡಿ

**ನವದೆಹಲಿ:** ದೇಶದಲ್ಲಿ ಇಂಧನ ದರ ನಿರಂತರವಾಗಿ ಏರಿಕೆಯಾಗುತ್ತಿರುವ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.



ಕಳೆದ 12 ವರ್ಷಗಳಲ್ಲಿ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಕುಸಿದಿದ್ದರೂ ಅದರ ಲಾಭವನ್ನು ಜನರಿಗೆ ನೀಡಿ ಏಕೆ ಪರಿಹಾರ ಒದಗಿಸಿಲ್ಲ ಎಂದು ಅವರು ಪ್ರಶ್ನಿಸಿದ್ದಾರೆ.

12 ವರ್ಷಗಳ ಹಿಂದೆ 2014ರ ಮೇ 26ರಂದು ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರ ವಹಿಸಿಕೊಂಡಾಗ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ 108.05 ಡಾಲರ್ ಇತ್ತು. ಆಗ ಡಾಲರ್ ಎದುರು ರೂಪಾಯಿ ಮೌಲ್ಯ 58.59 ಇತ್ತು. ಆ ಸಮಯದಲ್ಲಿ ದೇಶದಲ್ಲಿ ಪೆಟ್ರೋಲ್ ದರ ಲೀಟರ್‌ಗೆ 71.51 ಮತ್ತು ಡೀಸೆಲ್ ದರ 56.71 ಇತ್ತು ಎಂದು ನೆನಪಿಸಿದ್ದಾರೆ.

ಆದರೆ ಇಂದು ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ 99 ಡಾಲರ್ ಗಿಂತಲೂ ಕೆಳಗಿದೆ. ಹೀಗಿದ್ದರೂ ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ಕ್ರಮವಾಗಿ ಲೀಟರ್‌ಗೆ 111 ಮತ್ತು 105ಕ್ಕೆ ಏರಿಕೆಯಾಗಿವೆ. ಕಚ್ಚಾ ತೈಲ ಅಗ್ಗವಾಗಿದ್ದರೂ ಪೆಟ್ರೋಲ್ ಶೇ 42.8ರಷ್ಟು ಪುಟ 2ಕ್ಕೆ

## ಮೇಕೆದಾಟು ಯೋಜನೆ: ರಾಜ್ಯಕ್ಕೆ ಶುಭಸುದ್ದಿ–ಡಿಕೆಶಿ

**ನವದೆಹಲಿ:** ಮೇಕೆದಾಟು ಯೋಜನೆ ವಿರೋಧಿಸಿ ತಮಿಳುನಾಡು ಸಲ್ಲಿಸಿದ್ದ ಪುನರ್ ಪರಿಶೀಲನಾ ಅರ್ಜಿಯನ್ನು ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ವಜಾಗೊಳಿಸಿದೆ. ಇದು ಕರ್ನಾಟಕ ಪಾಲಿಗೆ ಶುಭಸುದ್ದಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.



ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಮಂಗಳವಾರ ಪ್ರತಿಕ್ರಿಯೆ ನೀಡಿದರು. ಸುಪ್ರೀಂ ಕೋರ್ಟ್ ಈ ಹಿಂದಿನ ಆದೇಶದಲ್ಲೇ ನಮಗೆ ಸ್ಪಷ್ಟ ಸೂಚನೆ ನೀಡಿದೆ. ತಮಿಳುನಾಡಿನ ಪಾಲಿನ 177 ಟಿಎಂಸಿ ನೀರನ್ನು ಹರಿಸಬೇಕು ಎಂದು ಷರತ್ತು ವಿಧಿಸಿದೆ. ಈಗ ಈ ಯೋಜನೆ ಕುರಿತು ತೀರ್ಮಾನ ಮಾಡಬೇಕಿರುವುದು ಕೇಂದ್ರ ಸರ್ಕಾರ. ನಾವು ಪರಿಷ್ಕೃತ ಡಿಪಿಆರ್ ಸಲ್ಲಿಕೆ ಪ್ರಕ್ರಿಯೆಯಲ್ಲಿದ್ದೇವೆ ಎಂದರು.

# ಮೇಕೆದಾಟುಗೆ ಸಿಎಂ ವಿಜಯ್ ಅಡ್ಡಗಾಲು


## ಯೋಜನೆಗೆ ಅನುಮತಿ ನೀಡದಂತೆ ಪ್ರಧಾನಿ ಮೋದಿಗೆ ಪತ್ರ ಬರೆದು ಆಗ್ರಹ

**ಚೆನ್ನೈ:** ಕರ್ನಾಟಕ ಸರ್ಕಾರ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಜಲಾಶಯ ಯೋಜನೆಯ ಭೂಮಿ ಪೂಜೆ ಘೋಷಣೆಗೆ ತಮಿಳುನಾಡು ಸರ್ಕಾರ ಆಕ್ಷೇಪ ವ್ಯಕ್ತಪಡಿಸಿದೆ.

ಈ ಯೋಜನೆಗೆ ಅನುಮತಿ ನೀಡಬಾರದು ಎಂದು ಒತ್ತಾಯಿಸಿ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಅವರು, ಕರ್ನಾಟಕದ ಭೂಮಿ ಪೂಜೆ ಘೋಷಣೆಯು ಕಾವೇರಿ ನದಿಯನ್ನೇ ನಂಬಿಕೊಂಡಿರುವ ತಮಿಳುನಾಡಿನ ಲಕ್ಷಾಂತರ ರೈತರಲ್ಲಿ ಭಾರಿ ಆತಂಕ ಮೂಡಿಸಿದೆ ಎಂದು ವಿಜಯ್ ಪತ್ರದಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ.







ತಮಿಳುನಾಡು ಒಪ್ಪಿಗೆ ಪಡೆಯದೆ ಯಾವುದೇ ಹೊಸ ಯೋಜನೆಯನ್ನು ಕೈಗೆತ್ತಿಕೊಳ್ಳದಂತೆ ಕರ್ನಾಟಕ ಸರ್ಕಾರಕ್ಕೆ ಸೂಕ್ತ ಸೂಚನೆ ನೀಡಬೇಕು ಎಂದು ವಿಜಯ್ ಅವರು ಪ್ರಧಾನಿ ಮೋದಿಗೆ ಮನವಿ ಮಾಡಿದ್ದಾರೆ. ಮೇಕೆದಾಟು ಯೋಜನೆ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ತಿರಸ್ಕರಿಸುವಂತೆ ಕೇಂದ್ರ ಜಲಶಕ್ತಿ ಸಚಿವಾಲಯ ಮತ್ತು ಕೇಂದ್ರ ಜಲ ಆಯೋಗದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕೆಂದು ಪತ್ರದ ಮೂಲಕ ಒತ್ತಾಯಿಸಿದ್ದಾರೆ.

ಹೊಸ ಜಲಾಶಯಕ್ಕೆ ಅವಕಾಶವಿಲ್ಲ: ಕಾವೇರಿ ಜಲಾನಯನ ಪ್ರದೇಶವು ಈಗಾಗಲೇ ನೀರಿನ ಕೊರತೆಯನ್ನು ಎದುರಿಸುತ್ತಿದೆ. ಲಭ್ಯವಿರುವ ನೀರನ್ನು ಈಗಾಗಲೇ ಶೇ.50ರಷ್ಟು ಅವಲಂಬನೆಯ ಆಧಾರದ ಮೇಲೆ ಹಂಚಿಕೆ ಮಾಡಲಾಗಿದೆ. ಆದ್ದರಿಂದ ಹೊಸದಾಗಿ ಬೃಹತ್ ಸಂಗ್ರಹಣಾ ಜಲಾಶಯ ನಿರ್ಮಿಸಲು ಯಾವುದೇ ಕಾನೂನು ಅವಕಾಶವಿಲ್ಲ ಎಂದು ಸಿಎಂ ವಿಜಯ್ ತಿಳಿಸಿದ್ದಾರೆ.

## ಮೇಕೆದಾಟು ತಡೆಯುವುದು ವಿಜಯ್‌ಗೆ ಅಸಾಧ್ಯ: ಗಣಿಗ

**ಮಂಡ್ಯ:** ತಮಿಳುನಾಡಿನಲ್ಲಿ ವಿಜಯ್ ಅವರಂಥ ನೂರು ಮಂದಿ ಸಿಎಂ ಆದರೂ ಸಹ ನಾವು ಮೇಕೆದಾಟು ಜಲಾಶಯ ಕಟ್ಟೋದನ್ನು ತಡೆಯಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ಶಾಸಕ ಗಣಿಗ ರವಿಕುಮಾರ್ ಕಿಡಿಕಾರಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ನಾವು ಮೇಕೆದಾಟು ಯೋಜನೆಯ ಡಿಪಿಆರ್ ಅನ್ನು ಸಿದ್ಧಪಡಿಸಿದ್ದೇವೆ. ಅಲ್ಲದೇ ಸುಪ್ರೀಂಕೋರ್ಟ್ ಸಹ ಕಾವೇರಿ ಬೋರ್ಡ್‌ನಲ್ಲಿ ತೀರ್ಮಾನ ಮಾಡಿಕೊಳ್ಳಿ ಎಂದು ಹೇಳಿದೆ.

ನಮ್ಮ ಪರವಾಗಿ ಸುಪ್ರೀಂ ಕೋರ್ಟ್ ಆದೇಶ ನೀಡಿದೆ. ಅದರಂತೆ ನಾವು ಡಿಪಿಆರ್‌ನ್ನು ಸಿದ್ಧತೆ ಮಾಡಿಕೊಂಡಿದ್ದೇವೆ. ಇದೀಗ ಮೇಕೆದಾಟು ವಿಚಾರದಲ್ಲಿ ಕಾನೂನು ಹೋರಾಟ ಮಾಡುವುದಾಗಿ ವಿಜಯ್ ಹೇಳಿದ್ದಾರೆ. ತಮಿಳುನಾಡಿಗೆ ಅವರ ಪಾಲಿನ ನೀರನ್ನು ನಾವು ಕೊಡ್ತಾ ಇದೀವಿ. ನಮ್ಮ ಜಾಗದಲ್ಲಿ ಡ್ಯಾಂ ಕಟ್ಟುವುದನ್ನು ತಡೆಯುವ ಹಕ್ಕು ಅವರಿಗಿಲ್ಲ ಎಂದು ಹೇಳಿದರು.

ಬಿಜೆಪಿ ನಾಯಕರು ಯಾವಾಗಲೂ ರಾಜಕೀಯವಾಗಿ ಮಾತನಾಡುತ್ತಾರೆ ಅಷ್ಟೇ. ಗೋವಾದಲ್ಲಿ ಅವರದ್ದೇ ಸರ್ಕಾರ ಇದೆ. ಆದರೂ ಕಳಸ ಬಂಡೂರಿಗೆ ಅವಕಾಶ ಕೊಡಿಸಲು ಪುಟ 2ಕ್ಕೆ

## ಮೊದಲನೇ ಪುಟದಿಂದ

### ಮೇಕೆದಾಟು ತಡೆಯುವುದು ವಿಜಯ್‌ಗೆ ಅಸಾಧ್ಯ: ಗಣಿಗ

ಆಗುತ್ತಿಲ್ಲ. ಆಯಾ ರಾಜ್ಯಗಳಲ್ಲಿ ಅವರ್ ರಾಜಕಾರಣ ಮಾಡ್ತಾರೆ ಅಷ್ಟೇ. ಯಾರು ಏನೇ ಮಾಡಲಿ ಮೇಕೆದಾಟು ಡ್ಯಾಂ ಕಟ್ಟುವುದನ್ನು ತಡೆಯೋಕೆ ಸಾಧ್ಯವಿಲ್ಲ ಎಂದು ತಿಳಿಸಿದರು.

### ಕಚ್ಚಾತೈಲ ಬೆಲೆ ಇಳಿಕೆ ಆದರೂ ಇಂಧನ ಬೆಲೆ ಇಳಿಸಿಲ್ಲ: ಖರ್ಗೆ ಕಿಡಿ

ಮತ್ತು ಡೀಸೆಲ್ ಶೇ 67.9ರಷ್ಟು ಹೆಚ್ಚಿಸಲಾಗಿದೆ ಎಂದು ಖರ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಗುಟ್ಟುಬಿಡದ ಕೈ ಹೈಕಮಾಂಡ್: ನಾಯಕತ್ವ ಚರ್ಚೆಯೇ ನಡೆದಿಲ್ಲ!

ಗಾಂಧಿ ನೇತೃತ್ವದಲ್ಲಿ ಮಹತ್ವದ ಸಭೆ ನಡೆಸಿದ್ದೇವೆ. ಈ ಉನ್ನತ ಮಟ್ಟದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ನಾನು ಭಾಗವಹಿಸಿದ್ದೆವು.

ಸಭೆಯಲ್ಲಿ ಕೇವಲ ಮುಂಬರುವ ವಿಧಾನ ಪರಿಷತ್ ಚುನಾವಣೆ ಮತ್ತು ರಾಜ್ಯಸಭಾ ಚುನಾವಣೆಗೆ ಸಂಬಂಧಿಸಿದಂತೆ ಮಾತ್ರ ಸುದೀರ್ಘವಾಗಿ ಚರ್ಚೆ ನಡೆಸಲಾಗಿದೆ. ಅಭ್ಯರ್ಥಿಗಳ ಆಯ್ಕೆ ಮತ್ತು ಚುನಾವಣಾ ಕಾರ್ಯತಂತ್ರಗಳ ಬಗ್ಗೆ ಮಾತ್ರ ಮಾತುಕತೆಯಾಗಿದೆ.

ರಣದೀಪ್ ಸಿಂಗ್ ಸುರ್ಜೆವಾಲಾ ಅವರು ಮಾಧ್ಯಮಗಳ ಯಾವುದೇ ಪ್ರಶ್ನೆಯನ್ನು ತೆಗೆದುಕೊಳ್ಳುವುದಿಲ್ಲ ಎಂದು ಸುದ್ದಿಗೋಷ್ಠಿ ಆರಂಭದಲ್ಲೇ ತಿಳಿಸಿದ್ದರು. ವೇಣುಗೋಪಾಲ್ ಹೇಳಿಕೆ ಮುಗಿದ ಬೆನ್ನಲ್ಲೇ ಮಾಧ್ಯಮಗಳು ಪ್ರಶ್ನೆ ಕೇಳಿದ್ದಕ್ಕೆ ನಾಯಕರು ಯಾವುದೇ ಪ್ರತಿಕ್ರಿಯೆ ನೀಡದೇ ತೆರಳಿದರು.

### ಡಿಕೆಶಿ ಮೂರು ಷರತ್ತು: 'ಹೈಕಮಾಂಡ್ ತಬ್ಬಿಬ್ಬು'

ತಿಳಿಸಿವೆ. ಡಿಕೆಶಿ ಅವರ ಈ ಖಡಕ್ ನಿಲುವು ಈಗ ಹೈಕಮಾಂಡ್ ನಾಯಕರನ್ನೂ ಧರ್ಮಸಂಕಟಕ್ಕೆ ಸಿಲುಕಿಸಿದೆ.

ಡಿಕೆಶಿ ಷರತ್ತು 1: ಸರ್ಕಾರ ರಚನೆಯಾಗುವಾಗ ಅಧಿಕಾರ ಹಂಚಿಕೆ ವಿಚಾರದಲ್ಲಿ ಏನು ಮಾತುಕತೆಯಾಗಿತ್ತೋ, ಆ ಮಾತನ್ನು ಸಿಎಂ ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ಇಬ್ಬರೂ ಉಳಿಸಿಕೊಳ್ಳಬೇಕು. ಕಾಲಮಿತಿ ಮುಗಿದಿದ್ದು, ಈಗ ನಾಯಕತ್ವ ಬದಲಾವಣೆ ಆಗಲೇಬೇಕು.

ಷರತ್ತು 2: ಅದು ಸಾಧ್ಯವಿಲ್ಲ ಎನ್ನುವುದಾದರೆ ಬಹಿರಂಗವಾಗಿ ಘೋಷಿಸಿ ಗೊಂದಲಕ್ಕೆ ತೆರೆ ಎಳೆಯಿರಿ. ಒಂದು ವೇಳೆ ಸಿದ್ದರಾಮಯ್ಯ ಅವರನ್ನೇ ಸಿಎಂ ಆಗಿ ಮುಂದುವರಿಸಲು ನಿರ್ಧರಿಸಿದ್ದರೆ ಮತ್ತು ಕೊಟ್ಟ ಮಾತು ಈಡೇರಿಸಲು ಸಾಧ್ಯವಿಲ್ಲ ಎಂಬುದನ್ನು ಹೈಕಮಾಂಡ್ ಹಾಗೂ ಸಿಎಂ ಇಬ್ಬರೂ ಜಂಟಿಯಾಗಿ ಮಾಧ್ಯಮಗಳ ಮುಂದೆ ಬಹಿರಂಗವಾಗಿ ಒಪ್ಪಿಕೊಳ್ಳಲಿ. ದಿನನಿತ್ಯದ ಈ ಗೊಂದಲಕ್ಕೆ ಮತ್ತು ಕಾರ್ಯಕರ್ತರ ಆತಂಕಕ್ಕೆ ತಕ್ಷಣ ತೆರೆ ಎಳೆಯಿರಿ.

ಷರತ್ತು 3: ನನಗೆ ಯಾವ ಹುದ್ದೆಯೂ ಬೇಡ, ಸಾಮಾನ್ಯ ಕಾರ್ಯಕರ್ತನಾಗಿರುತ್ತೇನೆ. ನನಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನವೂ ಬೇಡ, ಉಪಮುಖ್ಯಮಂತ್ರಿ ಪಟ್ಟವೂ ಬೇಡ. ಎರಡೂ ಸ್ಥಾನಗಳಿಗೂ ನಾನು ರಾಜೀನಾಮೆ ನೀಡಲು ಸಿದ್ಧ. ನಾನು ಸಾಮಾನ್ಯ ಕಾರ್ಯಕರ್ತನಾಗಿ ಪಕ್ಷದ ಕೆಲಸ ಮಾಡುತ್ತೇನೆ ಎಂದು ತಿರುಗೇಟು ನೀಡಿದ್ದಾರೆ ಎನ್ನಲಾಗಿದೆ.

### ಕುರ್ಚಿ ಕಚ್ಚಾಟಕ್ಕೆ 'ಸ್ಮಾಲ್ ಬ್ರೇಕ್'

ವರೆಗೂ ಸುದೀರ್ಘವಾಗಿ ನಡೆಯಿತು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಮತ್ತು ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಸರಣಿ ಚರ್ಚೆ ನಡೆಸಿದರು. ಈ ನಡುವೆ ರಾಹುಲ್ ಗಾಂಧಿ ಅವರು ಸಿಎಂ ಮತ್ತು ಡಿಸಿಎಂ ಜೊತೆ ಪ್ರತ್ಯೇಕವಾಗಿ ಒನ್ ಟು ಒನ್ ಮೀಟಿಂಗ್ ನಡೆಸಿ ಮಹತ್ವದ ಸಂದೇಶ ರವಾನಿಸಿದ್ದಾರೆ.

### 'ದ್ವೇಷ ಭಾಷಣ ತಡೆ'ಗೆ ಅಡಗಾಲು

ಈ ನಿಟ್ಟಿನಲ್ಲಿ, ಪರಿಹರಿಸಬೇಕಾದ ಸಮಸ್ಯೆಗಳು ಈಗಾಗಲೇ ಭಾರತೀಯ ನ್ಯಾಯ ಸಂಹಿತಾ, 2023 ಮತ್ತು ಇತರ ಚಾಲ್ತಿಯಲ್ಲಿರುವ ಕಾನೂನುಗಳ ಅಡಿಯಲ್ಲಿ ಗಣನೀಯವಾಗಿ ಸೇರಿಕೊಂಡಿವೆ. ಹೀಗಿರುವಾಗ ರಾಜ್ಯ ಸರ್ಕಾರವು ಪ್ರತ್ಯೇಕ ಕಾನೂನು ಜಾರಿಗೆ ತರುವುದರಿಂದ ನಕಲು ಮತ್ತು ಏಕರೂಪತೆಯ ಕೊರತೆ ಉಂಟಾಗಬಹುದು ಎಂದು ಗೃಹ ಸಚಿವಾಲಯ (ಸಿಎಸ್ ವಿಭಾಗ) ಪತ್ರದಲ್ಲಿ ತಿಳಿಸಿದೆ. ಈ ಹಂತದಲ್ಲಿ ಪ್ರಸ್ತಾವಿತ ಮಸೂದೆಯ ಅಗತ್ಯವಿಲ್ಲ ಮತ್ತು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟು ಸಮಸ್ಯೆಗಳನ್ನು ಪರಿಹರಿಸಲು ಸಾಕಾಗುತ್ತದೆ ಎಂದು ಕೇಂದ್ರ ಹೇಳಿದೆ.

ಕರ್ನಾಟಕ ಸಂಸದೀಯ ವ್ಯವಹಾರಗಳು ಮತ್ತು ಶಾಸನ ಇಲಾಖೆಯ ಕಾರ್ಯದರ್ಶಿಗೆ ಮೇ 20 ರಂದು ಪತ್ರ ಬರೆದಿರುವ ಕೇಂದ್ರ ಗೃಹ ಸಚಿವಾಲಯದ ಕಾನೂನು ವಿಭಾಗ, ಈ ಮಸೂದೆಯ ಕುರಿತು ಮುಂದಿನ ಕ್ರಮ ಕೈಗೊಳ್ಳುವ ಸ್ಪಷ್ಟೀಕರಣವನ್ನು ನೀಡುವಂತೆ ಸೂಚಿಸಿದೆ.

ಈ ಮಸೂದೆಯು ದ್ವೇಷ ಭಾಷಣಕ್ಕೆ 1 ಲಕ್ಷ ರೂಪಾಯಿಗಳವರೆಗೆ ದಂಡ ಮತ್ತು ಏಳು ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಲು ಅವಕಾಶ ನೀಡುತ್ತದೆ.

### ಕಂದಾಯ ನಿರೀಕ್ಷಕ ಅಮಾನತು

ಮುಖ್ಯಾಧಿಕಾರಿ ಮಹೇಶ್ ಶ್ರೇಣಿ-1ರ ವ್ಯಾಪ್ತಿಗೆ ಬರುವುದರಿಂದ ಅವರ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ಪಿ.ಎನ್.ರವೀಂದ್ರ, ಕಂದಾಯ ನಿರೀಕ್ಷಕ ಮಂಜುನಾಥ್‌ರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಅಲ್ಲದೆ ತಕ್ಷಣದಿಂದ ಜಾರಿಗೆ ಬರುವಂತೆ ಮಂಜುನಾಥ್ ಸೇವೆ ಸ್ಥಾನ ಬದಲಾವಣೆ ಮಾಡಲಾಗಿದ್ದು, ಹಾಸನ ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ಪ್ರಥಮ ದರ್ಜೆ ಸಹಾಯಕ ಹುದ್ದೆಗೆ ವರ್ಗಾಯಿಸಲಾಗಿದೆ.

# ಭೋವಿ ಸಮುದಾಯಕ್ಕೆ 11 ಗ್ಯಾರಂಟಿ!

## ರಾಜ್ಯ ಸರ್ಕಾರದಿಂದ ಕೊಡುಗೆ | ಸಮರ್ಪಕ ಬಳಕೆ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ರಾಮಪ್ಪ ಮನವಿ

**ಮೈಸೂರು:** ರಾಜ್ಯ ಸರ್ಕಾರ ಭೋವಿ ಸಮುದಾಯಕ್ಕೆ 11 ಗ್ಯಾರಂಟಿಯನ್ನು ನೀಡಿದ್ದು ಇದನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ರಾಮಪ್ಪ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಅಬ್ದುಲ್ ನಾಜೀರ್ ಸಭಾಂಗಣದಲ್ಲಿ ನಿಗಮದ ಪ್ರಗತಿ ಪರಿಶೀಲನಾ ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 11 ಜಿಲ್ಲೆಯಲ್ಲಿ ಮಾತ್ರ ನಿಗಮದ ಕಚೇರಿ ಇದ್ದದ್ದನ್ನು ಈಗ ಮೈಸೂರು ಹಾಗೂ ಬೆಳಗಾವಿಯಲ್ಲೂ ಕಚೇರಿ ತೆರೆಯಲು ಸಿಎಂ ಗೆ ಮನವಿ ಮಾಡಿದ್ದೇನೆ. ನಿಗಮಕ್ಕೆ 93.75 ಕೋಟಿ ರೂ. ಅನುದಾನ ನೀಡಿದ್ದಾರೆ. ನಿಗಮದ ಮೂಲಕ ನೇರಸಾಲ, ಗಂಗಾ ಕಲ್ಯಾಣಯೋಜನೆ, ಮಹಿಳಾ ಸಬಲೀಕರಣ ಯೋಜನೆ, ಭೂ ಒಡೆತನ ಯೋಜನೆ ಸ್ವಾವಲಂಬನೆ ಸಾರಥಿ ಯೋಜನೆ ಎಂಬ ಆರು ಯೋಜನೆ ನೀಡಿದ್ದಾರೆ. ಇದರೊಟ್ಟಿಗೆ ಸೆಂಟ್ರಿಂಗ್ ಸಾಮಾನು, ಕಾರಿನ ಬದಲಿಗೆ ಗೂಡ್ಸ್ ವಾಹನಕ್ಕೆ ಪ್ರಾತಿನಿಧ್ಯ ನೀಡಿದ್ದೇವೆ. ಟ್ರ್ಯಾಕ್ಟರ್ ಗಳನ್ನು ಕೊಡಬೇಕೆಂದು ತೀರ್ಮಾನ ಮಾಡಿದ್ದೇವೆ. ಪ್ರತಿ ಜಿಲ್ಲೆಯಲ್ಲೂ ಜಾತಿ ಪ್ರಮಾಣ ಪತ್ರಕ್ಕೂ ವಿಳಂಬ ಆಗುತ್ತಿದೆ. ಅದನ್ನು ಸರಿಪಡಿಸಲು ಸೂಚಿಸಿದ್ದೇನೆಂದರು.

ಕಳೆದ ಆರು ತಿಂಗಳಲ್ಲಿ ಮೈಸೂರಿನಲ್ಲಿ ಟೇಲರಿಂಗ್ ಕಾರ್ಯಕ್ರಮ ಮಾಡಿದ್ದು, ಚಿತ್ರದುರ್ಗದಲ್ಲಿಯೂ 120 ಮಂದಿಗೆ ತರಬೇತಿ ನೀಡಿದ್ದೇವೆ. ರಾಷ್ಟ್ರೀಯ ಕಾನೂನು ಕಾಲೇಜಿನಲ್ಲಿ ಯುವಕರಿಗೆ ಜಾಗೃತಿ, ಧಾರವಾಡದಲ್ಲಿಯೂ ಕಾರ್ಯಾಗಾರ ಮಾಡುತ್ತಿದ್ದೇವೆಂದರು. ಶಿಕ್ಷಣ ಒಂದರಿಂದಲೇ ಬದಲಾವಣೆ ಸಾಧ್ಯ. ಈ ಕಾರಣಕ್ಕಾಗಿ ಪ್ರತಿ ಜಿಲ್ಲೆಯಲ್ಲೂ ಉದ್ಯೋಗ, ಉದ್ಯಮಿಯಾಗುವ ಕುರಿತು ತರಬೇತಿ ಕಾರ್ಯಾಗಾರ ನಡೆಸಲು ತೀರ್ಮಾನಿಸಲಾಗಿದೆ. ಅಲ್ಲದೆ, ನಿಗಮಕ್ಕೆ 300 ಕೋಟಿ ಬೇಡಿಕೆಯಿಟ್ಟಿದ್ದು,



ಇದರ ಬಳಕೆ ಬಳಿಕ ನೀಡುವುದಾಗಿ ತಿಳಿಸಿದ್ದು, ತ್ವರಿತವಾಗಿ ಅನುದಾನ ಬಳಕೆಗೆ ಕ್ರಮವಹಿಸಲಾಗಿದೆ. ಹಿಂದೆ 62 ಕೋಟಿ ರೂ. ಅಕ್ರಮ ಹಣ ದುರುಪಯೋಗದ ಬಗ್ಗೆ ಈಗಾಗಲೇ ಡಿಐಜಿ, ಗೃಹ ಸಚಿವರಿಗೂ ಪತ್ರಬರೆದು ತನಿಖೆಗೆ ಕೋರಿದ್ದೇನೆಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಆರ್. ಐಶ್ವರ್ಯ, ಉಪ ಪೊಲೀಸ್ ಆಯುಕ್ತೆ ಕರ್ನಾಟಕ ಕಾನೂನು ಸುವ್ಯವಸ್ಥೆ ಡಿಸಿಪಿ ಹರ್ಷ ಪ್ರಿಯಂವದ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಭೀಮಪ್ಪ ಕೆ.ಲಾಳಿ, ಚೆಸ್ಕಾಂ ಚೀಫ್ ಇಂಜಿನಿಯರ್ ಸುನೀಲ್ ಮತ್ತಿತರರು ಉಪಸ್ಥಿತರಿದ್ದರು.

## ಮಹಿಳೆಯರನ್ನು ಒಟ್ಟುಗೂಡಿಸಿ ಸಂಘ ರಚಿಸಿ: ರಾಮಪ್ಪ

**ಮೈಸೂರು:** ಭೋವಿ ಜನಾಂಗದ ಮಹಿಳೆಯರನ್ನು ಒಟ್ಟುಗೂಡಿಸಿ ಸಂಘ ರಚಿಸಿ, ಅವರಿಗೆ ಸರ್ಕರದ ಸಾಲ ಯೋಜನೆಗಳನ್ನು ಒದಗಿಸಿ ಅವರನ್ನು ಆರ್ಥಿಕವಾಗಿ ಸದೃಢರನ್ನಾಗಿ ಮಾಡಬಹುದು ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ ಎಂ ಅವರು ತಿಳಿಸಿದರು.

ಮೈಕ್ರೋ ಕ್ರೆಡಿಟ್ ಯೋಜನೆಯಡಿ ಭೋವಿ ಜನಾಂಗದ ಕನಿಷ್ಠ 10 ಮಹಿಳಾ ಸದಸ್ಯರಿರುವ ಮಹಿಳಾ ಸ್ವಸಹಾಯ ಸಂಘಗಳಿಗೆ ಉತ್ಪದನಾ ಚಟುವಟಿಕೆಗೆ 2.50 ಲಕ್ಷ ಸಹಾಯಧನ ಮತ್ತು 2.50 ಲಕ್ಷ ಸಾಲ ವಾಗಿರುತ್ತದೆ. ಭೋವಿ ಜನಾಂಗದ ಹೆಣ್ಣು ಮಕ್ಕಳು ಈ ಯೋಜನೆ ಪಡೆಯಲು ಮುಂದೆ ಬರಬೇಕು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಭೋವಿ ಜನಾಂಗದ ಮುಂಡರು ಮಹಿಳೆ ಯರಿಗೆ ಮಾಹಿತಿ ನೀಡಿ ಅವರನ್ನು ಯೋಜನೆ ಪಡೆದುಕೊಳ್ಳುವಂತೆ ಪ್ರೇರೇಪಿಸಬೇಕು ಎಂದರು.

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಚಂದ್ರ ನಾಯಕ್ ಮಾತನಾಡಿ ಭೋವಿ ಅಭಿವೃದ್ಧಿ ನಿಗಮವನ್ನು 2016ರಲ್ಲಿ ಸ್ಥಾಪನೆ ಮಾಡಲಾಯಿತು. ನಿಗಮದಿಂದ ಸೌಲಭ್ಯ ಪಡೆಯಲು ಭೋವಿ, ಒಡ್, ಒಡ್ಡೆ, ಒಡ್ಡರ್, ವಡ್ಡರ್, ವಡ್ಡರ, ಕಲ್ಲು ಒಡ್ಡರ, ಗೋವಿ(ನಾನ್ ಗೋಸ್ಟ್), ಮಣ್ಣು ವಡ್ಡರ ಒಟ್ಟು 9 ಜಾತಿಗಳಿಗೆ ಸೇರಿದ ವ್ಯಕ್ತಿಗಳಾಗಿರಬೇಕು. ವಿವಿಧ ರೀತಿಯ ಸಾಲ ಸೌಲಭ್ಯ ಒದಗಿಸಿ ಅವರ ಆರ್ಥಿಕ ಮಟ್ಟ ಸುಧಾರಿಸುವುದು ನಿಗಮದ ಉದ್ದೇಶವಾಗಿದೆ. ಇದಲ್ಲದೇ ಸಮಾಜ ಕಲ್ಯಾಣ ಇಲಾಖೆ ಹಾಗೂ ಇತರೆ ಇಲಾಖೆಯ ಎಸ್.ಸಿಎಸ್.ಪಿ ಯೋಜನೆಯಡಿ ರೂಪಿಸಿರುವ ಸೌಲಭ್ಯಗಳನ್ನು ಸಹ ಪಡೆಯಬಹುದು ಎಂದರು.

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಿಂದ ನೀಡಲಾಗುವ ಸ್ವಯಂ ಉದ್ಯೋಗ ನೇರಸಾಲ ಯೋಜನೆ,ಕುರಿ/ ಮೇಕೆ ಸಾಕಾಣಿಕೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜಬೆ, ಹೈನುಗಾರಿಕೆ, ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಭೂ ಒಡೆತನ ಯೋಜನೆಯ ಉಪಯುಕ್ತತೆಯ ಬಗ್ಗೆ ವಿವರಿಸಿದರು. ಮೈಸೂರು ಜಿಲ್ಲೆಯಲ್ಲಿ 14,376 ಗಂಡಸರು, 14202 ಮಹಿಳೆಯರು ಸೇರಿದಂತೆ ಒಟ್ಟು 28578 ಜನರಿದ್ದಾರೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್ ಮಾತನಾಡಿ ಈವರೆಗೆ ಬ್ಯಾಂಕನಿಂದ ಸಾಲ ಪಡೆಯದೇ ಇರುವ ಫಲಾನುಭವಿಗಳ ಸಿಬಿಲ್ ಸ್ಕೋರ್ ಶೂನ್ಯ ಇರುತ್ತದೆ ಇದು ಸಾಲ ಪಡೆಯಲು ಸಮಸ್ಯೆಯಾಗುವುದಿಲ್ಲ. ಭೋವಿ ನಿಗಮದವರು ಯೋಜನೆವಾರು ನೋಡಲ್ ಅಧಿಕಾರಿ ನೇಮಕ ಮಾಡಿ ಫಲಾನುಭವಿಗಳು ಹಾಗೂ ಬ್ಯಾಂಕ್ ನೊಂದಿಗೆ ಸಮನ್ವಯ ಕೆಲಸ ನಿರ್ವಹಿಸಬೇಕು. ಬ್ಯಾಂಕ್ ನಿಂದ ಸಾಲ ನೀಡಲು ನಿರಾಕರಣೆಯಾದರೆ ನಿಖರವಾದ ಕಾರಣ ಸಿಗುತ್ತದೆ ಹಾಗೂ ಸಮಸ್ಯೆ ಇದ್ದಲಿ ಸರಿಪಡಿಸಬಹುದು. ಶೇ100 ರಷ್ಟು ಗುರಿ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು.

## ಇಂದು ಅಂಬೇಡ್ಕರ್ ಪ್ರತಿಮೆಗೆ ಆಗ್ರಹಿಸಿ ಪ್ರತಿಭಟನೆ



**ಮೈಸೂರು:** ನಗರದ ಬಸವನಗುಡಿ ಉದ್ಯಾನದಲ್ಲಿ ವಿಶ್ವರತ್ನ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿ ಸ್ಥಾಪನೆಗೆ ಅನುಮತಿ ನೀಡಿಕೆ ವಿಷಯದಲ್ಲಿ ಪಾಲಿಕೆ ತಾರತಮ್ಯ ಧೋರಣೆ ಅನುಸರಿಸುತ್ತಿದೆ. ಹೀಗಾಗಿ ಇದನ್ನು ಖಂಡಿಸಿ ಮೇ 27 ರಂದು ಬೆಳಗ್ಗೆ 11ಕ್ಕೆ ಪಾಲಿಕೆ ಮುಂಭಾಗ ಕರ್ನಾಟಕ ರಾಜ್ಯ ಭೀಮ್ ಸೇನೆ ವತಿಯಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸುತ್ತಿದೆ ಎಂದು ಮಾಜಿ ಮೇಯರ್ ಪುರುಷೋತ್ತಮ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದೇ ಉದ್ಯಾನದಲ್ಲಿ ಕುವೆಂಪು ಪುತ್ಥಳಿ ಹಾಗೂ ಬಾಲ ಗಂಗಾಧರನಾಥ ಸ್ವಾಮೀಜಿಯವರ ಪುತ್ಥಳಿ ಸ್ಥಾಪನೆಗೆ ಅನುಮತಿ ನೀಡಿರುವ ಪಾಲಿಕೆ ಅಂಬೇಡ್ಕರ್ ಪುತ್ಥಳಿ ಸ್ಥಾಪನೆ ಕುರಿತು ತಾರತಮ್ಯ ಅನುಸರಿಸುತ್ತಿದೆ. ಹೀಗಾಗಿ ಈ ಪ್ರತಿಭಟನೆ ಅರಂಭಿಸುತ್ತಿದೆ. ಜೊತೆಗೆ ನಗರದಲ್ಲಿ ಹಲವಾರು ಕಡೆಗಳಲ್ಲಿ ಅನುಮತಿ ರಹಿತವಾಗಿ ಹಲವರ ಪ್ರತಿಮೆ ಸ್ಥಾಪಿಸಿದ್ದರೂ ಕ್ರಮ ಕೈಗೊಂಡಿಲ್ಲ. ಹೀಗಾಗಿ ಇವನ್ನು ಸಹಾ ತೆರವುಗೊಳಿಸಬೇಕೆಂದು ಈ ವೇಳೆ ಆಗ್ರಹಿಸಲಾಗುತ್ತಿದೆ ಎಂದರು.

ಇದಲ್ಲದೆ, ಜನಪ್ರತಿನಿಧಿಗಳು ಇಲ್ಲದ ಕಾರಣ ಪಾಲಿಕೆಯಲ್ಲಿ ಜನಸಾಮಾನ್ಯರ ಕೆಲಸ ಕಾರ್ಯಕ್ಕೆ ಜಡತ್ವ ಹಿಡಿದಿದೆ. ಎಲ್ಲ ವಲಯಗಳಲ್ಲಿಯೂ ಕೇವಲ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಇದಲ್ಲದೆ, ಕೇಂದ್ರ ಸರ್ಕಾರ ಸಹಾ ಇಂಧನ ದರ ಏರಿಸುವ ಮೂಲಕ ಜನಸಾಮಾನ್ಯರ ಮೇಲೆ ದೊಡ್ಡ ಪ್ರಹಾರ ಮಾಡಿದೆ. ಇದರ ವಿರುದ್ಧವೂ ಹೋರಾಟ ನಡೆಸಲಾಗುತ್ತದೆಂದರು. ಇನ್ನಿತರ ಮುಖಂಡರಾದ ಎಚ್. ಧರ್ಮರಾಜ, ಎಸ್. ಸರ್ವೇಶ್, ಕಿರಣ್, ಸಿದ್ದರಾಜು ಹಾಗೂ ಮಲ್ಲೇಶ್ ಇದ್ದರು.

## ವಾಸುದೇವಾಚಾರ್ಯರ ಜನ್ಮ ದಿನಾಚರಣಾ ಮಹೋತ್ಸವ

**ಮೈಸೂರು:** ಬಿಡಾರಂ ಕೃಷ್ಣಪ್ಪನವರ ಪ್ರಸನ್ನ ಸೀತಾರಾಮ ಮಂದಿರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮೇ28ರ ಬೆಳಗ್ಗೆ 10.30ಕ್ಕೆ ನಾರಾಯಣಶಾಸ್ತ್ರಿ ರಸ್ತೆಯ ಬಿಡಾರಂ ಕೃಷ್ಣಪ್ಪನವರ ರಾಮ ಮಂದಿರದಲ್ಲಿ ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯರ ಜನ್ಮ ದಿನಾಚರಣಾ ಮಹೋತ್ಸವ ಆಯೋಜಿಸಲಾಗಿದೆ ಎಂದು ಶಾಸಕ ಟಿ.ಎಸ್. ಶ್ರೀವತ್ಸ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾವೇ ಉದ್ಘಾಟಿಸಲಿದ್ದು, ನಾಡಿನ ಹೆಸರಾಂತ ಸಂಗೀತ ವಿದುಷಿಯವರಾದ ಡಾ.ಟಿ.ಎಸ್. ಸತ್ಯವತಿ ಮತ್ತು ವೃಂದದವರಿಂದ ವಾಸುದೇವ ವಾಗ್ಗೇಯ ವೈಭವ ಕಾರ್ಯಕ್ರಮವಿರಲಿದೆ. ಅರ್ಚನಾ ಭೋಜ್, ಶಿಲ್ಪಾ ಶಶಿಧರ್, ಅಂಜನಾ ಪಿ. ರಾವ್ ಮತ್ತು ಲಾವಣ್ಯ ಕೃಷ್ಣಮೂರ್ತಿ ಗಾಯನ ನಡೆಸಿಕೊಡಲಿದ್ದಾರೆ. ಪಿಟೀಲಿನಲ್ಲಿ ಅದಿತಿ ಕೃಷ್ಣ ಪ್ರಕಾಶ್, ಮೃದಂಗದಲ್ಲಿ ಪ್ರೊ.ಜಿ.ಎಸ್. ರಾಮಾನುಜಮ್ ಸಹಕರಿಸಲಿದ್ದಾರೆಂದರು. ಮೈಸೂರು ವಾಸುದೇವಾಚಾರ್ಯರು ನಾಡಿನ ಶ್ರೇಷ್ಠ ಸಂಗೀತಗಾರರಾಗಿದ್ದಾರೆ. ಹೀಗಾಗಿ ಸರ್ಕಾರದ ಸಹಯೋಗದಲ್ಲಿ ಅವರ ಸ್ಮರಣೆ ಈ ರೀತಿ ಆರಂಭವಾಗುತ್ತಿದೆ. ಕಾರ್ಯಕ್ರಮದಲ್ಲಿ ಅವರ ಕೃತಿಗಳ ವಿಶ್ಲೇಷಣೆಯೂ ನಡೆಯಲಿದೆ. ಇದಲ್ಲದೆ ಅಂದೇ ಸಂಜೆ ನಾದಬ್ರಹ್ಮ ಸಂಗೀತ ಸಭಾದಲ್ಲಿ ಸುಕನ್ಯಾ ಪ್ರಭಾಕರ್ ಅವರಿಂದ ಮೈಸೂರು ವಾಸುದೇವಾಚಾರ್ಯರ ಕೃತಿಗಳ ಗಾಯನ ಸಹಾ ನಡೆಯಲಿದ್ದು, ಸಂಗೀತ ಪ್ರಿಯರು ಪಾಲ್ಗೊಳ್ಳಬೇಕೆಂದು ಕೋರಿದರು. ಶ್ರೀನಿವಾಸಮೂರ್ತಿ, ಯೋಗಾನಂದನ್, ರವಿಶಂಕರ್ ಹಾಜರಿದ್ದರು.



## ಕಟ್ಟಡ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಭೇಟಿ: ಪರಿಶೀಲನೆ

**ಚಾಮರಾಜನಗರ:** ಪಶುಸಂಗೋಪನೆ, ಮೀನುಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಆರ್.ವಿನೋತ್ ಪ್ರಿಯಾ ಅವರು ಇಂದು ಚಾಮರಾಜನಗರ ಪಟ್ಟಣದಲ್ಲಿ ವಿದ್ಯಾರ್ಥಿನಿಲಯ, ಆಹಾರ ನಿಗಮದ ಗೋದಾಮು, ನಿರ್ಮಾಣ ಹಂತದಲ್ಲಿರುವ ಶಾಲೆ, ಹಾಸ್ಟೆಲ್ ಕಾಮಗಾರಿಯನ್ನು ಪರಿಶೀಲಿಸಿದರು.

ನಗರದ ಪ್ರವಾಸಿಮಂದಿರ ಸಮೀಪ ಇರುವ ಕರ್ನಾಟಕ ಆಹಾರ ನಿಗಮದ ಗೋದಾಮಿಗೆ ಭೇಟಿ ನೀಡಿ ದಾಸ್ತಾನು ಮಾಡಲಾಗಿದ್ದ ಅಕ್ಕಿ, ರಾಗಿಯನ್ನು ಪರಿಶೀಲಿಸಿದರು. ಗುಣಮಟ್ಟವಿಲ್ಲದಿದ್ದಲ್ಲಿ ವಾಪಸ್ಸು ಕಳುಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ 7 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಂಡು ಉದ್ಘಾಟನೆಗೆ ಸಿದ್ಧವಾಗಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಕಟ್ಟಡವನ್ನು ವೀಕ್ಷಿಸಿದರು. ಅಡುಗೆ ಮನೆ, ಭೋಜನಾಲಯ, ಅಧ್ಯಯನ ಕೊಠಡಿ, ಶೌಚಾಲಯ, ಸ್ಟೋರ್ ರೂಂ ಸೇರಿದಂತೆ ಮೂಲ ಸೌಲಭ್ಯಗಳ ಕುರಿತು ಮಾಹಿತಿ ಪಡೆದು ಅಗತ್ಯ ಸೂಚನೆಗಳನ್ನು ನೀಡಿದರು.

ಪಟ್ಟಣದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಮೂಲಸೌಕರ್ಯಗಳನ್ನು ವೀಕ್ಷಿಸಿದರು. ಹೊಸ ಕಟ್ಟಡ ಅವಶ್ಯಕತೆ ಇದ್ದಲ್ಲಿ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು.



ಜಾಲಹಳ್ಳಿ ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ವಿವೇಕ ಯೋಜನೆಯಡಿ ನಿರ್ಮಾಣವಾಗುತ್ತಿರುವ ಕೊಠಡಿ ಕಾಮಗಾರಿಯನ್ನು ವೀಕ್ಷಿಸಿದರು. ಕಾಮಗಾರಿ ಸಂಬಂಧ ಸಲಹೆ ಸೂಚನೆಗಳನ್ನು ನೀಡಿದರು.

ಜಿಲ್ಲಾಧಿಕಾರಿ ಶ್ರೀರೂಪ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮುನಿರಾಜು, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ, ಪಶುಸಂಗೋಪನೆ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಂತಶೆಟ್ಟಿ, ಇತರೆ ಅಧಿಕಾರಿಗಳು ಹಾಜರಿದ್ದರು.

## ರಸಗೊಬ್ಬರ ಖರೀದಿಗೆ ಎಫ್‌ಐಡಿ ಕಡ್ಡಾಯ ವಿರೋಧಿಸಿ ಪ್ರತಿಭಟನೆ

**ಮೈಸೂರು:** ನಗರದ ಕಾಡಾ ಕಚೇರಿಯ ಮುಖ್ಯದ್ವಾರದ ಬಳಿ ಜಮಾಯಿಸಿದ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ಪದಾಧಿಕಾರಿಗಳು ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿರುದ್ಧ ದಿಕ್ಕಾರ ಕೂಗಿ ತಕ್ಷಣ ರಸಗೊಬ್ಬರ ಖರೀದಿಗೆ ಎಫ್ ಐಡಿ ಕಡ್ಡಾಯ ಕೈಬಿಡಬೇಕೆಂದು ಒತ್ತಾಯಿಸಿದರು.

ನಗರದ ಕಾಡಾ ಕಚೇರಿ ಆವರಣದಲ್ಲಿ ಇರುವ ಜಂಟಿ ಕೃಷಿ ನಿರ್ದೇಶಕರ ಕಚೇರಿ ಮುಂದೆ ಪ್ರತಿಭಟಿಸಿ ಹಕ್ಕು ಒತ್ತಾಯ ಪತ್ರ ಸಲ್ಲಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ ಕಬ್ಬು ಬೆಳೆಗಾರ ಸಂಘದ ರಾಜ್ಯ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ ರಾಜ್ಯ ಮತ್ತು ಕೇಂದ್ರ ಸರ್ಕಾರ ಎರಡು ರೈತರನ್ನು ಕೃಷಿಯಿಂದ ಒಕ್ಕಲು ಎಬ್ಬಿಸುವ ಕೆಲಸ ಮಾಡುತ್ತೇವೆ. ರೈತರ ಕೃಷಿ ಆದಾಯವನ್ನು 2026 ಕ್ಕೆ ದ್ವಿಗುಣ ಗೊಳಿಸುತ್ತೇವೆ ಎಂದು ನರೇಂದ್ರ ಮೋದಿ ಪ್ರಚಾರ ಮಾಡಿ ಕೃಷಿ ಆದಾಯ ದ್ವಿಗುಣಗೊಳ್ಳದೆ ಕೃಷಿಗೆ ಬಳಸುವ ರಸಗೊಬ್ಬರದ ಬೆಲೆ ಏರಿಕೆಯಾಗಿದೆ. ಮಧ್ಯ ಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧ ಸಂಘರ್ಷದಿಂದ ವಿದೇಶದಿಂದ ಆಮದು ಆಗುತ್ತಿದ್ದಂತಹ ರಸ ಗೊಬ್ಬರದ ಕಚ್ಚಾ ವಸ್ತುಗಳು ತೊಂದರೆಯಿಂದ ರಾಜ್ಯದಲ್ಲಿ ಎರಡು ಕೋಟಿ ಟನ್ ನಷ್ಟು ಯೂರಿಯಾ ರೈತರಿಗೆ ಬೇಕಾಗಿದೆ ಆದರೆ ಶೇ.50 ರಸಗೊಬ್ಬರ ಇದೆ ರೈತರಿಗೆ ಶೇ.50 ರಸ ಗೊಬ್ಬರದ ಕೊರತೆ ಆಗುವ ಸಾಧ್ಯತೆ ಇದೆ.

ಎಫ್‌ಐಡಿ ಇಲ್ಲದೆ ಬಗರು ಹುಕುಂ, ಇನಾಮತಿ ಜಮೀನ್, ಗುತ್ತಿಗೆ ಮಾಡುವ ರೈತರ ಜಮೀನು, ರಾಜ್ಯದಲ್ಲಿ ಸುಮಾರು ಶೇಕಡ ಇನ್ನು ಹತ್ತು ಹದಿನೈದರಷ್ಟು ಪೌತಿ ಖಾತೆ ಆಗಿರುವುದಿಲ್ಲ. ಇವರಿಗೆ ರಸಗೊಬ್ಬರ ಕೊಡುವವರು ಯಾರು ರಾಜ್ಯ




ಸರ್ಕಾರ ಪರ್ಯಾಯ ಮಾರ್ಗವನ್ನು ಕಂಡುಹಿಡಿದು ರೈತರಿಗೆ ರಸ ಗೊಬ್ಬರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು.

ಮುಂದಿನ ದಿನಗಳಲ್ಲಿ ಕೃಷಿ ಚಟುವಟಿಕೆ ಬಿತ್ತನೆ ಮಾಡಲು ನೀರಾವರಿ ವ್ಯವಸಾಯ ಮಾಡಲು. ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ನರೇಂದ್ರ ಮೋದಿ ಸಾವಯವ ಕೃಷಿ ಮಾಡಲು ಕರೆ ನೀಡಿದ್ದಾರೆ. ದಿಡೀರ್ ಸಾವಯವ ಕೃಷಿ ಮಾಡಲು ಸಾಧ್ಯವಾಗುವುದಿಲ್ಲ ಅದಕ್ಕೆ ಬೇಕಾದ ಮೂಲ ಸೌಕರ್ಯಗಳನ್ನು ಶೇಕಡ 50ರಷ್ಟು ಪ್ರೋತ್ಸಾಹ ನೀಡಲು ಒತ್ತಾಯ.

ಕೃಷಿ ಯಂತ್ರೋಪಕರಣಗಳಿಗೆ ಡೀಸೆಲ್ ಮತ್ತು ಪೆಟ್ರೋಲ್ ಅನ್ನು ಪೆಟ್ರೋಲ್ ಪಂಪ್ ಗಳಲ್ಲಿ ನೀಡುತ್ತಿಲ್ಲ. ಕಾರಣ ಕೃಷಿ ಯಂತ್ರೋಪಕರಣಗಳಾದ ಟ್ರ್ಯಾಕ್ಟರ್, ಟಿಲ್ಲರ್, ಬ್ರಷ್ ಕಟರ್, ಕಳೆ ತೆಗೆಯುವ ಯಂತ್ರ ಇವುಗಳನ್ನು ರೈತರು ಪೆಟ್ರೋಲ್ ಪಂಪ ಹತ್ತಿರ ತೆಗೆದುಕೊಂಡು ಬಂದು ಪೆಟ್ರೋಲ್ ಡೀಸೆಲ್ ಖರೀದಿ ಮಾಡಲಾಗುತ್ತದೆಯೇ ಆದ್ದರಿಂದ ಪೆಟ್ರೋಲ್ ಪಂಪ್‌ಗಳಲ್ಲಿ ವಿಧಿಸಿರುವ ನಿರ್ಬಂಧಗಳನ್ನು ಸಡಿಲ ಗೊಳಿಸಿ ಯಂತ್ರೋಪಕರಣಗಳಿಗೆ ಬೇಕಾಗುವ ಡೀಸೆಲ್ ಪೆಟ್ರೋಲ್ ಕ್ಯಾನುಗಳ ಮುಖಾಂತರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯ ಖಜಾಂಚಿ ಕೆರೆಹುಂಡಿ ರಾಜಣ್ಣ, ಜಿಲ್ಲಾಧ್ಯಕ್ಷ ವಳಗೆರೆ ಗಣೇಶ್, ಎಚ್ ಗುಂಡ್ಲಾ ಚಿದಂಬರ, ಮಲಿಯೂರು ಮಹೇಂದ್ರ, ಗೌಡಿಕೆ, ಸೋಮಣ್ಣ, ಮುದ್ದಳ್ಳಿ ಮಧು, ಸಿದ್ದರಾಮಪ್ಪ, ಅಂಡುವಿನಹಳ್ಳಿ ಜಗದೀಶ್, ದೇವಣ್ಣ, ಮಹೇಶ್, ಗೌಡಿಕೆ ಶಿವಣ್ಣ, ದೇವಿರಮ್ಮನಹಳ್ಳಿ ಹುಂಡಿ ರೇವಣ್ಣ, ಸಂತು, ಮಹೇಶ್ ಮುಂತಾದವರು ಹಾಜರಿದ್ದರು.

## ರೈತರಿಗೆ ತೊಂದರೆಯಾದರೆ ಬೀದಿಗಿಳಿದು ಹೋರಾಟ: ಕುರುಬೂರು ಶಾಂತಕುಮಾರ್

**ಮೈಸೂರು:** ಮುಂಗಾರು ಆರಂಭವಾಗಿದೆ ರೈತರಿಗೆ ಬೇಕಾದ ಬೀಜ. ಯೂರಿಯಾ, ಡಿಎಪಿ, ರಸಗೊಬ್ಬರ ಬೆಲೆ ಏರಿಕೆ ಸರಿಯಲ್ಲ. ಕೇಂದ್ರ ರಾಜ್ಯ. ಸರ್ಕಾರಗಳು ಟೀಕೆಯಲ್ಲಿ ರೈತರನ್ನ ಮರೆಮಾಚಬೇಡಿ. ನಿರ್ಲಕ್ಷ್ಯ ಮಾಡಿದರೆ ಬೀದಿಗಿಳಿದು ಹೋರಾಟ ಮಾಡುವುದಾಗಿ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಎಚ್ಚರಿಸಿದರು.

ಕಬ್ಬು ಬೆಳೆಯಲ್ಲಿ ಖರ್ಚು ಕಡಿಮೆ ಮಾಡಿ ಹೆಚ್ಚು ಉತ್ಪಾದನೆ ಮಾಡುವ ಸಾಮರ್ಥ್ಯ ಇರುವ ಏ ಐ ತಂತ್ರಜ್ಞಾನ (ಕೃತಕ ಬುದ್ಧಿಮತ್ತ್ಯ) ಮಹಾರಾಷ್ಟ್ರ ಮಾದರಿಯಲ್ಲಿ ರಾಜ್ಯ ಸರ್ಕಾರ ಜಾರಿಗೆ ತರಬೇಕು. ಈ ಬಗ್ಗೆ ಮುಖ್ಯಮಂತ್ರಿಗಳಿಗೆ ಕೃಷಿ ಸಚಿವರಿಗೆ ಸಕ್ಕರೆ ಸಚಿವರಿಗೆ ಪತ್ರ ಬರೆದು ಒತ್ತಾಯಿಸಲಾಗಿದೆ. ಮೈಸೂರು ನಗರದಲ್ಲಿ ವೈಟ್ ಟ್ಯಾಪಿಂಗ್ ರಸ್ತೆ ನಿರ್ಮಾಣ ಬೇಡ. ಪರಿಸರಕ್ಕೆ ಧಕ್ಕೆ, ಉಷ್ಣಾಂಶ ಏರಿಕೆಯಾಗುತ್ತದೆ. ವ್ಯವಸ್ಥಿತ ಡಾಂಬರು ರಸ್ತೆ ನಿರ್ಮಾಣವೇ ಒಳ್ಳೆಯದು. ಸಿಮೆಂಟ್ ಉತ್ಪಾದಕ ಕಂಪನಿಗಳ ಒತ್ತಡಕ್ಕೆ ಮಣಿಯುವುದು ಬೇಡ ಎಂದರು.

ಕೃಷಿ ಪಂಪ್ಸೆಟ್ ಗಳಿಗೆ ಉಚಿತ ವಿದ್ಯುತ್ ನಿಲ್ಲಿಸಲು ಉನ್ನಾರ. ವಿದ್ಯುತ್ ಸರಬರಾಜು ಕಂಪನಿಗಳನ್ನು ಖಾಸಗಿಯವರಿಗೆ ವಹಿಸಲು ಟೆಂಡರ್ ಕರೆದಿರುವ ಪ್ರಕ್ರಿಯೆ ರೈತ ವಿರೋಧಿ ನೀತಿ ಕೂಡಲೇ ನಿಲ್ಲಿಸಬೇಕು. ಪತ್ರಿಕಾಗೋಷ್ಠಿಯಲ್ಲಿ ಹತ್ತಳ್ಳಿ ದೇವರಾಜ್, ಬರಡನಪುರ ನಾಗರಾಜ್, ಪಿ.ಸೋಮಶೇಖರ್, ಕಿರಗಸೂರ್ ಶಂಕರ್, ವರಕೂಡ್ ನಾಗೇಶ್, ಪೈಲ್ವಾನ್ ವೆಂಕಟೇಶ್, ಸಿದ್ದೇಶ್, ವಿಜಯೇಂದ್ರ, ಮೂಕ್ಕಳ್ಳಿ ಮಹದೇವಸ್ವಾಮಿ,ನೀಲಕಂಠಪ್ಪ, ಪಟೇಲ್ ಶಿವಮೂರ್ತಿ, ಸತೀಶ್, ಉಡಿಗಾಲ ರೇವಣ್ಣ, ಸುಂದರಪ್ಪ, ಕೆಂಡಗಣಪ್ಪ, ಪ್ರಸಾದ್ ನಾಯಕ, ಕಾಟೂರು ಮಹದೇವಸ್ವಾಮಿ, ಬಸವರಾಜ, ಪರಶಿವಮೂರ್ತಿ, ಪ್ರದೀಪ್, ಮಂಜುನಾಥ್, ಗೌರಿಶಂಕರ್, ಗುರುಸ್ವಾಮಿ, ಕುಮಾರ್, ನಂಜುಂಡಸ್ವಾಮಿ, ಕಾಟೂರು ನಾಗೇಶ್, ಸಿದ್ಧರಾಮ, ನಾಗೇಂದ್ರ, ಉಮೇಶ್, ಮಹಾದೇವಪ್ಪ, ಕಮಲಮ್ಮ ಮುಂತಾದವರು ಇದ್ದರು.



# ರಾಜರಕಾರಣದಲ್ಲಿ ಯಾರೂ ಪ್ರಾಮಾಣಿಕರೂ ಹೇಳಿ: ಸಾರಾ



**ಮೈಸೂರು:** ನನ್ನನ್ನೂ ಸೇರಿದಂತೆ ರಾಜಕಾರಣದ ವ್ಯವಸ್ಥೆಯಲ್ಲಿರುವ ಯಾರೂ ಕೂಡ ಪ್ರಮಾಣಿಕರಲ್ಲ, ಇನ್ನೊಬ್ಬರ ಬಗ್ಗೆ ಆರೋಪ ಮಾಡುವಾಗ ಕಾಂಗ್ರೆಸ್ ನವರು ಬಹಳ ಎಚ್ಚರಿಕೆಯಿಂದ ಮಾತನಾಡಬೇಕು. ಕಾಂಗ್ರೆಸ್ ನವರು ಏನೂ ಬೆಳೆದು ಹಣ ಮಾಡಿದ್ದಾರೆಂಬುದನ್ನು ಹೇಳಲಿ ಎಂದು ಮಾಜಿ ಸಚಿವ ಸಾ.ರಾ. ಮಹೇಶ್ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದ ಖಾಸಗಿ ಹೋಟೆಲ್ ನಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಭ್ರಷ್ಟಾಚಾರವನ್ನು ಎಲ್ಲಾ ಪಕ್ಷದವರು ಮಾಡಿದ್ದಾರೆ. ಕೆಲವರು ದೊಡ್ಡ ಪ್ರಮಾಣದಲ್ಲಿ ಭ್ರಷ್ಟಾಚಾರ ಮಾಡಿರಬಹುದು. ಇನ್ನು ಕೆಲವರು ಕಡಿಮೆ ಪ್ರಮಾಣದಲ್ಲಿ ಭ್ರಷ್ಟಾಚಾರ ಮಾಡಿರಬಹುದು. ಒಟ್ಟಿನಲ್ಲಿ ಎಲ್ಲರೂ ಭ್ರಷ್ಟರೆ ಎಂದು ಹೇಳಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕೇತಗಾನಹಳ್ಳಿಯಲ್ಲಿ 40 ವರ್ಷಗಳ ಹಿಂದೆಯೇ ಜಮೀನು ಖರೀದಿ ಮಾಡಿದ್ದಾರೆ. ಇದರ ಸೇಲ್ ಡೀಡ್ ಕೂಡ ಇದೆ. ರಾಜ್ಯದ ಇತಿಹಾಸದಲ್ಲಿ ಬಹಳಷ್ಟು ರಾಜಕಾರಣಿಗಳು ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡಿದ್ದಾರೆ. ಯಾವ ರಾಜಕಾರಣಿಗಳ ಜಾಗವನ್ನು ಎಸ್.ಐ.ಟಿ ತನಿಖೆಗೆ ಕೊಟ್ಟ ಪ್ರಕರಣವೇ ಇಲ್ಲ. ಕುಮಾರಸ್ವಾಮಿ ಅವರ ಜಮೀನು ಒಂದನ್ನೇ ಎಸ್.ಐ.ಟಿ ಗೆ ಕೊಟ್ಟಿರುವುದು ನೋಡಿದರೆ ಇದರ ಉದ್ದೇಶ ಏನು ಎಂಬುದು ಅರ್ಥವಾಗುತ್ತದೆ. ಇದು ದ್ವೇಷದ ಉದ್ದೇಶ ಪೂರ್ವಕವಾಗಿ ಮಾಜಿ ಪ್ರಧಾನಂತ್ರಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ರಾಜಕೀಯ ಜೀವನಕ್ಕೆ ಕಪ್ಪು ಚುಕ್ಕೆ ತರಲು ಎಸ್.ಐ.ಟಿ ರಚನೆ ಮಾಡಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಎಚ್.ಡಿ.ದೇವೇಗೌಡರಿಗೆ 94 ವರ್ಷ ವಯಸ್ಸಾಗಿದೆ. ಎಚ್.ಡಿ.ಕುಮಾರಸ್ವಾಮಿ ಕೇಂದ್ರ ಸಚಿವರಾಗಿ ಕೆಲಸ ಮಾಡುತ್ತಿದ್ದಾರೆ. ಯುವ ಘಟಕದ ಅಧ್ಯಕ್ಷರಾಗಿ ನಿಖಿಲ್ ಕುಮಾರಸ್ವಾಮಿ ಪಕ್ಷ ಸಂಘಟನೆಯಲ್ಲಿ ತೊಡಗಿದ್ದಾರೆ. ಹಾಗಾಗಿ ಅವರು ಕಾಂಗ್ರೆಸ್ ನಾಯಕರನ್ನು ಪ್ರಶ್ನೆ ಮಾಡಿದ್ದಾರೆ. ಅವರು ಪ್ರಶ್ನೆ ಮಾಡಿದ್ದಕ್ಕೆ ಕಾಂಗ್ರೆಸ್ ನಾಯಕರು ಬೇಸರ ಮಾಡಿಕೊಂಡರೆ ಹೇಗೆ?, ಯಾರೇ ಟೀಕೆ ಮಾಡಿದರು ಬಹಳ ಎಚ್ಚರಿಕೆಯಿಂದ ಪ್ರತಿಟೀಕೆ ಮಾಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಟೀಕೆ ಮಾಡುತ್ತೇವೆ ಎಂದು ಏಕವಚನ ಮತ್ತು ವೈಯಕ್ತಿಕವಾಗಿ ಟೀಕೆ ಮಾಡಬಾರದು. ನಿಖಿಲ್ ಕುಮಾರಸ್ವಾಮಿ ಚುನಾವಣೆಯಲ್ಲಿ ಸೋತಿರಬಹುದು ಅವರು ಮಂಡ್ಯ ಎಂಪಿ ಚುನಾವಣೆಯಲ್ಲಿ ತೆಗೆದುಕೊಂಡಷ್ಟು ಮತಗಳನ್ನು ನಿಖಿಲ್ ಟೀಕೆ ಮಾಡುತ್ತಿರುವ ಕಾಂಗ್ರೆಸ್ ನಾಯಕರುಗಳು ಅವರ ಅಷ್ಟು ಚುನಾವಣೆಯಲ್ಲಿ ತೆಗೆದುಕೊಂಡಿಲ್ಲ ಎಂದು ಹರಿಹಾಯ್ದರು.

ಕುಮಾರಸ್ವಾಮಿ ಆಸ್ತಿ ವಿಚಾರಕ್ಕೆ ಸಂಬಂಧಪಟ್ಟಂತೆ ಚರ್ಚೆ ಮಾಡುತ್ತಿದ್ದಾರೆ. ಅವರು ಆಲೂಗಡ್ಡೆ ಬೆಳೆದು ಸಂಪಾದನೆ ಮಾಡಿದ್ದರ ಎಂದು ಕಾಂಗ್ರೆಸ್ ನಾಯಕರು ಕೇಳುತ್ತಿದ್ದಾರೆ. ಕುಮಾರಸ್ವಾಮಿ ಅವರು ಫಿಲಂ ಡಿಸ್ಟ್ರಿಬ್ಯೂಟರ್ ಆಗಿ, ನಿರ್ಮಾಪಕರಾಗಿ ಹಣ ಸಂಪಾದನೆ ಮಾಡಿದ್ದಾರೆ. ಅವರ ಮಗ ನಿಖಿಲ್ ಕುಮಾರಸ್ವಾಮಿ ಸಿನಿಮಾ ಹೀರೊ ಆಗಿ ಹಲವಾರು ಸಿನಿಮಾಗಳಲ್ಲಿ ನಟಿಸಿ ವ್ಯವಸಾಯ ಮಾಡಿ ಹಣ ಸಂಪಾದನೆ ಮಾಡಿದ್ದಾರೆ. ಸಮಾಜವಾದಿ ನಾಯಕರು ಎನಿಸಿಕೊಂಡ ಕಾಂಗ್ರೆಸ್ ನಾಯಕರುಗಳು ಭತ್ತ, ರಾಗಿ, ಕಡಲೆ ಕಾಯಿ ಬೆಳೆದು ಹಣ ಸಂಪಾದನೆ ಮಾಡಿದ್ದೀರ. ನನ್ನನ್ನು ಸೇರಿದಂತೆ ರಾಜಕರಾಣದ ವ್ಯವಸ್ಥೆಯಲ್ಲಿ ಇರುವವರು ಯಾರೂ ಪ್ರಾಮಾಣಿಕ ರಲ್ಲ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿ ಯಿಂದ ಒಂದು ಟಿ.ವಿ.ಗೆ ದೊಡ್ಡ ಪ್ರಮಾಣದಲ್ಲಿ ಹಣ ನೀಡಿದ್ದಾರೆ. ಒಂದು ಟಿ.ವಿ.ಗೆ ಒಂದು ಲಕ್ಷ ರೂ. ಆಗಬಹುದು. ಆದರೆ ಅದಕ್ಕಿಂತ ಹೆಚ್ಚಿನ ಹಣ ಪಡೆದಿದ್ದಾರೆ. ಅಹಿಂದ ಹೆಸರಿನಲ್ಲಿ ಲೂಟಿ ಹೊಡೆದಿದ್ದಾರೆ ಎಂದು ಆರೋಪಿಸಿದರು.

**ಎಸ್.ಐ.ಆರ್‌ಗೆ ಯಾಕೆ ವಿರೋಧ:** ಮತದರಾರ ವಿಶೇಷ ಪರಿಷ್ಕರಣೆ (ಎಸ್.ಐ.ಆರ್) ನಡೆದರೆ ಯಾಕೆ ಕಾಂಗ್ರೆಸ್ ನಾಯಕರು ವಿರೋಧ ಮಾಡುತ್ತಿದ್ದಾರೆ. ಕೆಲವರು ಮೃತ ಪಟ್ಟಿರುತ್ತಾರೆ, ಇನ್ನು ಕೆಲವರು ಮದುವೆಯಾಗಿ ಬೇರೆಕಡೆಗೆ ಹೋಗಿರುತ್ತಾರೆ. ಹೀಗೆ ಹಲವು ಬದಲಾವಣೆಗಳು ಆಗಿರುತ್ತವೆ ಅಂತವರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಿದರೆ ವಿರೋಧ ಯಾಕೆ? ಕೆಲವೊಮ್ಮೆ ಮತದಾರರ ಪಟ್ಟಿಯಿಂದ ಕೈ ಬಿಟ್ಟಿದ್ದರೆ ಪುನಃ ಅಂತವರನ್ನು ಸೇರಿಸಬಹುದು. ಕಾಂಗ್ರೆಸ್ ಭ್ರಷ್ಟಾಚಾರದ ಬಗ್ಗೆ ಜನ ಬೇಸತ್ತಿದ್ದಾರೆ. ಈಗ ಚುನಾವಣೆ ಮಾಡಿದರು ಸಮ್ಮಿಶ್ರ ಸರ್ಕಾರವೇ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ವಿವೇಕಾನಂದ, ಜೆಡಿಎಸ್ ಜಿಲ್ಲಾಧ್ಯಕ್ಷ ಅಶ್ವಿನ್ ಕುಮಾರ್, ನಗರಾಧ್ಯಕ್ಷ ಎಸ್.ಬಿ.ಎಂ.ಮಂಜು, ಜೆಡಿಎಸ್ ರಾಜ್ಯ ವಕ್ತಾರ ರವಿಚಂದ್ರೇಗೌಡ, ಮಾಜಿ ಮೇಯರ್ ಗಳಾದ ರಾಜೇಶ್ವರಿ ಸೋಮು, ಆರ್.ಲಿಂಗಪ್ಪ, ನಗರ ಯುವ ಜೆಡಿಎಸ್ ಘಟಕದ ಅಧ್ಯಕ್ಷ ಮದನ್ ಸೇರಿ ಅನೇಕರು ಉಪಸ್ಥಿತರಿದ್ದರು.

# ತಾಲೂಕುಗಳಲ್ಲಿ ವಿದ್ಯುತ್ ಪರಿವರ್ತಕಗಳ ಬ್ಯಾಂಕ್ ಸ್ಥಾಪನೆ

**ಮೈಸೂರು:** ಗ್ರಾಹಕರಿಗೆ ಅಡಚಣೆ ರಹಿತ ವಿದ್ಯುತ್ ಪೂರೈಕೆ ಮಾಡುವ ಉದ್ದೇಶದಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್) ಅಗತ್ಯ ಕ್ರಮವಹಿಸಿದೆ. ಇದಕ್ಕಾಗಿ ಪ್ರತಿಯೊಂದು ತಾಲೂಕುಗಳಲ್ಲಿ ವಿದ್ಯುತ್ ಪರಿವರ್ತಕಗಳ ಬ್ಯಾಂಕ್ ಸ್ಥಾಪಿಸಿ, ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳನ್ನು ಸಂಗ್ರಹಿಸಿಕೊಳ್ಳಲಾಗಿದೆ.

ತನ್ನ ವ್ಯಾಪ್ತಿಗೆ ಒಳಪಡುವ ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಹಾಗೂ ಹಾಸನ ಜಿಲ್ಲೆಗಳ ಎಲ್ಲಾ ತಾಲೂಕುಗಳಲ್ಲಿರುವ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳನ್ನು ನಿಗಮದ ವಿವಿಧ ದಾಸ್ತಾನು ಕೇಂದ್ರಗಳಲ್ಲಿ ಬಫರ್ ಸ್ಟಾಕ್‌ಗಳನ್ನು ಸಂಗ್ರಹಿಸಿ ಇರಿಸಲಾಗಿದೆ. ಇದರಿಂದ ತಾಲೂಕಿನ ಯಾವುದೇ ಪ್ರದೇಶದಲ್ಲಿರುವ ವಿದ್ಯುತ್ ಪರಿವರ್ತಕಗಳಲ್ಲಿ ದೋಷ ಉಂಟಾದರೂ ತ್ವರಿತವಾಗಿ ಬದಲಾವಣೆ ಅಥವಾ ದುರಸ್ಥಿ ಕಾರ್ಯಕೈಗೊಳ್ಳಲು ಅನುಕೂಲವಾಗಲಿದೆ.

ಮುಂದಿನ ದಿನಗಳಲ್ಲಿ ಮುಂಗಾರು ಕೂಡ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಮಳೆ ಹಾಗೂ ಗಾಳಿಯಿಂದಾಗಿ ಕೆಲವು ಕಡೆಗಳಲ್ಲಿ ಟ್ರಾನ್ಸ್‌ಫಾರ್ಮರ್‌ಳಿಗೆ ಹಾನಿಯಾಗುವ ಸಾಧ್ಯತೆಯೂ ಹೆಚ್ಚಾಗಿರುವುದರಿಂದ, ಅವುಗಳನ್ನು ಶೀಘ್ರವಾಗಿ ದುರಸ್ಥಿ ಮಾಡಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಕ್ರಮವಹಿಸಲು ಸೆಸ್ಕ್ ಸನ್ನದ್ಧವಾಗಿದೆ. ಆದ್ದರಿಂದ ಸಾರ್ವಜನಿಕರು ಮತ್ತು ರೈತರು ಟ್ರಾನ್ಸ್‌ಫಾರ್ಮರ್‌ಗಳಲ್ಲಿ ದೋಷ ಕಂಡು ಬಂದಲ್ಲಿ ತಕ್ಷಣವೇ ಸೆಸ್ಕ್ 24*7 ಸಹಾಯವಾಣಿ 1912 ಅಥವಾ ಸಮೀಪದ ಸೇವಾ ಕೇಂದ್ರಗಳಿಗೆ ಮಾಹಿತಿ ನೀಡಿದಲ್ಲಿ ಚಾವಿಸನಿನಿ, ವತಿಯಿಂದ ಉಚಿತವಾಗಿ ವಿದ್ಯುತ್ ಪರಿವರ್ತಕವನ್ನು ಅಳವಡಿಸಲಾಗುವುದು. ಸದರಿ ಪರಿವರ್ತಕಗಳನ್ನು ಅಳವಡಿಸಲು ಯಾವುದೇ ಶುಲ್ಕ ಪಾವತಿಸುವ ಅಗತ್ಯತೆ ಇರುವುದಿಲ್ಲ, ಈ ಸಂಬಂಧ ಯಾರಿಂದಾದರು ಶುಲ್ಕ ಪಾವತಿಸಲು ಬೇಡಿಕೆ ಹಾಕಿದಲ್ಲಿ, ಚಾ.ವಿ.ಸ.ನಿ.ನಿಯ ನಿಗಮ ಕಚೇರಿಗೆ ದೂರು ನೀಡುವಂತೆ ತಿಳಿಸಿದೆ.

ವ್ಯಾಪ್ತಿಯಲ್ಲಿನ ನಗರ ಅಥವಾ ಗ್ರಾಮೀಣ ಪ್ರದೇಶಗಳ ಗ್ರಾಹಕರು ಯಾವುದೇ ವಿದ್ಯುತ್ ಸಂಪರ್ಕ ಪಡೆಯಲು ನಿಗದಿತ ಶುಲ್ಕವನ್ನು ಪಾವತಿಸಿದಲ್ಲಿ ಅಗತ್ಯವಿರುವ ಸಾಮಗ್ರಿಗಳನ್ನು ಇಲಾಖೆಯಿಂದಲೇ ಪೂರೈಕೆ ಮಾಡಿ, ಉಚಿತವಾಗಿ ನಿಯಮಾನುಸಾರ ಕಾಮಗಾರಿ ನಿರ್ವಹಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು. ಒಂದೊಮ್ಮೆ ಗ್ರಾಹಕರಿಗೆ ತುರ್ತಾಗಿ ವಿದ್ಯುತ್ ಸಂಪರ್ಕ ಅಗತ್ಯವಿದ್ದಲ್ಲಿ, ಸ್ವಯಂ ಆಯ್ಕೆಯೊಂದಿಗೂ ಸಹ ವಿದ್ಯುತ್ ಸಂಪರ್ಕ ಪಡೆಯಬಹುದಾಗಿದೆ. ಈ ಕುರಿತು ಮಾಹಿತಿಗೆ ಗ್ರಾಹಕರು ಚಾವಿಸನಿನಿ(ಸೆಸ್) ಉಪವಿಭಾಗ, ವಿಭಾಗದ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಚಾ.ವಿ.ಸ.ನಿ.ನಿ ವ್ಯವಸ್ಥಾಪಕ ನಿರ್ದೇಶಕ ತಿಳಿಸಿದ್ದಾರೆ.

# ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯ ಶಂಕರ ಅಂಕಶಟ್ಟಿಪುರ ಭೇಟಿ



**ಯಳಂದೂರು:** ಪಟ್ಟಣದ ಪಟ್ಟಣ ಪಂಚಾಯಿತಿ ಕಚೇರಿಗೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯ ಶಂಕರ ಅಂಕಶಟ್ಟಿಪುರ ಅವರು ಭೇಟಿ ನೀಡಿ ಪೌರಕಾರ್ಮಿಕರ ಸಮಸ್ಯೆ ಆಲಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ ಪೌರಕಾರ್ಮಿಕರು ಕೆಲಸ ಮಾಡುವಾಗ ಸುರಕ್ಷತೆ ದೃಷ್ಟಿಯಿಂದ ಕೈಗಳಿಗೆ ಗ್ಲೌಸ್ ಮತ್ತು ಕಾಲುಗಳಿಗೆ ಶೂಗಳನ್ನು ಧರಿಸಬೇಕು ಇಲ್ಲದಿದ್ದರೆ ಅನಾರೋಗ್ಯ ಕಟ್ಟಿಟ್ಟ ಬುತ್ತಿ ಎಂದು ಪೌರಕಾರ್ಮಿಕರಿಗೆ ತಿಳಿಸಿದರು. ತಮ್ಮ ಆರೋಗ್ಯಕ್ಕೆ ಪೌರಕಾರ್ಮಿಕರು ಹೆಚ್ಚು ಒತ್ತು ನೀಡಬೇಕು ಎಂದು ಸಲಹೆ ನೀಡಿದರು.

ಗೃಹ ಭಾಗ್ಯ ಯೋಜನೆ ಅಡಿಯಲ್ಲಿ ಪೌರಕಾರ್ಮಿಕರಿಗೆ ಮನೆಗಳನ್ನು ಆದಷ್ಟು ಬೇಗ ನಿರ್ಮಿಸಿ ಕೊಡಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾದಿಕಾರಿಗಳಿಗೆ ತಿಳಿಸಿದರು.

ಮುಖ್ಯಾದಿಕಾರಿ ಮಹೇಶ್ ಕುಮಾರ್ ಮಾತನಾಡಿ ಈಗಾಗಲೇ ಟೆಂಡರ್ ಪ್ರಕ್ರಿಯೆ ಮಾಡಲು ಅನುಮೋದಿಸಲಾಗಿದ್ದು, ಮುಂದಿನ ದಿನಗಳಲ್ಲಿ ಗೃಹ ಭಾಗ್ಯ ಯೋಜನೆ ಅಡಿಯಲ್ಲಿ ಪೌರಕಾರ್ಮಿಕರಿಗೆ ಮನೆಗಳನ್ನು ನಿರ್ಮಿಸಿ ಕೊಡಲಾಗುವುದು ಎಂದು ತಿಳಿಸಿದರು.

ಪಟ್ಟಣದ ಹೋಟೆಲ್ ಗಳಲ್ಲಿ ಪೌರಕಾರ್ಮಿಕರಿಗೆ ಊಟ ತಿಂಡಿಗಳನ್ನು ನೀಡುತ್ತಿಲ್ಲ ಎಂದು ಪೌರಕಾರ್ಮಿಕರು ದೂರಿದರು.ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯ ಶಂಕರ ಅಂಕಶಟ್ಟಿಪುರ ಮಾತನಾಡಿ ಅಂತಹ ಹೋಟೆಲ್ ಮಾಲೀಕರ ವಿರುದ್ಧ ಕಠಿಣ ಕ್ರಮವನ್ನು ಜರಗಿಸಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾದಿಕಾರಿ ಮತ್ತು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಿಗೆ ಸೂಚಿಸಿದರು. ಮುಂಬರುವ ದಿನಗಳಲ್ಲಿ ಪೌರಕಾರ್ಮಿಕರಿಗೆ ಎಲ್ಲಾ ಸೌಲಭ್ಯಗಳನ್ನು ನೀಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೇಶವಮೂರ್ತಿ, ಪಟ್ಟಣ ಪಂಚಾಯಿತಿ ಆರೋಗ್ಯ ಅಧಿಕಾರಿ ರಾಘವೇಂದ್ರ, ಸಮುದಾಯ ಸಂಘಟಕರಾದ ಮಹದೇವ ನಾಯಕ, ಪರಶಿವಮೂರ್ತಿ, ಸಿಬ್ಬಂದಿಗಳಾದ ಮಲ್ಲು, ಲಕ್ಷ್ಮಿ, ಪೌರಕಾರ್ಮಿಕರು ಸೇರಿದಂತೆ ಇತರರು ಹಾಜರಿದ್ದರು.

# ಜಿಲ್ಲಾಧಿಕಾರಿ ಶ್ರೀರೂಪ ಅವರಿಂದ ವಿಶೇಷ ಚೇತನರಿಗೆ ಸಾಧನ ಸಲಕರಣೆ ವಿತರಣೆ




**ಚಾಮರಾಜನಗರ:** ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಲಿಂಕೋ ಸಂಸ್ಥೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಹಯೋಗದಲ್ಲಿ ವಿಕಲಚೇತನರು ಮತ್ತು ಹಿರಿಯ ನಾಗರಿಕ ಫಲಾನುಭವಿಗಳಿಗೆ ಇಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ಉಚಿತವಾಗಿ ಸಾಧನ ಸಲಕರಣೆಗಳನ್ನು ವಿತರಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಆರ್.ವಿ.ವೈ, ಎಡಿಐಪಿ ಯೋಜನೆಯಡಿ ವಿಶೇಷಚೇತನರಿಗೆ ವಿವಿಧ ಸಾಧನ ಸಲಕರಣೆಗಳನ್ನು ಜಿಲ್ಲಾಧಿಕಾರಿ ಶ್ರೀರೂಪ ಅವರು ವಿತರಣೆ ಮಾಡಿದರು.

ಇದಕ್ಕೂ ಮೊದಲು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಶ್ರೀರೂಪ ಅವರು ಜಿಲ್ಲೆಯಲ್ಲಿ ಎರಡನೇ ಬಾರಿಗೆ ದಿವ್ಯಾಂಗರಿಗೆ ಸಾಧನ ಸಲಕರಣೆಗಳನ್ನು ವಿತರಿಸುವ ಅವಕಾಶ ನನಗೆ ಒದಗಿ ಬಂದಿದೆ. ಈ ಹಿಂದೆ ಇಂಡಿಯನ್ ಆಯಿಲ್ ಕಾರ್ಪೊರೇಷನ್ ಸಿಎಆರ್ ನೆರವಿನೊಂದಿಗೆ 450 ಫಲಾನುಭವಿಗಳಿಗೆ ಸಾಧನ ಸಲಕರಣೆಗಳನ್ನು ವಿತರಿಸಲಾಗಿದೆ. ಎರಡನೇ ಬಾರಿ ಅಲಿಂಕೊ ಸಂಸ್ಥೆ ವತಿಯಿಂದ ವಿಶೇಷಚೇತನರಿಗೆ ಸಾಧನ ಸಲಕರಣೆಗಳನ್ನ ನೀಡಲಾಗುತ್ತಿದೆ ಎಂದರು.

ಸರ್ಕಾರ ಹಾಗೂ ಇಲಾಖೆಗಳ ಅನುದಾನದಿಂದ ವಿಕಲಚೇತನರಿಗೆ ಬೇಕಾದ ಸಾಧನ ಸಲಕರಣೆಗಳನ್ನು ಪ್ರತಿ ವರ್ಷ ನೀಡುತ್ತಾ ಬರಲಾಗಿದೆ. ಸಿಎಆರ್ ನೆರವು ಪಡೆದುಕೊಂಡು ಸಹ ಜಿಲ್ಲೆಯಲ್ಲಿ ಸಾಧನ ಸಲಕರಣೆಗಳನ್ನು ವಿತರಿಸಬೇಕಿದೆ. ವಿಶೇಷಚೇತನರಿಗೆ ಅಗತ್ಯವಿರುವ ಎಲ್ಲ ನೆರವು ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿಯವರು ಹೇಳಿದರು.

ಇಲ್ಲಿನ ಅಂಬೇಡ್ಕರ್ ಭವನದಲ್ಲಿ ಈ ಹಿಂದೆ ವಿಶೇಷಚೇತನರು ಸುಲಭವಾಗಿ ಪ್ರವೇಶಿಸಲು ರ್‍ಯಾಂಪ್ ವ್ಯವಸ್ಥೆ ಇರಲಿಲ್ಲ. ಅಂಥ ಫಲಾನುಭವಿಗಳಿಗು ಇಲ್ಲಿಗೆ ಬರಲು ತೊಂದರೆಯಾಗಿತ್ತು. ಇದನ್ನು ಮನಗಂಡು ಸಭಾಂಗಣ ಪ್ರವೇಶಿಸಲು ರ್‍ಯಾಂಪ್ ಹಾಗೂ ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಲು ಸೂಚಿಸಿದ್ದೆ. ಇದೀಗ ರ್‍ಯಾಂಪ್ ಇತರೆ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದರು.

ವಿಶೇಷಚೇತನರೆಲ್ಲರು ಆಧಾರ್ ಕಾರ್ಡ್ ಪಡೆಯಲು ಜಿಲ್ಲಾಡಳಿತ ಸೂಕ್ತ ಕ್ರಮ ತೆಗೆದುಕೊಂಡಿದೆ. ಬಯೋಮೆಟ್ರಿಕ್, ಕಣ್ಣಿನ ಗುರುತು ಪಡೆಯಲು ಸಾಧ್ಯವಾಗದ ವಿಶೇಷಚೇತನರಿಗು ಪರ್ಯಾಯ ವ್ಯವಸ್ಥೆಗಳ ಮೂಲಕ ಆಧಾರ್ ಕಾರ್ಡ್ ಪಡೆದುಕೊಳ್ಳಲು ಅಗತ್ಯ ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಕೆ. ಸುರೇಶ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಡಾ.ಕೆ.ಮಂಜುನಾಥ್, ಅಲಿಂಕೋ ಸಂಸ್ಥೆಯ ಪ್ರತಿನಿಧಿ ಕೃಷ್ಣ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಅವಧೂತ ದತ್ತ ಪೀಠದಲ್ಲಿ ಸಂಸ್ಕೃತ ಶಿಕ್ಷಣ ಕೋರ್ಸ್‌ಗಳ ಉದ್ಘಾಟನೆ

**ಮೈಸೂರು:** ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ 84ನೇ ಜನ್ಮೋತ್ಸವದ ಶುಭ ಸಂದರ್ಭದಲ್ಲಿ ಮೈಸೂರಿನ ಅವಧೂತ ದತ್ತ ಪೀಠವು ನೂತನ ಸಂಸ್ಕೃತ ಶಿಕ್ಷಣ ಕೋರ್ಸ್‌ಗಳನ್ನು ಆರಂಭಿಸಿದೆ.

ದತ್ತ ಪೀಠದ ಪ್ರಮುಖ ಅಂಗ ಸಂಸ್ಥೆಗಳಾದ ಎಸ್‌ಜಿಎಸ್ ವೇದನಿಧಿ ಅಕಾಡೆಮಿ ಮತ್ತು ಮಾಸ್ಟರ್ಸ್ ಇನ್‌ಸ್ಟಿಟ್ಯೂಟ್, ಭಾರತ ಸರ್ಕಾರದ ಕೇಂದ್ರ ಸಂಸ್ಕೃತ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಈ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ. ಸಂಸ್ಕೃತ, ಶಾಸ್ತ್ರಗಳು ಹಾಗೂ ಸಂಬಂಧಿತ ವಿಷಯಗಳನ್ನು ಕಲಿಯಲು ಆಸಕ್ತಿ ಇರುವ ಯಾರು ಬೇಕಾದರೂ ಈ ಕೋರ್ಸ್‌ಗಳಿಗೆ ಸೇರಬಹುದಾಗಿದೆ. ಡಿಪ್ಲೊಮಾ ಇನ್ ಸಂಸ್ಕೃತ ಆರು ತಿಂಗಳು ಅಥವಾ ಒಂದು ವರ್ಷದ ಸರಳ ಕೋರ್ಸ್. ಸಂಸ್ಕೃತ ಸಂಭಾಷಣೆ, ವ್ಯಾಕರಣ ಮತ್ತು ನಮ್ಮ ಸಂಸ್ಕೃತಿಯ ಮೂಲ ಜ್ಞಾನವನ್ನು ಒದಗಿಸುತ್ತದೆ. ಪ್ರಾಕ್-ಶಾಸ್ತ್ರೀ ಸಂಸ್ಕೃತ ಪ್ರೈಮರ್ ಪಿಯುಸಿ (ಪ್ರೀ-ಯೂನಿವರ್ಸಿಟಿ) ಮಟ್ಟದ ಎರಡು ವರ್ಷಗಳ ಕೋರ್ಸ್, 10ನೇ ತರಗತಿ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾರ್ಥಿಗಳಿಗೆ ಬಿ.ಎ ಮತ್ತು ಎಂ.ಎ ಪದವಿಗಳಿಗೆ ಪ್ರವೇಶ ಪಡೆಯಲು ಪೂರಕವಾಗಿದೆ. ಅದ್ವೈತ ವೇದಾಂತ, ಪುರಾಣ ಇತಿಹಾಸ ಮತ್ತು ವ್ಯಾಕರಣ ಉನ್ನತ ವ್ಯಾಸಂಗದ ಗಂಭೀರ ಕೋರ್ಸ್‌ಗಳಾಗಿವೆ. ಯೋಗ ಇದು ಕೇವಲ ಆಸನಗಳಿಗೆ ಸೀಮಿತವಾಗಿರದೆ ಮಾನವ ಅಂಗರಚನಾ ಶಾಸ್ತ್ರ, ಆಯುರ್ವೇದ ಮತ್ತು ಆಧುನಿಕ ವೈದ್ಯಕೀಯ ದೃಷ್ಟಿಕೋನವನ್ನೊಳಗೊಂಡ ವೃತ್ತಿಪರ ತರಬೇತಿ ಕಾರ್ಯಕ್ರಮವಾಗಿದೆ.

ಹಿಂದೂ ಧರ್ಮ ಅಧ್ಯಯನ (ಎಂ.ಎ), ವೇದಭಾಷ್ಯ ವಿಭಾಗದ ಕೋರ್ಸ್‌ಗಳು ಸಹ ಪ್ರಾರಂಭಿಸಲಾಗಿದೆ.

ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಹಾಗೂ ಎಸ್‌ಜಿಎಸ್ ವೇದನಿಧಿ ಅಕಾಡೆಮಿ ಅಧ್ಯಕ್ಷ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರು ದೀಪ ಬೆಳಗಿಸಿ, ಫಲಕವನ್ನು ಅನಾವರಣಗೊಳಿಸುವ ಮೂಲಕ ಕೋರ್ಸ್‌ಗಳಿಗೆ ಚಾಲನೆ ನೀಡಿದರು.

# ದೇವರನಾಮಗಳಿಗೆ ಮಾನಸಿಕ ಕ್ಲೇಶ ನಿವಾರಿಸುವ ಶಕ್ತಿ ಇದೆ: ಕೆ.ಶೇಷಾದ್ರಿ




**ರಾಮನಗರ:** ಕೀರ್ತನೆಗಳು, ದೇವರನಾಮಗಳಿಗೆ ಮಾನಸಿಕ ಕ್ಲೇಶ ನಿವಾರಿಸುವ ಶಕ್ತಿ ಇದೆ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಅಭಿಪ್ರಾಯಪಟ್ಟರು.

ನಗರದಲ್ಲಿರುವ ಶ್ರೀ ಕನ್ನಿಕಾಮಹಲ್‌ನಲ್ಲಿ ವಾಸವಿ ಭಜನಾ ಮಂಡಳಿ ಆಯೋಜಿಸಿದ್ದ ಶತಕಂಠ ಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮಾನಸಿಕ ಒತ್ತಡ, ನೋವುಗಳಿಗೆ

ದೇವರ ನಾಮಸ್ಮರಣೆ, ಸಂಕೀರ್ತನೆಗಳನ್ನು ಪಠಿಸುವುದು, ಆಲಿಸುವುದು ಪರಿಹಾರದ ರೂಪಗಳು ಎಂದರು.

ಶತಕಂಠ ಗಾಯನದಲ್ಲಿ ಭಾಗಿಯಾಗಿದ್ದು ತಮಗೆ ಯಾವುದೋ ಪುಣ್ಯಕ್ಷೇತ್ರದಲ್ಲಿರುವ ಭಾವನೆ ಮೂಡಿದೆ. ರಾಮನಗರದ ವಾಸವಿ ಭಜನಾ ಮಂಡಳಿ ನೇತೃತ್ವದಲ್ಲಿ ಜಿಲ್ಲೆಯ ಚನ್ನಪಟ್ಟಣ, ಮಾಗಡಿ, ಕನಕಪುರ ತಾಲ್ಲೂಕುಗಳಿಂದ ಮತ್ತು ಮಾಗಡಿ ತಾಲ್ಲೂಕಿನ ಕುದೂರು ಹೋಬಳಿಯಿಂದ ಆರ್ಯವೈಶ್ಯ ಮಹಿಳಾ ತಂಡಗಳು ಅತ್ಯಂತ ಭಕ್ತಿ ಪೂರ್ವಕವಾಗಿ, ಸುಶ್ರಾವ್ಯವಾಗಿ ಏಕ ಸ್ವರದಲ್ಲಿ ದೇವರ ನಾಮಗಳು, ಸಂಕೀರ್ತನೆಗಳನ್ನು ಪ್ರಸ್ತುತ ಪಡಿಸಿದ್ದಾರೆ. ಇಂತಹ ಕಾರ್ಯಕ್ರಮಗಳು ಸಮಾಜದ ಒಳಿತಿಗಾಗಿ ನಡೆಯಬೇಕು. ದೊಡ್ಡ ಮಟ್ಟದ ಕಾರ್ಯಕ್ರಮಗಳಿಗೆ ತಮ್ಮ ಸಹಕಾರವೂ ಇರಲಿದೆ ಎಂದರು.

ಮೈಸೂರಿನ ನಿವಾಸಿ ಧಾರ್ಮಿಕ ಸಂಘಟಕಿ ರಶ್ಮಿ ಆದಿಶ್ ಮತ್ತು ಆರ್ಯ ವೈಶ್ಯ ಮಾಸಿಕ ಪತ್ರಿಕೆಯ ಸಂಪಾದಕಿ ಮೇಘ ಅವರನ್ನು ಇದೇ ವೇಳೆ ಸನ್ಮಾನಿಸಿ ಗೌರವಿಸಲಾಯಿತು. ಸಂಗೀತ ಶಿಕ್ಷಕಿ ಶಶಿಕಲಾ ರಾಮಣ್ಣ, ಶಾಸ್ತ್ರೀಯ ಸಂಗೀತ ಕಲಾವಿದ ಪ್ರಸನ್ನ ಅವರ ಮಾರ್ಗದರ್ಶನದಲ್ಲಿ ಶತಕಂಠ ಗಾಯನ ಪ್ರಸ್ತುತವಾಯಿತು.

## ಎರಡು ಗಂಟೆಗಳ ಕಾಲ ನಿರಂತರ ಭಕ್ತ ಸಂಗೀತ

ಜಿಲ್ಲೆಯ ನಾಲ್ಕೂ ತಾಲ್ಲೂಕುಗಳಿಂದ ಆಗಮಿಸಿದ್ದ ನೂರು ಮಂದಿ ಮಹಿಳೆಯರು ಎರಡು ಗಂಟೆಗೂ ಹೆಚ್ಚು ಕಾಲ ನಿರಂತರವಾಗಿ ಭಕ್ತಿ ಸುಧೆಯನ್ನು ಹರಿಸಿದರು. ಸಾರ್ವಜನಿಕರು ಸಹ ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಇದೊಂದು ಭಕ್ತಿ ಸಂಗೀತ ಮತ್ತು ಸಾಂಸ್ಕೃತಿಕ, ಆಧ್ಯಾತ್ಮಕ ಪರಂಪರೆಯ ಸಮಾಗಮವಾಗಿತ್ತು. ನೂರು ಮಹಿಳೆಯರು ಒಂದೇ ಸ್ವರದಲ್ಲಿ ದೇವರನಾಮಗಳನ್ನು, ಕೀರ್ತನೆಗಳನ್ನು ಪ್ರಸ್ತುತ ಪಡಿಸಿದ್ದು ಅಪೂರ್ವ ಕಾರ್ಯಕ್ರಮ ಎಂದು ಸಾರ್ವಜನಿಕರು ಪ್ರತಿಕ್ರಿಯಿಸಿದರು.

# ಮಾನಸಿಕ ಅಸ್ವಸ್ಥ ವ್ಯಕ್ತಿ ಮೃತ

**ಗುಂಡ್ಲುಪೇಟೆ:** ಪಟ್ಟಣದ ಹಳೆ ಆಸ್ಪತ್ರೆ ರಸ್ತೆಯ ಹಾಡ್‌ವೇರ್ ಅಂಗಡಿ ಮುಂಭಾಗ ನಡೆದ ಹಲ್ಲೆ ಪ್ರಕರಣದಲ್ಲಿ ಮಾನಸಿಕ ಅಸ್ವಸ್ಥ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ಸೋಮವಾರ ಸಂಜೆ ನಡೆದಿದೆ.



ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿದ್ದ ವ್ಯಕ್ತಿಯು ಅಂಗಡಿ ಮುಂದೆ ಹಿಂದಿ ಭಾಷೆಯಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಿದ್ದನೆಂದು ಹೇಳಲಾಗುತ್ತಿದೆ. ಈ ವೇಳೆ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದ ಮಹೇಶ್ ಎಂಬಾತ ಆಕ್ರೋಶಗೊಂಡು ಮರದ ಪಟ್ಟಿಯಿಂದ ತಲೆ ಭಾಗಕ್ಕೆ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ. ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡ ವ್ಯಕ್ತಿಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಸಾಗಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಕರ್ತವ್ಯ ಲೋಪ: ಪಿಡಿಓ ಅಮಾನತು

**ಚಾಮರಾಜನಗರ:** ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಯಳಂದೂರು ತಾಲೂಕಿನ ಯರಿಯೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಡಿ. ಶಿವಕುಮಾರ್ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಆದೇಶಿಸಿದ್ದಾರೆ.

ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಡಿ. ಶಿವಕುಮಾರ್ ಅವರು ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆ ಕರೆದು ಸಭೆಯಲ್ಲಿ ಚರ್ಚಿಸಿ ಸಭೆಯ ತೀರ್ಮಾನದ ರೀತ್ಯಾ ಕ್ರಮವಹಿಸದೇ ಏಕಪಕ್ಷೀಯವಾಗಿ ವರ್ತಿಸಿ ಗ್ರಾಮದಲ್ಲಿ ಕೋಮು ಗಲಭೆ ಉಂಟಾಗಲು ಕಾರಣವಾಗಿರುವುದು ಹಾಗೂ ಕಚೇರಿ ಕರ್ತವ್ಯ ನಿರ್ವಹಿಸುವಲ್ಲಿ ವಿಫಲರಾಗಿರುವ ಸಂಬಂಧ ವರದಿ ಸಲ್ಲಿಕೆಯಾಗಿತ್ತು.

ಈ ಹಿನ್ನೆಲೆಯಲ್ಲಿ ತಕ್ಷಣದಿಂದ ಜರಿಗೆ ಬರುವಂತೆ ಇಲಾಖಾ ವಿಚಾರಣೆ ಕಾಯ್ದಿರಿಸಿ ಸೇವೆಯಿಂದ ಡಿ. ಶಿವಕುಮಾರ್ ಅವರನ್ನು ಅಮಾನತು ಮಾಡಿರುವುದಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ವತಿಯಿಂದ

# ವಿವಿಧ ಬೇಡಿಕೆ ಈಡೇರಿಸುವಂತೆ ಪ್ರತಿಭಟನೆ



**ಗುಂಡ್ಲುಪೇಟೆ:** ಸಾಮೂಹಿಕ ನಾಯಕತ್ವದ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ವತಿಯಿಂದ ಪಟ್ಟಣದಲ್ಲಿ ವಿವಿಧ ಬೇಡಿಕೆ ಈಡೇರಿಸುವಂತೆ ಪ್ರತಿಭಟನೆ ನಡೆಸಿದರು.

ಪಟ್ಟಣದ ಸಾರಿಗೆ ಬಸ್ ನಿಲ್ದಾಣದಿಂದ ಹೂರಟ ಪ್ರತಿಭಟನಾಕಾರರು ಎಂಡಿಸಿಸಿ ಬ್ಯಾಂಕ್ ವೃತ್ತದ ಬಳಿ ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸಿ ತಾಲೂಕು ಆಡಳಿತ ವಿರುದ್ಧ ದಿಕ್ಕಾರದ ಘೋಷಣೆಗಳನ್ನು ಕೂಗಿ ಅಕ್ರೋಶ ವ್ಯಕ್ತ ಪಡಿಸಿದರು ನಂತರ ತಾಲೂಕು ಕಚೇರಿ ಬಳಿ ಜಮಾವಣೆಗೂಂಡರು.

ಈ ವೇಳೆ ಮಾತನಾಡಿದ ರೈತ ಮುಖಂಡರು ಮಳೆ ಹಾನಿಯಿಂದ ಸಂಕಷ್ಟಕ್ಕೀಡಾಗಿರುವ ರೈತರಿಗೆ ಸರ್ಕಾರ ಬೆಳೆ ಪರಿಹಾರವನ್ನು ಬಿಡುಗಡೆ ಮಾಡಬೇಕು. ತಾಲೂಕಿನ ಅರಣ್ಯ ಇಲಾಖೆಯಲ್ಲಿ ಮೂರು ವರ್ಷಗಳಿಗಿಂತಲೂ ಹೆಚ್ಚು ಕಾಲ ಒಂದೇ ಕಡೆ ಸೇವೆ ಸಲ್ಲಿಸುತ್ತಿರುವ ನೌಕರರನ್ನು ಬೇರೆ ಕಡೆಗೆ ವರ್ಗಾವಣೆ ಮಾಡಬೇಕಂದು ಅಗ್ರಹಿಸಿದರು. ಎಫ್.ಐ.ಡಿ (Fruits ID) ಗೊಂದಲಗಳನ್ನು ನಿವಾರಿಸಿ, ತಾಲೂಕಿನ ಎಲ್ಲಾ ರೈತರಿಗೆ ಸಕಾಲದಲ್ಲಿ ಸಮರ್ಪಕವಾಗಿ ರಸಗೊಬ್ಬರಗಳನ್ನು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಬೇಕು.

ಮಡಹಳ್ಳಿ ಗುಡ್ಡೆಯಲ್ಲಿ ಅವೈಜ್ಞಾನಿಕವಾಗಿ ನಡೆಯುತ್ತಿರುವ ಗಣಿಗಾರಿಕೆಯಿಂದಾಗಿ ಸರಣಿ ಸಾವುಗಳು ಸಂಭವಿಸುತ್ತಿದ್ದು, ಈ ಕೂಡಲೇ ಅಲ್ಲಿನ ಗಣಿಗಾರಿಕೆಯನ್ನು ಸ್ಥಗಿತಗೊಳಿಸಿ ಸುರಕ್ಷತಾ ಕ್ರಮ ಕೈಗೊಳ್ಳಬೇಕು. ಹಾಗೂ ತಾಲೂಕಿನ ಬೆಳವಾಡಿಯಿಂದ ಶಿವಪುರ ಸಂಪರ್ಕಿಸುವ ಮುಖ್ಯ ರಸ್ತೆಯನ್ನು ತಕ್ಷಣವೇ ದುರಸ್ತಿಗೊಳಿಸಿ ಹೊಸದಾಗಿ ಮುಂದಾಗಬೇಕೆಂದು ಎಂದು ಒತ್ತಾಯಿಸಿದರು

ಸ್ಥಳಕ್ಕಾಗಮಿಸಿದ ತಹಸೀಲ್ದಾರ್ ಎಂ ಎಸ್ ತನ್ಮಯ್ ರವರಿಗೆ ಮನವಿ ಸಲ್ಲಿಸಿದರು ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ರೈತ ಮುಖಂಡರಾದ ಮಹದೇವಸ್ವಾಮಿ. ಸ್ವಾಮಿ. ಪ್ರವೀಣ್. ಗಣೇಶ.ಭೀಮನಭೀಡು ರಾಜು ಬೇರಂಬಾಡಿ ಶಶಿ. ಮಹೇಶ್ ಪಾಪಣ್ಣ ಇದ್ದರು.

# ರಸಗೊಬ್ಬರ ಖರೀದಿಗೆ ಎಫ್ ಐ ಡಿ ಕಡ್ಡಾಯ ವಿರೋಧಿಸಿ ಪ್ರತಿಭಟನೆ



**ಮೈಸೂರು:** ನಗರದ ಕಾಡಾ ಕಚೇರಿಯ ಮುಖ್ಯದ್ವಾರದ ಬಳಿ ಜಮಾಯಿಸಿದ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ಪದಾಧಿಕಾರಿಗಳು ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ತಕ್ಷಣ ರಸಗೊಬ್ಬರ ಖರೀದಿಗೆ ಎಫ್ ಐಡಿ ಕಡ್ಡಾಯ ಕೈಬಿಡಬೇಕೆಂದು ಒತ್ತಾಯಿಸಿದರು.

ನಗರದ ಕಾಡಾ ಕಚೇರಿ ಆವರಣದಲ್ಲಿ ಇರುವ ಜಂಟಿ ಕೃಷಿ ನಿರ್ದೇಶಕರ ಕಚೇರಿ ಮುಂದೆ ಪ್ರತಿಭಟಿಸಿ ಹಕ್ಕು ಒತ್ತಾಯ ಪತ್ರ ಸಲ್ಲಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ ಕಬ್ಬು ಬೆಳೆಗಾರ ಸಂಘದ ರಾಜ್ಯ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ ರಾಜ್ಯ ಮತ್ತು ಕೇಂದ್ರ ಸರ್ಕಾರ ಎರಡು ರೈತರನ್ನು ಕೃಷಿಯಿಂದ ಒಕ್ಕಲು ಎಬ್ಬಿಸುವ ಕೆಲಸ ಮಾಡುತ್ತಿವೆ. ರೈತರ ಕೃಷಿ ಆದಾಯವನ್ನು 2026 ಕ್ಕೆ ದ್ವಿಗುಣ ಗೊಳಿಸುತ್ತೇವೆ ಎಂದು ನರೇಂದ್ರ ಮೋದಿ ಪ್ರಚಾರ ಮಾಡಿ ಕೃಷಿ ಆದಾಯ ದ್ವಿಗುಣಗೊಳ್ಳದೆ ಕೃಷಿಗೆ ಬಳಸುವ ರಸಗೊಬ್ಬರದ ಬೆಲೆ ಏರಿಕೆಯಾಗಿದೆ. ಮಧ್ಯ ಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧ ಸಂಘರ್ಷದಿಂದ ವಿದೇಶದಿಂದ ಆಮದು ಆಗುತ್ತಿದ್ದಂತಹ ರಸ ಗೊಬ್ಬರದ ಕಚ್ಚಾ ವಸ್ತುಗಳು ತೊಂದರೆಯಿಂದ ರಾಜ್ಯದಲ್ಲಿ ಎರಡು ಕೋಟಿ ಟನ್ ನಷ್ಟು ಯೂರಿಯಾ ರೈತರಿಗೆ ಬೇಕಾಗಿದೆ ಆದರೆ ಶೇ.50 ರಸಗೊಬ್ಬರ ಇದೆ ರೈತರಿಗೆ ಶೇ.50 ರಸ ಗೊಬ್ಬರದ ಕೊರತೆ ಆಗುವ ಸಾಧ್ಯತೆ ಇದೆ.

ಎಫ್ ಐ ಡಿ ಇಲ್ಲದೆ ಬಗರು ಹುಕುಂ, ಇನಾಮತಿ ಜಮೀನ್, ಗುತ್ತಿಗೆ ಮಾಡುವ ರೈತರ ಜಮೀನು, ರಾಜ್ಯದಲ್ಲಿ ಸುಮಾರು ಶೇಕಡ ಇನ್ನು ಹತ್ತು ಹದಿನೈದರಷ್ಟು ಪೌತಿ ಖಾತೆ ಆಗಿರುವುದಿಲ್ಲ. ಇವರಿಗೆ ರಸಗೊಬ್ಬರ ಕೊಡುವವರು ಯಾರು ರಾಜ್ಯ ಸರ್ಕಾರ ಪರ್ಯಾಯ ಮಾರ್ಗವನ್ನು ಕಂಡುಹಿಡಿದು ರೈತರಿಗೆ ರಸ ಗೊಬ್ಬರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು

ಮುಂದಿನ ದಿನಗಳಲ್ಲಿ ಕೃಷಿ ಚಟುವಟಿಕೆ ಚಿತ್ರನೆ ಮಾಡಲು ನೀರಾವರಿ ವ್ಯವಸಾಯ ಮಾಡಲು, ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ನರೇಂದ್ರ ಮೋದಿ ಸಾವಯವ ಕೃಷಿ ಮಾಡಲು ಕರೆ ನೀಡಿದ್ದಾರೆ. ಡಿಡಿಗೆ ಸಾವಯವ ಕೃಷಿ ಮಾಡಲು ಸಾಧ್ಯವಾಗುವುದಿಲ್ಲ ಅದಕ್ಕೆ ಬೇಕಾದ ಮೂಲ ಸೌಕರ್ಯಗಳನ್ನು ಶೇಕಡ 50ರಷ್ಟು ಪ್ರೋತ್ಸಾಹ ನೀಡಲು ಒತ್ತಾಯ

ಕೃಷಿ ಯಂತ್ರೋಪಕರಣಗಳಿಗೆ ಡೀಸೆಲ್ ಮತ್ತು ಪೆಟ್ರೋಲ್ ಅನ್ನು ಪೆಟ್ರೋಲ್ ಪಂಪ್ ಗಳಲ್ಲಿ ನೀಡುತ್ತಿಲ್ಲ. ಕಾರಣ ಕೃಷಿ ಯಂತ್ರೋಪಕರಣಗಳಾದ ಟ್ರಾಕ್ಟರ್, ಟಿಲ್ಲರ್, ಬ್ರಷ್ ಕಟರ್, ಕಳೆ ತೆಗೆಯುವ ಯಂತ್ರ ಇವುಗಳನ್ನು ರೈತರು ಪೆಟ್ರೋಲ್ ಪಂಪ ಹತ್ತಿರ ತೆಗೆದುಕೊಂಡು ಬಂದು ಪೆಟ್ರೋಲ್ ಡೀಸೆಲ್ ಖರೀದಿ ಮಾಡಲಾಗುತ್ತದೆಯೇ ಆದ್ದರಿಂದ ಪೆಟ್ರೋಲ್ ಪಂಪ್‌ಗಳಲ್ಲಿ ವಿಧಿಸಿರುವ ನಿರ್ಬಂಧಗಳನ್ನು ಸಡಿಲ ಗೊಳಿಸಿ ಯಂತ್ರೋಪಕರಣಗಳಿಗೆ ಬೇಕಾಗುವ ಡೀಸೆಲ್ ಪೆಟ್ರೋಲ್ ಕ್ಯಾನುಗಳ ಮುಖಾಂತರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯ ಖಜಾಂಚಿ ಕಿರೆಹುಂಡಿ ರಾಜಣ್ಣ, ಜಿಲ್ಲಾಧ್ಯಕ್ಷ ವಳಗೆರೆ ಗಣೇಶ್, ಎಚ್ ಗುಂಡ್ಲಾ ಚಿದಂಬರ, ಮಲೆಯೂರು ಮಹೇಂದ್ರ, ಗೌಡಿಕೆ, ಸೋಮಣ್ಣ, ಮುದ್ದಳ್ಳಿ ಮಧು, ಸಿದ್ದರಾಮಪ್ಪ, ಅಂಡುವಿನಹಳ್ಳಿ ಜಗದೀಶ್, ದೇವಣ್ಣ, ಮಹೇಶ್,ಗೌಡಿಕೆ ಶಿವಣ್ಣ, ದೇವಿರಮ್ಮನಹಳ್ಳಿ ಹುಂಡಿ ರೇವಣ್ಣ, ಸಂತು, ಮಹೇಶ್ ಮುಂತಾದವರು ಹಾಜರಿದ್ದರು

# ಹುಬ್ಬಳ್ಳಿಯಲ್ಲಿ ಮೈಸೂರು ವಿದ್ಯಾರ್ಥಿಗಳ ಸಾಧನೆ


**ಮೈಸೂರು:** ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಲಾ ಸ್ಕೂಲ್ ನಲ್ಲಿ ಆಯೋಜಿಸಲಾದ ಪ್ರತಿಷ್ಠಿತ 12ನೇ ರಾಷ್ಟ್ರೀಯ ಮೂಟ್ ಕೋರ್ಟ್ ಸ್ಪರ್ಧೆ?2026ರಲ್ಲಿ ದ್ವಿತೀಯ ಸ್ಥಾನವನ್ನು ನಗರದ ವಿದ್ಯಾವಿಕಾಸ ಕಾನೂನು ಕಾಲೇಜು ವಿದ್ಯಾರ್ಥಿಗಳು ಪಡೆದುಕೊಂಡಿದ್ದಾರೆ.

ತಂಡದ ಜೆ.ಯಶವಂತ್ ಗೌಡ, ಎ.ಜೀವನ್, ಎನ್.ನಂಜುಂಡ ನಾಯಕ್, ತಂಡವು ಅತ್ಯುತ್ತಮ ಪ್ರದರ್ಶನ ನೀಡಿ ರನ್ನರ್ ಅಪ್ ಸ್ಥಾನವನ್ನು ಗಳಿಸಿದೆ. ಎಂ.ಜೀವನ್ ವಿದ್ಯಾರ್ಥಿ ತಮ್ಮ ಅತ್ಯುತ್ತಮ ವಕಾಲತ್ತು ಕೌಶಲ್ಯ ಹಾಗೂ ನ್ಯಾಯಾಲಯದ ಪ್ರಸ್ತುತೀಕರಣಕ್ಕಾಗಿ ಪ್ರತಿಷ್ಠಿತ ಬೆಸ್ಟ್ ಜೆಂಟಲ್ಮನ್ ಅಡ್ವೋಕೇಟ್ಪ್ರಶಸ್ತಿಯನ್ನು ಪಡೆದಿದ್ದಾರೆ.

ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಕುಲಪತಿ ಪ್ರೊ. ಡಾ.ಸಿ.ಬಸವರಾಜು ವಹಿಸಿದ್ದರು. ಮುಖ್ಯ ಅತಿಥಿಯಾಗಿ ಕರ್ನಾಟಕ ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ನ್ಯಾಯಮೂರ್ತಿ ಎಚ್.ಬಿಲ್ಲಪ್ಪ ಉಪಸ್ಥಿತರಿದ್ದರು. ಗೌರವ ಅತಿಥಿಯಾಗಿ ವಿಶಾಖಪಟ್ಟಣದ ಡಿಎಸ್‌ಎನ್‌ಎಲ್‌ಯು ಸಂಸ್ಥೆಯ ಕಾನೂನು ಸಹ ಪ್ರಾಧ್ಯಾಪಕ, ಐಟಿಆರ್ ಮತ್ತು ತಂತ್ರಜ್ಞಾನ ಕೇಂದ್ರದ ಅಧ್ಯಕ್ಷ ಡಾ.ಸಿ.ಪಿ.ದಯಾನಂದ ಮೂರ್ತಿ ಭಾಗವಹಿಸಿದ್ದರು.




# ಜೂ. 04ಕ್ಕೆ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ



**ಮೈಸೂರು** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ, ಮೈಸೂರು ಮಹಾನಗರ ಪಾಲಿಕೆ ಹಾಗೂ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯೋತ್ಸವ ಸಮಿತಿ ವತಿಯಿಂದ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಜೂನ್ 04 ರಂದು ಮಧ್ಯಾಹ್ನ 12.00 ಘಂಟೆಗೆ ಕರ್ನಾಟಕ ಕಲಾಮಂದಿರದದಲ್ಲಿ ಆಯೋಜಿಸಲಾಗಿರುತ್ತದೆ.

ಮಾನ್ಯ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರು ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಲಿದ್ದಾರೆ. ಘನ ಉಪಸ್ಥಿತಿಯಲ್ಲಿ ಉಕ್ಕು ಮತ್ತು ಕೈಗಾರಿಕ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಉಪಮುಖ್ಯ ಮಂತ್ರಿಗಳಾದ ಡಿ.ಕೆ ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪರವರು ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರಾದ ಕೆ. ವೆಂಕಟೇಶ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ಎಸ್. ತಂಗಡಗಿ ಅವರು ಭಾಗವಹಿಸಲಿದ್ದಾರೆ. ಚಾಮರಾಜ ಕ್ಷೇತ್ರದ ಶಾಸಕರಾದ ಕೆ. ಹರೀಶ್ ಗೌಡರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್ ಸಿ., ಹಾಗೂ ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ. ರಮೇಶ್ ಬಂಡಿಸಿದ್ದೇಗೌಡ ಅವರು ಗೌರವ ಉಪಸ್ಥಿತರಿರಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದರಾದ ಸುನೀಲ್ ಬೋಸ್, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ ಎಂ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ , ಮೈಸೂರು ಪೇಂಟ್ಸ್ ಮತ್ತು ವಾರ್ನಿಷ್ ಲಿಮಿಟೆಡ್ ಅಧ್ಯಕ್ಷರಾದ ಹೆಚ್. ಡಿ. ಗಣೇಶ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷರಾದ ಎನ್. ರಂಗಸ್ವಾಮಿ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ಅವರು ಆಗಮಿಸಲಿದ್ದಾರೆ.

ಸಮಾರಂಭದ ಅತಿಥಿಗಳಾಗಿ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ತನ್ವೀರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ. ದೇವೇಗೌಡ, ಕೆ.ಆರ್. ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರವಿಶಂಕರ್ ಡಿ., ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ಎಸ್. ಶ್ರೀವತ್ಸ, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಡಿ. ಹರೀಶ್ ಗೌಡ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಹೆಚ್. ವಿಶ್ವನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಡಾ. ಯತೀಂದ್ರ ಎಸ್., ಕೆ. ವಿವೇಕಾನಂದ, ಕೆ. ಶಿವಕುಮಾರ್, ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷರಾದ ಮರಿಸ್ವಾಮಿ, ಕರ್ನಾಟಕ ಗಾಣಿಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಅನಂತ ಹಾಗೂ ಕರ್ನಾಟಕ ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪ್ಯಾರಿಜಾನ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಬೆಳಗ್ಗೆ 9:00 ಗಂಟೆಗೆ ಮೈಸೂರು ಅರಮನೆ ಆವರಣದಲ್ಲಿನ ಪುರಾತನ ಶ್ರೀ ಲಕ್ಷ್ಮೀರಮಣಸ್ವಾಮಿ ದೇವಸ್ಥಾನದ ಮುಂಭಾಗದಿಂದ ಪೊಲೀಸ್ ಅಶ್ವಾರೋಹಿದಳ, ಪೊಲೀಸ್ ಬ್ಯಾಂಡ್ ಹಾಗೂ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ ಹೊರಟು ಕೆ.ಆರ್. ವೃತ್ತದಲ್ಲಿರುವ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಗೆ ಗಣ್ಯರಿಂದ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಲಾಗುತ್ತದೆ. ನಂತರ ಡಿ.ದೇವರಾಜ ಅರಸು ರಸ್ತೆ–ಮೆಟ್ರೋಪೋಲ್ ವೃತ್ತದ ಮೂಲಕ ಕರ್ನಾಟಕ ಕಲಾಮಂದಿರದವರೆಗೆ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ.

ಬೆಳಗ್ಗೆ 9.00 ಗಂಟೆಗೆ ಕೆ.ಆರ್ ವೃತ್ತದಲ್ಲಿ ಹನುಸೋಗೆ ಸಾಂಸ್ಕೃತಿಕ ತಂಡದಿಂದ ರಾಜರ್ಷಿ ಶ್ರೀ ನಾಲ್ವಡಿ ಗೀತ ಗಾಯನ, ಬೆಳಗ್ಗೆ 10:30 ಗಂಟೆಗೆ ಕರ್ನಾಟಕ ಕಲಾಮಂದಿರದಲ್ಲಿ ಪ್ರಜ್ಞಾ ಸಾಂಸ್ಕೃತಿಕ ತಂಡದಿಂದ ರಾಜರ್ಷಿ ಶ್ರೀ ನಾಲ್ವಡಿ ಗೀತ ಗಾಯನ, ಸಂಜೆ 6:30 ಕ್ಕೆ ಕರ್ನಾಟಕ ಕಲಾಮಂದಿರದಲ್ಲಿ ನಾಲ್ವಡಿ ಸೋಶಿಯಲ್, ಕಲ್ಚರಲ್ ಅಂಡ್ ಎಜುಕೇಷನಲ್ ಟ್ರಸ್ಟ್ ವತಿಯಿಂದ ದಿನೇಶ್ ಚಮ್ಮಾಳಿಗೆ (ನೀನಾಸಂ) ಅವರ ನಿರ್ದೇಶನದಲ್ಲಿ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜೀವನ ಮತ್ತು ಸಾಧನೆ ಕುರಿತಾದ ?ಆಳಿದ ಮಾಸ್ವಾಮಿಗಳು" ನಾಟಕ ಪ್ರದರ್ಶನವನ್ನು ಆಯೋಜಿಸಲಾಗಿದೆ.

# ಮರಳಿ ಅಧಿಕಾರಕ್ಕೆ ಬರಲು ಕಾರ್ಯಕರ್ತರ ಶಕ್ತಿಯೇ ಮುಖ್ಯ: ಡಿ.ವಿ.ಸದಾನಂದಗೌಡ

**ಮೈಸೂರು:** ಒಬ್ಬ ಜನಪ್ರತಿನಿಧಿಯ ಶೇ.75ರಷ್ಟು ಶಕ್ತಿ ಕಾರ್ಯಕರ್ತರು ಹಾಗೂ ಪಕ್ಷ ಆಗಿರುತ್ತದೆ. ಮೈಸೂರಿನಲ್ಲಿ ಕಳೆದ ಚುನಾವಣೆಯಲ್ಲಿ ನೀವು ಕಳೆದುಕೊಂಡಿದ್ದನ್ನು ಮತ್ತೆ ಪಡೆದುಕೊಳ್ಳಲು ಕಾರ್ಯಕರ್ತರ ಅಗತ್ಯವಿದೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಹೇಳಿದರು.

ನಗರದ ಹೊರ ವಲಯದ ಲಿಂಗದೇವರಕೊಪ್ಪಲಿನ ಪ್ರಜಾಪಿತ ಬ್ರಹ್ಮ ಕುಮಾರಿ ಆಶ್ರಮದಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ–2026 ಅಂಗವಾಗಿ ಬಿಜೆಪಿಯ ಮೈಸೂರು ನಗರದ ಪ್ರಶಿಕ್ಷಣ ವರ್ಗ ಉದ್ಘಾಟಿಸಿ ಅವರು ಮಾತನಾಡಿದರು. ಘೋಷಣೆ, ಅನುಷ್ಠಾನ ಆಧಾರಿತ ರಾಜಕಾರಣ ನಮ್ಮ ಧ್ಯೇಯ. ದೀನ್ ದಯಾಳ್ ಉಪಾಧ್ಯಾಯರ ಆಶಯದಂತೆ ಕೊನೆಯ ಜನರನ್ನೂ ತಲುಪಬೇಕು. ಶಿಸ್ತಿಲ್ಲದ ಪಕ್ಷ ಬೆಳೆಯಲು ಸಾಧ್ಯವಿಲ್ಲ. ಅಂತಹ ಪಕ್ಷ ದೃಶ್ಯದಲ್ಲಿ ಯಾವ ಸ್ಥಿತಿಗೆ ಬಂದಿದೆ ಎಂದು ನೋಡಿದ್ದೇವೆ. ಪಕ್ಷದ ಪ್ರತಿಯೊಬ್ಬನೂ ಗೌರವ ಪಡೆಯಲು ಪಕ್ಷದ ಮೂಲ ಸಿದ್ಧಾಂತ ತಿಳಿಯಬೇಕು ಎಂಬ ಕಾರಣಕ್ಕೆ ಪ್ರಶಿಕ್ಷಣ ವರ್ಗ ಆರಂಭವಾಗಿದೆ. ಪಕ್ಷದ ಕಾರ್ಯಕರ್ತ ಬಲಿಷ್ಠನಾದಾಗ ಪಕ್ಷ ಬಲಿಷ್ಠನಾಗುತ್ತಾನೆ ಎಂದರು.

ರಾಜಕಾರಣದಲ್ಲಿ ವಿಚಾರಗಳನ್ನು ಒಳಗಿಟ್ಟುಕೊಂಡು ಭಾವನಾತ್ಮಕ ಪ್ರತಿಕ್ರಿಯೆ ನೀಡಿದರೆ, ಕಾರ್ಯಕರ್ತ ಬೆಳವಣಿಗೆ ಆಗುವುದಿಲ್ಲ. ಬಿಜೆಪಿ ವಿಚಾರಕ್ಕೆ ಒತ್ತು ಕೊಟ್ಟು ಕೆಲಸ ಮಾಡಿಕೊಂಡು ಬಂದಿದೆ. ದೇಶ ಮೊದಲು ಎಂಬ ಪರಿಕಲ್ಪನೆಯಲ್ಲಿ ಕೆಲಸ ಮಾಡಿದೆ. ಅಯೋಧ್ಯೆ ಶ್ರೀರಾಮ ಮಂದಿರದ ನಿರ್ಮಾಣ. ಆರ್ಟಿಕಲ್ 370 ವಿಚಾರಗಳನ್ನು ಅಧಿಕಾರ ಇದ್ದಾಗ ಇಲ್ಲದಾಗಲೂ ಪ್ರತಿಪಾದಿಸಿದ್ದೆವು. ಸ್ವಾಭಿಮಾನಿ, ಸಮೃದ್ಧ ದೇಶದ ವಿಚಾರಕ್ಕೆ ಬದ್ದವಾದ ರಾಜಕೀಯ ನೀತಿ ಬರಲು ಬಿಜೆಪಿ ರೂಪುಗೊಂಡಿದ್ದಾಗಿ ಹೇಳಿದರು.ರಾಜಕಾರಣಿಗಳಿಗೂ ಪುನಶ್ಚೇತನ ಕಾರ್ಯಕ್ರಮ ಇರುತ್ತದೆ. ಬದಲಾವಣೆಗೆ ಅನುಗುಣವಾಗಿ ಹೇಗೆ ಕೆಲಸ ಮಾಡಬೇಕು ಎಂಬುದನ್ನು ತಿಳಿಸುತ್ತೇವೆ. ಸಬ್ ಕಾ ಸಾತ್ ಸಬ್ ಕಾ ವಿಕಾಸ್ ಎಂಬ ಹಿರಿಯರ ವಿಚಾರಕ್ಕೆ ಬದ್ಧವಾಗಿ ನಾವು ಕೆಲಸ ಮಾಡಬೇಕು. ನೀವು ಜನರ ಬಳಿಗೆ ಯೋಜನೆ ತಲುಪಿಸಿದ್ದರಿಂದ ಪ್ರಧಾನಿ ನರೇಂದ್ರ ಮೋದಿ ಕಾರ್ಯಕ್ರಮಗಳು ಯಶಸ್ವಿಯಾಯಿತು ಎಂದರು.



ರಾಜಕೀಯ ಪಕ್ಷದ ಕಾರ್ಯಕರ್ತ ಹೀಗಿರಬೇಕೋ ಅಂತಹ ನಡವಳಿಕೆ ಇರಬೇಕು. ಎಲ್ಲರೂ ವಿವೇಕಾನಂದರು, ನರೇಂದ್ರ ಮೋದಿ ಆಗಲು ಸಾಧ್ಯವಿಲ್ಲ. ಆದರೆ ಸದ್ವಿಚಾರಗಳನ್ನು ಅಳವಡಿಸಿಕೊಂಡು ನಾಯಕತ್ವ ಬೆಳೆಸಿಕೊಳ್ಳಬೇಕು. ಹೊಗಳಿಕೆಯಲ್ಲಿ ಅಡಗಿರುವ ಸುಳ್ಳನ್ನು ಯಾರು ತಿಳಿದುಕೊಳ್ಳುತ್ತಾರೋ ಅವರು ಯಶಸ್ವಿಯಾಗುತ್ತಾರೆ. ಟೀಕೆಯಲ್ಲಿ ಅಡಗಿರುವ ಸುಳ್ಳು. ಹೊಗಳಿಕೆಯಲ್ಲಿನ ಸತ್ಯ ಎರಡನ್ನೂ ಗುರುತಿಸಬೇಕು ಎಂದು ಅವರು ಕಿವಿಮಾತು ಹೇಳಿದರು.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಬಿಜೆಪಿಯ ಬೇರು ಕಾರ್ಯಕರ್ತರು. ಅವರೇ ನಮ್ಮ ನಾಯಕರು. ಭಾರತೀಯ ಸಿದ್ಧಾಂತವೇ ನಮ್ಮ ಸಿದ್ಧಾಂತ ಆಗಿರುವುದರಿಂದ ರಾಷ್ಟ್ರವೇ ನಮ್ಮನ್ನು ಒಪ್ಪಿಕೊಂಡಿದೆ. ವೈಯಕ್ತಿಕ ಆಕಾಂಕ್ಷೆಯ ಜೊತೆಗೆ ಸಿದ್ಧಾಂತದ ಗುರಿಯೊಂದಿಗೆ ಮುಂದುವರಿಯಬೇಕು. ದೇಶದಲ್ಲಿ ಬಲಿಷ್ಠವಾಗಿ ಇದ್ದರೂ, ಶ್ರೇಷ್ಠ ದೇಶ ನಿರ್ಮಾಣಕ್ಕೆ ಅನೇಕ ಸಮಸ್ಯೆ ಇದೆ. ಅದನ್ನು ಎದುರಿಸಲು ಕಾರ್ಯಕರ್ತರ ಶಕ್ತಿ ಅಗತ್ಯ. ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿ ಅವರನ್ನು ಹೇಗೆ ಎದುರಿಸುತ್ತೇವೆ ಎಂಬ ಪ್ರಶ್ನೆ ಎಲ್ಲರಲ್ಲೂ ಇದೆ. ದುರಾಡಳಿತದ ಬಗ್ಗೆ ಜನರಿಗೆ ತಿಳಿಸಬೇಕಿದೆ. ಮುಂದಿನ ದಿನಗಳಲ್ಲಿ ಬಿಜೆಪಿ ಆಡಳಿತ ಬರುವ ಅವಕಾಶ ಇದೆ. ಅದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಶಾಸಕ ಟಿ.ಎಸ್. ಶ್ರೀವತ್ಸ, ವಿಧಾನ ಪರಿಷತ್ ಮಾಜಿ ಸದಸ್ಯರಾದ ತೋಂಟದಾರ್ಯ, ಸಿದ್ದರಾಜು, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಮೇಯರ್ ಗಳಾದ ಶಿವಕುಮಾರ್, ಸಂದೇಶ್ ಸ್ವಾಮಿ, ಮಹಿಳಾ ಮೋರ್ಚಾದ ಮಾಳವಿಕಾ ಅವಿನಾಶ್, ಹೇಮಾ ನಂದೀಶ್, ಅಲ್ಪಸಂಖ್ಯಾತರ ಮೋರ್ಚಾ ರಾಜ್ಯಾಧ್ಯಕ್ಷ ಡಾ. ಅನಿಲ್ ಥಾಮಸ್, ಮೈಸೂರು ವಿವಿ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜೇಗೌಡ, ಮುಖಂಡರಾದ ಬಿ.ಎಂ.ರಘು, ಅರುಣ್ ಕುಮಾರ್ ಗೌಡ ಮೊದಲಾದವರು ಇದ್ದರು.

## ಮತ್ತೆ ಅಧಿಕಾರಕ್ಕೆ ಬಿಜೆಪಿ ತರಲು ಸಲಹೆ ಕೊಟ್ಟಿದ್ದಾರೆ: ಸದಾನಂದಗೌಡ

**ಮೈಸೂರು:**ನಬಿನ್ ಭೇಟಿಯಿಂದ ಕಾರ್ಯಕರ್ತರಲ್ಲಿ ಹೊಸ ಹುರುಪು ತಂದಿದೆ. ನಮ್ಮ ನಾಯಕರು ಯುವಕರಿಗೆ ರಾಷ್ಟ್ರೀಯ ಅಧ್ಯಕ್ಷ ಪಟ್ಟ ಕೊಟ್ಟಿದ್ದಾರೆ. ಚೀನಾದ ಕಮ್ಯುನಿಸ್ಟ್ ಪಾರ್ಟಿಗಿಂತ ನಮ್ಮದು ದೊಡ್ಡ ಪಕ್ಷ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿತ್ತು. ಮತ್ತೆ ಅಧಿಕಾರ ಮರಳಿ ಪಡೆಯಲು ಕಾರ್ಯ ಪ್ರವೃತ್ತಿಯಾಗಬೇಕು. ಈ ನಿಟ್ಟಿನಲ್ಲಿ ನಿತಿನ್ ನಬಿನ್ ಸಲಹೆಗಳನ್ನು ಕೊಟ್ಟಿದ್ದಾರೆಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ತಿಳಿಸಿದರು.

ಮೈಸೂರಿನಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ರಾಜ್ಯ ಭೇಟಿ ವಿಚಾರ ಕುರಿತು ಮೇಲಿನಂತೆ ಪ್ರತಿಕ್ರಯಿಸಿದರು. ಬಳಿಕ ನಾನು ಈಗಾಗಲೇ ಚುನಾವಣೆ ರಾಜಕಾರಣದಿಂದ ನಿವೃತ್ತಿಯಾಗಿದ್ದೇನೆ. ಪಕ್ಷ ಬೇರೆ ಯಾವ ಜವಾಬ್ದಾರಿ ಕೊಟ್ಟರೂ ನಿರ್ವಹಿಸುತ್ತೇನೆ. ರಾಜ್ಯ ಸಭೆಗೆ ನಾನು ಕೂಡ ಆಕಾಂಕ್ಷಿ ಎಂದು ಪಕ್ಷದ ವರಿಷ್ಠರಿಗೆ ತಿಳಿಸಿದ್ದೇನೆ. ಪಕ್ಷದ ಹೈ ಕಮಾಂಡ್ ತೀರ್ಮಾನಕ್ಕೆ ನಾನು ಬದ್ಧವಾಗಿದ್ದೇನೆಂದರು. ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರವಾಗಿ ಪ್ರತಿಕ್ರಯಿಸಿ, ಬದಲಾವಣೆ ನಾವು ಮಾಡೋದ್ದಲ್ಲ. ನಮ್ಮ ಹೈ ಕಮಾಂಡ್ ಬದಲಾವಣೆ ಬಗ್ಗೆ ತೀರ್ಮಾನ ತೆಗೆದುಕೊಳ್ಳುತ್ತದೆ. ಈಗಾಗಲೇ ರಾಜ್ಯಾಧ್ಯಕ್ಷ ವಿಜಯೇಂದ್ರ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ಅವರ ಕಾಲಾವಧಿ ಮುಗಿಯಲಿ. ಬಳಿಕ ನಮ್ಮ ವರಿಷ್ಠರು ಬದಲಾವಣೆ ಅವಶ್ಯಕತೆ ಇದ್ರೆ ನಾಲ್ಕು ಗೋಡೆಗಳ ಮಧ್ಯೆ ತೀರ್ಮಾನ ಮಾಡುತ್ತಾರೆ. ಇದರಲ್ಲಿ ನನ್ನ ವೈಯಕ್ತಿಕ ಅಭಿಪ್ರಾಯ ಏನಿಲ್ಲವೆಂದರು.

ಪೆಟ್ರೋಲ್ ಡೀಸೆಲ್ ದರ ಏರಿಕೆ ವಿಚಾರವಾಗಿ ಪ್ರತಿಕ್ರಯಿಸಿ, ಜಗತ್ತಿನಲ್ಲಿ ಸ್ವಲ್ಪ ಬಿಕ್ಕಟ್ಟು ಎದುರಾಗಿದೆ. ಹಾಗಾಗಿ ಸ್ವಲ್ಪ ಮಟ್ಟಿಗೆ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆಯಾಗಿದೆ. ಬೇರೆ ದೇಶಗಳಿಗೆ ಹೋಲಿಸಿದರೆ ನಮ್ಮಲ್ಲಿ ಕಡಿಮೆ ಏರಿಕೆಯಾಗಿದೆ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಎಸ್‌ಐಆರ್ ವಿರೋಧಿಸುತ್ತಿರುವ ವಿಚಾರವಾಗಿ ಪ್ರತಿಕ್ರಯಿಸಿ, ರಾಜ್ಯದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿಗೆ ಜನರು ಬೇಸತ್ತಿದ್ದಾರೆ. ಈಗ ಚುನಾವಣೆ ನಡೆದರೆ ಕಾಂಗ್ರೆಸ್ 50 ಸೀಟು ಗೆಲ್ಲೋದು ಕಷ್ಟ, ಹೀಗಾಗಿ ಕಾಂಗ್ರೆಸ್ ಎಲ್ಲವನ್ನೂ ವಿರೋಧ ಮಾಡುತ್ತಿದೆ. ಜನರೇ ಕಾಂಗ್ರೆಸ್ ಗೆ ಉತ್ತರ ಕೊಡುವ ಕೆಲಸ ಮಾಡುತ್ತಾರೆಂದರು.

# ಅಳಿಯನ ಹತ್ಯೆಗೆ ಸುಪಾರಿ: ಏಳು ಮಂದಿ ಬಂಧನ



ಮೈಸೂರು: ಆಸ್ತಿ ವಿವಾದದ ಹಿನ್ನಲೆಯಲ್ಲಿ ಸೋದರ ಮಾವನೇ ಅಳಿಯನ ಕೊಲೆಗೆ ಸುಪಾರಿ ನೀಡಿದ್ದು, ಎರಡು ಬಾರಿಗೆ ಹತ್ಯೆಗೆ ಮುಂದಾಗಿದ್ದ ಪ್ರಕರಣವನ್ನು ಭೇದಿಸಿದ ಮೈಸೂರು ಜಿಲ್ಲಾ ಪೊಲೀಸರ ತಂಡ ಏಳು ಮಂದಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿ ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿಲ್ಲಾ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಪಿತ್ರಾರ್ಜಿತ ಆಸ್ತಿ ಉಳಿಸಿಕೊಳ್ಳಲು 37 ಲಕ್ಷ ರೂ. ಅನ್ನು ಸುಪಾರಿ ನೀಡಿದ್ದ ಸೋದರ ಮಾವ ಸೇರಿದಂತೆ ಕೃತ್ಯದಲ್ಲಿ ಪಾಲ್ಗೊಂಡಿದ್ದ ಆರು ಮಂದಿಯನ್ನು ಮೈಸೂರು ಜಿಲ್ಲಾ ಪೊಲೀಸರು ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಸೋದರಳಿಯನ ಹತ್ಯೆಗೆ ಸುಪಾರಿ ನೀಡಿದ ಪಿರಿಯಾಪಟ್ಟಣದ ಬೆಟ್ಟದ ಪುರದ ರಾಜು ಅಲಿಯಸ್ ಸೌದೆ ರಾಜು ಸೇರಿ ಸುಪಾರಿ ಪಡೆದು ಕೊಲೆಗೆ ಯತ್ನಿಸಿದ ಸುಳ್ಯ ತಾಲೂಕಿನ ಕೆ.ಪಿ.ಶಫಿ, ಪಿರಿಯಾಪಟ್ಟಣದ ಮೀರ್ ಹುಸೇನ್ ಅಲಿ, ಹುಣಸೂರಿನ ನಯಾಜ್ ಅಹ್ಮದ್, ಮೈಸೂರಿನ ಹಬೀದ್ ಪಾಷ, ಅಯಾಜ್ ಪಾಷ, ಅಮೀನುಲ್ಲಾ ಬಂಧಿತರಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಮರದ ವ್ಯಾಪಾರಿಯಾಗಿದ್ದ ರಾಜು ತನ್ನ ತಂಗಿಯ ಮಗ ಪ್ರವೀಣ್ ಕುಮಾರ್‌ನ ಹತ್ಯೆಗೆ ಸುಪಾರಿ ನೀಡಿರುವುದು ವಿಚಾರಣೆ ವೇಳೆ ಬೆಳಕಿಗೆ ಬಂದಿದೆ. ರಾಜು ಬಳಿ ಇರುವ ಆಸ್ತಿಯನ್ನು ತಮಗೂ ಪಾಲು ಬರಬೇಕೆಂದು ಪ್ರವೀಣ್ ಕುಮಾರ್ ಅವರು ತಾಯಿಯ ಪರವಾಗಿ ಕೋರ್ಟ್ ಮೊರೆ ಹೋಗಿದ್ದರು. ಆದರೆ ಆಸ್ತಿಯನ್ನು ಪಾಲು ಕೊಡಲು ಒಪ್ಪದ ರಾಜು ತಗಾದೆ ತೆಗೆದಿದ್ದ. ಆಸ್ತಿಯನ್ನು ತನ್ನ ಬಳಿಯೇ ಉಳಿಸಿಕೊಳ್ಳಬೇಕಾದರೆ ಆಸ್ತಿ ವಿಚಾರವಾಗಿ ಕ್ಯಾತೆ ತೆಗೆದಿರುವ ಪ್ರವೀಣ್ ಕುಮಾರ್‌ನನ್ನು ಕೊಲೆ ಮಾಡಿದರೆ ಆಸ್ತಿ ಉಳಿಯಲಿದೆ ಎಂದು ನಿರ್ಧರಿಸಿದ ರಾಜು, ವರ್ಷದ ಹಿಂದೆ 7 ಲಕ್ಷ ರೂ. ಸುಪಾರಿಯನ್ನು ಸುಳ್ಯದ ಶಫಿಗೆ ನೀಡಿ ಅಪಘಾತದ ಮೂಲಕ ಪ್ರವೀಣ್ ಕುಮಾರ್ ರನ್ನು ಕೊಲೆಗೆ ಯತ್ನಿಸಿದ್ದ. ಆದರೆ ಪ್ರವೀಣ್ ಪ್ರಾಣಾಪಾಯದಿಂದ ಪಾರಾಗಿದ್ದರು. ಪೊಲೀಸರು ಸಹ ಇದನ್ನು ರಸ್ತೆ ಅಪಘಾತವೇಂದೆ ನಂಬಿದ್ದರು.

ಇದಾದ ಬಳಿಕ ಕಳೆದ ಏಪ್ರಿಲ್ 13 ರಂದು ಪ್ರವೀಣ್ ಕುಮಾರ್ ಬೈಕಿನಲ್ಲಿ ತೆರಳುತ್ತಿದ್ದಾಗ ಬೈಕಿನಲ್ಲಿ ಬಂದ ದುಷ್ಕರ್ಮಿಗಳು ಮಾರಕಾಸಗಳಿಂದ ನಡೆಸಿ ಕೊಲೆಗೆ ಯತ್ನಿಸಿದ್ದರು. ಅಷ್ಟರಲ್ಲಿ ಅದೇ ಮಾರ್ಗದಲ್ಲಿ ವಾಹನ ಬಂದ ಪರಿಣಾಮ ದುಷ್ಕರ್ಮಿಗಳು ಪರಾರಿಯಾಗಿದ್ದರು. ಘಟನೆ ಸಂಬಂಧ ಗಾಯಾಳು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡ ಪಿರಿಯಾಪಟ್ಟಣ ಪೊಲೀಸರು, ಪ್ರವೀಣ್ ಕುಮಾರ್ ಅವರ ಸೋದರ ಮಾವ ಸೌದೆ ರಾಜುನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಸುಪಾರಿ ನೀಡಿರುವುದು ಬೆಳಕಿಗೆ ಬಂದಿದೆ. ರಸ್ತೆ ಅಪಘಾತದ ಮೂಲಕ ಸಾಯಿಸಲು 7 ಲಕ್ಷರೂ. ಸುಪಾರಿ ನೀಡಿ ವಿಲನಾಗಿದ್ದ ಸೌದೆ ರಾಜು , ಮತ್ತೇ ಹೇಗಾದರೂ ಮಾಡಿ ಆಸ್ತಿ ಉಳಿಸಿಕೊಳ್ಳಲೇ ಬೇಕೆಂಬ ಉದ್ದೇಶದಿಂದ 30 ಲಕ್ಷ ರೂ. ನೀಡಿ ಮೈಸೂರಿನ ರೌಡಿ ಶೀಟರ್ಗಳನ್ನು ಸಂಪರ್ಕಿಸಿ ಕೊಲೆಗೆ ಮಾಸ್ಟರ್ ಪ್ಲಾನ್ ಮಾಡಿದ್ದಾನೆ. ಆದರೆ ಎರಡನೇ ಪ್ರಯತ್ನದಲ್ಲಿಯೂ ಸಹ ವಿಫಲನಾಗುವ ಮೂಲಕ ಜೈಲು ಪಾಲಾಗಿದ್ದಾನೆ ಎಂದು ಮಾಹಿತಿ ನೀಡಿದರು.

ಕಾರ್ಯಾಚರಣೆಯಲ್ಲಿ ಪಿರಿಯಾಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಎಂ.ವಿ.ಗೋವಿಂದ ರಾಜು, ಎಸ್‌ಐಗಳಾದ ಬಿ.ಎಚ್.ಜಗದೀಶ್, ಬೈಲಕುಪ್ಪೆ ಸರ್ಕಲ್ ಇನ್ಸ್‌ಪೆಕ್ಟರ್ ಎಂ.ಕೆ.ದೀಪಕ್, ಬೆಟ್ಟದಪುರ ಎಸ್‌ಐ ಡಿ.ಎನ್.ಅಜಯ್ ಕುಮಾರ್, ಎಸ್‌ಐ ರವಿಕುಮಾರ್, ಸಿಬ್ಬಂದಿಗಳಾದ ಲಿಂಗರಾಜಪ್ಪ, ಕೆ.ಎಚ್.ಮಧುಕುಮಾರ್, ರವೀಶ್, ಪ್ರಭಾಕರ್, ಎನ್.ಟಿ.ಮಹದೇವ, ಬಸವರಾಜು, ರುದ್ರೇಶ್, ಸುರೇಶ್, ಈರಣ್ಣ, ಪುನೀತ್, ಅಣ್ಣಯ್ಯ, ಮೋಹಿನ್ ಯಲಗೊಂಡ, ವಸಂತ್ ಕುಮಾರ್ ಇದ್ದರು.

# ವಾಸುದೇವಾಚಾರ್ಯರ ಜನ್ಮ ದಿನಾಚರಣಾ ಮಹೋತ್ಸವ

ಮೈಸೂರು: ಬಿಡಾರಂ ಕೃಷ್ಣಪ್ಪನವರ ಪ್ರಸನ್ನ ಸೀತಾರಾಮ ಮಂದಿರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮೇ28ರ ಬೆಳಗ್ಗೆ 10.30ಕ್ಕೆ ನಾರಾಯಣಶಾಸ್ತ್ರಿ ರಸ್ತೆಯ ಬಿಡಾರಂ ಕೃಷ್ಣಪ್ಪನವರ ರಾಮ ಮಂದಿರದಲ್ಲಿ ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯರ ಜನ್ಮ ದಿನಾಚರಣಾ ಮಹೋತ್ಸವ ಆಯೋಜಿಸಲಾಗಿದೆ ಎಂದು ಶಾಸಕ ಟಿ.ಎಸ್. ಶ್ರೀವತ್ಸ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾವೇ ಉದ್ಘಾಟಿಸಲಿದ್ದು, ನಾಡಿನ ಹೆಸರಾಂತ ಸಂಗೀತ ವಿದುಷಿಯವರಾದ ಡಾ.ಟಿ.ಎಸ್. ಸತ್ಯವತಿ ಮತ್ತು ವೃಂದದವರಿಂದ ವಾಸುದೇವ ವಾಗ್ಗೇಯ ವೈಭವ ಕಾರ್ಯಕ್ರಮವಿರಲಿದೆ. ಅರ್ಚನಾ ಭೋಜ್, ಶಿಲ್ಪಾ ಶಶಿಧರ್, ಅಂಜನಾ ಪಿ. ರಾವ್ ಮತ್ತು ಲಾವಣ್ಯ ಕೃಷ್ಣಮೂರ್ತಿ ಗಾಯನ ನಡೆಸಿಕೊಡಲಿದ್ದಾರೆ. ಪಿಟೀಲಿನಲ್ಲಿ ಅದಿತಿ ಕೃಷ್ಣಪ್ರಕಾಶ್, ಮೃದಂಗದಲ್ಲಿ ಪ್ರೊ.ಜಿ.ಎಸ್. ರಾಮಾನುಜಮ್ ಸಹಕರಿಸಲಿದ್ದಾರೆಂದರು. ಮೈಸೂರು ವಾಸುದೇವಾಚಾರ್ಯರು ನಾಡಿನ ಶ್ರೇಷ್ಠ ಸಂಗೀತಗಾರರಾಗಿದ್ದಾರೆ. ಹೀಗಾಗಿ ಸರ್ಕಾರದ ಸಹಯೋಗದಲ್ಲಿ ಅವರ ಸ್ಮರಣೆ ಈ ರೀತಿ ಆರಂಭವಾಗುತ್ತಿದೆ. ಕಾರ್ಯಕ್ರಮದಲ್ಲಿ ಅವರ ಕೃತಿಗಳ ವಿಶ್ಲೇಷಣೆಯೂ ನಡೆಯಲಿದೆ. ಇದಲ್ಲದೆ ಅಂದೇ ಸಂಜೆ ನಾದಬ್ರಹ್ಮ ಸಂಗೀತ ಸಭಾದಲ್ಲಿ ಸುಕನ್ಯಾ ಪ್ರಭಾಕರ್ ಅವರಿಂದ ಮೈಸೂರು ವಾಸುದೇವಾಚಾರ್ಯರ ಕೃತಿಗಳ ಗಾಯನ ಸಹಾ ನಡೆಯಲಿದ್ದು, ಸಂಗೀತ ಪ್ರಿಯರು ಪಾಲ್ಗೊಳ್ಳಬೇಕೆಂದು ಕೋರಿದರು. ಶ್ರೀನಿವಾಸಮೂರ್ತಿ, ಯೋಗಾನಂದನ್, ರವಿಶಂಕರ್ ಹಾಜರಿದ್ದರು.




# ಪಿಎಂ 15 ಅಂಶಗಳ ಕಾರ್ಯಕ್ರಮ ಅನುಷ್ಠಾನದಲ್ಲಿ ನಿರ್ಲಕ್ಷ್ಯ ಬೇಡ

**ಮಂಡ್ಯ:** ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮಗಳನ್ನು ಕಾಲಮಿತಿಯೊಳಗೆ ತಲುಪಿಸಬೇಕು. ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಎಲ್ಲ ಇಲಾಖೆಗಳ ಅಧಿಕಾರಿಗಳು ಆದ್ಯತೆ ನೀಡಬೇಕು. ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ನಿರ್ಲಕ್ಷ್ಯ ವಹಿಸಬಾರದು ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮ್ಮದ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಪಾರ್ಸಿ ಹಾಗೂ ಬೌದ್ಧ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.



ಅಲ್ಪಸಂಖ್ಯಾತ ಸಮುದಾಯದ 6 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಅಂಗನವಾಡಿ ಪ್ರವೇಶ ದೊರೆಯುತ್ತಿದೆಯಾದರೂ, ಕೆಲವು ಮಕ್ಕಳು ಕೆಲ ತಿಂಗಳ ಬಳಿಕ ಕೇಂದ್ರಗಳಿಂದ ಹೊರಗುಳಿಯುತ್ತಿರುವುದು ಗಮನಕ್ಕೆ ಬಂದಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಲ್ಪಸಂಖ್ಯಾತರು ಹೆಚ್ಚಿರುವ ಬಡಾವಣೆಗಳಲ್ಲಿ ಮನೆ–ಮನೆಗೆ ತೆರಳಿ ಅಂಗನವಾಡಿಯ ಪ್ರಯೋಜನಗಳ ಕುರಿತು ಪೋಷಕರಿಗೆ ಅರಿವು ಮೂಡಿಸಬೇಕು ಎಂದು ಸೂಚಿಸಿದರು. ಮಂಡ್ಯ ಜಿಲ್ಲೆಯಲ್ಲಿ 64 ಅಲ್ಪಸಂಖ್ಯಾತ ಅಂಗನವಾಡಿ ಕೇಂದ್ರಗಳಿದ್ದು, 4,326 ಮಕ್ಕಳು ಹಾಜರಾಗುತ್ತಿದ್ದಾರೆ. ಮಕ್ಕಳು ಕೇಂದ್ರಗಳಿಂದ ಹೊರಗುಳಿಯುವ ಕಾರಣಗಳನ್ನು ಪತ್ತೆಹಚ್ಚಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶ ಕಲ್ಪಿಸುವ ವೃತ್ತಿ ಆಧಾರಿತ ತರಬೇತಿಗಳನ್ನು ಅರ್ಹರಿಗೆ ನೀಡಬೇಕು. ವೃತ್ತಿ ಕೌಶಲ್ಯ ತರಬೇತಿ ಮೂಲಕ ಅಲ್ಪಸಂಖ್ಯಾತರು ಸೇರಿದಂತೆ ಎಲ್ಲ ವರ್ಗದ ಯುವಕರಿಗೆ ಉದ್ಯೋಗಾವಕಾಶ ಒದಗಿಸುವುದು ಅಧಿಕಾರಿಗಳ ಜವಾಬ್ದಾರಿ ಎಂದು ಹೇಳಿದರು.

ಪಿಎಂ ಸ್ವನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ನೀಡಲಾಗುತ್ತಿರುವ ಕಿರು ಸಾಲ ಸೌಲಭ್ಯವನ್ನು ಅಲ್ಪಸಂಖ್ಯಾತ ಫಲಾನುಭವಿಗಳಿಗೆ ತಲುಪಿಸಬೇಕು. ರಾಜ್ಯ ಸರ್ಕಾರದ ಯುವ ನಿಧಿ ಯೋಜನೆ ಕುರಿತು ಪದವಿ ಹಾಗೂ ಡಿಪ್ಲೊಮಾ ಪಡೆದ ನಿರುದ್ಯೋಗಿ ಯುವಕ–ಯುವತಿಯರಲ್ಲಿ ಅರಿವು ಮೂಡಿಸಿ ಯೋಜನೆಯ ಸದುಪಯೋಗ ಪಡೆಯುವಂತೆ ಮಾಡಬೇಕು ಎಂದು ತಿಳಿಸಿದರು.

ಅಲ್ಪಸಂಖ್ಯಾತರಿಗೆ ಸ್ವಯಂ ಉದ್ಯೋಗ ಹಾಗೂ ಉನ್ನತ ಶಿಕ್ಷಣಕ್ಕಾಗಿ ಬ್ಯಾಂಕುಗಳ ಮೂಲಕ ಕಡಿಮೆ ಬಡ್ಡಿದರದಲ್ಲಿ ಸಾಲ ಹಾಗೂ ಸಹಾಯಧನ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಶಿಕ್ಷಣಕ್ಕಾಗಿ 477 ಅಲ್ಪಸಂಖ್ಯಾತರಿಗೆ ಸಾಲ ನೀಡಲಾಗಿದೆ ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ ಕುಮಾರ್ ಮಾಹಿತಿ ನೀಡಿದರು. ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿದ್ದು, ಸರ್ಕಾರದ ಸೌಲಭ್ಯಗಳು ಅರ್ಹರಿಗೆ ತಲುಪುವಂತೆ ಕ್ರಮವಹಿಸಲಾಗಿದೆ ಎಂದರು. ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಕೆ.ಆರ್.ನಂದಿನಿ, ತಿಮ್ಮಯ್ಯ, ಮುಜಿಬುಲ್ ಜಫಾರಿ, ಜಯಣ್ಣ ಸೇರಿದಂತೆ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿ

### ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

**ರಾಮನಗರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಆಯ್ಕೆಯಾದ ಚನ್ನಪಟ್ಟಣ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕಂ ಕ್ರೀಚ್ ಕೇಂದ್ರಗಳಾದ ಹಲಸಿನಮರದೊಡ್ಡಿ, ಇಂದಿರಾಕಾಟೇಜ್–2, ಅಭಿದ್ಬುರ್ಮೊಹಲ್ಲಾ, ಟಿಪ್ಪು ನಗರ–1, ಬೀಡಿಕಾಲೋನಿ–1 ಹಾಗೂ ಇಸ್ಲಾಂಪುರ ಇಲ್ಲಿ ಕಾರ್ಯನಿರ್ವಹಿಸಲು 6 ಕ್ರೀಚ್ ಕಾರ್ಯಕರ್ತೆಯರು ಮತ್ತು 6 ಕ್ರೀಚ್ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ನಿಗಧಿತ ಅರ್ಜಿ ನಮೂನೆಯನ್ನು ಶಿಶು ಅಭಿವೃದ್ಧಿ ಯೋಜನಾ ಕಚೇರಿ, ನಂ, 4823, ಆ1, ಅಪ್ಪಾಜಿ ಕಾಂಪ್ಲೆಕ್ಸ್, ಚಾನಲ್ ರಸ್ತೆ (3ನೇ ಅಡ್ಡರಸ್ತೆ), ವಿವೇಕಾನಂದನಗರ, ಚನ್ನಪಟ್ಟಣ, ಬೆಂಗಳೂರು ದಕ್ಷಿಣ ಜಿಲ್ಲೆ. ಈ ಕಚೇರಿಯಲ್ಲಿ ಪಡೆದು 2026ರ ಜೂನ್ 24ರ ಸಂಜೆ 5.30ರೊಳಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ನಂ 4823 ಆ1, ಅಪ್ಪಾಜಿ ಕಾಂಪ್ಲೆಕ್ಸ್, ಚಾನಲ್ ರಸ್ತೆ (3ನೇ ಅಡ್ಡರಸ್ತೆ), ವಿವೇಕಾನಂದನಗರ, ಚನ್ನಪಟ್ಟಣ, ಬೆಂಗಳೂರು ದಕ್ಷಿಣ ಜಿಲ್ಲೆ–562159ಅನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

**ಮೈಸೂರು:** ಸಮಾಜ ಕಲ್ಯಾಣ ಇಲಾಖಾ ವತಿಯಿಂದ 2025–26ನೇ ಶೈಕ್ಷಣಿಕ ಸಾಲಿನಲ್ಲಿ ಮೆಟ್ರಿಕ್ ನಂತರದ ದ್ವಿತೀಯ ಪಿಯುಸಿ, 3 ವರ್ಷದ ಪಾಲಿಟೆಕ್ನಿಕ್ ಡಿಪ್ಲೋಮಾ, ಪದವಿ/ಸ್ನಾತಕೋತ್ತರ ಪದವಿ ಹಾಗೂ ವೃತ್ತಿಪರ ಕೋರ್ಸ್‌ಗಳನ್ನು ಪೂರ್ಣಗೊಳಿಸಿ ಪ್ರಥಮ ಪ್ರಯತ್ನದಲ್ಲಿ, ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದ್ದು, ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಇಲಾಖೆಯ https://swdservices.karnataka.gov.in/PrizeMoneyClientApp/register ವೆಬ್‌ಸೈಟ್‌ನಲ್ಲಿ ಆನ್‌ಲೈನ್‌ನಲ್ಲಿ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. Acknowledgement Print, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಮತ್ತು ಹಿಂದಿನ ವರ್ಷಗಳ ಅಂಕಪಟ್ಟಿಗಳನ್ನು ಪ್ರಾಂಶುಪಾಲರಿಂದ ದೃಢೀಕರಿಸಿ ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು ಡಾ॥ ಬಾಬು ಜಗಜೀವನರಾಂ ಭವನ ಕಟ್ಟಡ, ಆದಿಪಂಪ ರಸ್ತೆ ಒಂಟಿಕೊಪ್ಪಲು ಪೂರ್ವ ಬಡಾವಣೆ ಪಡುವಾರಹಳ್ಳಿ ಮೈಸೂರು–12, ಇಲ್ಲಿನ ಕಛೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಆದಾಯ ಮಿತಿ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು ಡಾ॥ ಬಾಬು ಜಗಜೀವನರಾಂ ಭವನ ಕಟ್ಟಡ, ಆದಿಪಂಪ ರಸ್ತೆ ಒಂಟಿಕೊಪ್ಪಲು ಪೂರ್ವ ಬಡಾವಣೆ ಪಡುವಾರಹಳ್ಳಿ ಮೈಸೂರು–12, ಇಲ್ಲಿನ ದೂರವಾಣಿ ಸಂಖ್ಯೆ–0821–2520910 ನ್ನು ಸಂಪರ್ಕಿಸಬಹುದಾಗಿದೆ.

### ಕವಿ ಮೃತ್ಯುಂಜಯ ಕವನ ಸಂಕಲನ ಬಿಡುಗಡೆ

**ಮಂಡ್ಯ:** ಸ್ನೇಹ ಬಳಗದಿಂದ ಕವಿ ಕೆ.ಪಿ.ಮೃತ್ಯುಂಜಯ ಅವರ ಜಾಯ್ ಪದ್ಯಗಳು ಪುಸ್ತಕ ಲೋಕಾರ್ಪಣೆ ಮತ್ತು ಗೌರವಾರ್ಪಣೆ ಕಾರ್ಯಕ್ರಮವನ್ನು ಮೇ 27ರಂದು ಬೆಳಗ್ಗೆ 10 ಗಂಟೆಗೆ ನಗರದ ಕೆವಿಎಸ್ ಶತಮಾನೋತ್ಸವ ಭವನದಲ್ಲಿ ಆಯೋಜಿಸಲಾಗಿದೆ ಎಂದು ಮಂಡ್ಯ ತಾ.ಪಂ ಮಾಜಿ ಅಧ್ಯಕ್ಷ ಸಿ.ತ್ಯಾಗರಾಜು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ಕವಿ ಕೆ.ಪಿ.ಮೃತ್ಯುಂಜಯ ಅವರು ಉಪನ್ಯಾಸಕರಾಗಿ ನಿವೃತ್ತಿಯ ಹೊಸ್ತಿಲಿನಲ್ಲಿದ್ದಾರೆ. ಹಲವು ಪುಸ್ತಕಗಳನ್ನು ಬರೆದ ಅವರು ನಿವೃತ್ತಿಯ ಹಿನ್ನಲೆ ಈ ಪುಸ್ತಕ ಬಿಡುಗಡೆ ಮಾಡಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಪುಸ್ತಕ ಬಿಡುಗಡೆ ಮತ್ತು ಕವಿಗೆ ಗೌರವ ಸಲ್ಲಿಸುವರು. ಶಾಸಕ ಪಿ.ರವಿಕುಮಾರ್ ಗೌಡ ಅಧ್ಯಕ್ಷತೆ ವಹಿಸುವರು. ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದು, ಇಂಗ್ಲೀಷ್ ಅಧ್ಯಾಪಕರು ಮತ್ತು ಬರಹಗಾರರಾದ ಪ್ರಸನ್ನಕುಮಾರ್ ಕೆರೆಗೋಡು ಪುಸ್ತಕದ ಕುರಿತು ಮಾತನಾಡುವರು. ಲೇಖಕ, ಕವಿ ಉಪನ್ಯಾಸಕ ಕೆ.ಪಿ.ಮೃತ್ಯುಂಜಯ ತಾ.ಪಂ ಮಾಜಿ ಅಧ್ಯಕ್ಷ ಸಿ.ತ್ಯಾಗರಾಜು ಗೌರವ ಉಪಸ್ಥಿತಿ ವಹಿಸುವರು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ಬಳಗದ ಸಿ.ಎಂ.ದ್ಯಾವಪ್ಪ, ಮಂಗಲ ಎಂ.ಯೋಗೇಶ್, ಡಿ.ದೇವರಾಜು ಹಿಂದುಳಿದ ವರ್ಗಗಳ ವೇದಿಕೆ ಅಧ್ಯಕ್ಷ ಎಲ್.ಸಂದೇಶ್, ಲಿಂಗಪ್ಪ ಇದ್ದರು.

# ಕಸವನ್ನು ವಿಲೇವಾರಿ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿ: ಡಾ. ಕುಮಾರ

**ಮಂಡ್ಯ :** ಘನ ತ್ಯಾಜ್ಯವನ್ನು ವೈಜ್ಞಾನಿಕ ವಾಗಿ ವಿಲೇವಾರಿ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮನೆಗಳಲ್ಲಿ ಹಸಿ ಕಸ, ಒಣ ಕಸ ವಿಂಗಡಣೆ ಮಾಡಬೇಕು ಹಾಗೂ ಇದರ ಬಗ್ಗೆ ಸಾರ್ವಜನಿಕರಿಗೆ ಅರಿವು ಅಗತ್ಯ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ರವರು ತಿಳಿಸಿದರು.

ಮಂಡ್ಯ ವಿಶ್ವ ವಿದ್ಯಾಲಯ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ನಾಗರಾಭಿವೃದ್ಧಿ ಕೋಶ, ಮಂಡ್ಯ ಮತ್ತು ನಗರಸಭೆ ವತಿಯಿಂದ ಘನ ತ್ಯಾಜ್ಯ ವಸ್ತು ನಿರ್ವಹಣೆ ನಿಯಮಗಳು 2026 ಕುರಿತು ಮಂಡ್ಯ ಜಿಲ್ಲೆಯ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಪೌರಯುಕ್ತರು, ಮುಖ್ಯಾಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು

ಸರ್ವೋಚ್ಚ ನ್ಯಾಯಾಲಯದ 2026 ರ ಹೊಸ ನಿಯಮಗಳ ಅನ್ವಯ ಹಸಿ ಕಸ, ಒಣ ಕಸ, ವಿಶೇಷ ತ್ಯಾಜ್ಯ, ಡೈಪರ್ ತ್ಯಾಜ್ಯ ವಾಗಿ ನಾಲ್ಕು ರೀತಿಯ ವಿಲೇವಾರಿ ಭಾಗಗಳಾಗಿ ರೂಪಿಸಲಾಗಿದ್ದು ಸಾರ್ವಜನಿಕರಲ್ಲಿ 2026 ರ ನಿಯಮಗಳ ಕುರಿತು ಅರಿವು ಮೂಡಿಸುವಂತೆ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಘನ ತ್ಯಾಜ್ಯಗಳನ್ನು ನಿರ್ಲಕ್ಷಿಸುವುದರಿಂದ ಆರ್ಥಿಕತೆ ಅಷ್ಟೇ ಅಲ್ಲದೇ ಆರೋಗ್ಯದ ಮೇಲೆಯೂ ಪರಿಣಾಮ ಬೀರುತ್ತದೆ. ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡಾಗ ಮಾತ್ರ ಮನುಷ್ಯ ಉತ್ತಮ ಆರೋಗ್ಯವನ್ನು ಹೊಂದಲು ಸಾಧ್ಯ. ಸ್ಥಳೀಯ ಸಂಸ್ಥೆಗಳು ಘನತ್ಯಾಜ್ಯಗಳನ್ನು ನಾಲ್ಕು ವಿಧದ ತ್ಯಾಜ್ಯಗಳಾದ ಹಸಿ ತ್ಯಾಜ್ಯ, ಒಣ ತ್ಯಾಜ್ಯ,ಸ್ಯಾನಿಟರಿ ತ್ಯಾಜ್ಯ ಹಾಗೂ ಸ್ಪೆಷಲ್ ಕೇರ್ ತ್ಯಾಜ್ಯಗಳ (ಬಲ್ಬ್ ಗಳು, ಬ್ಯಾಟರಿ, ಅವಧಿ ಮೀರಿದ ಔಷಧಗಳು,ಪೇಂಟ್ ಡಬ್ಬಿಗಳು ಇತ್ಯಾದಿ) ವಿಂಗಡಣೆಯನ್ನು ಮಾಡಿ ಸಂಗ್ರಹಿಸಿ, ಅವುಗಳನ್ನು ಸಾಗಾಣಿಕೆ ಮಾಡಿ ಸಂಸ್ಕರಣೆ ಹಾಗೂ ವಿಲೇವಾರಿಯನ್ನು ವೈಜ್ಞಾನಿಕವಾಗಿ ಮಾಡಬೇಕು ಎಂದು ತಿಳಿಸಿದರು.



ಪ್ರತಿ ಸ್ಥಳೀಯ ಸಂಸ್ಥೆಗಳಲ್ಲಿ 4 ವಿಧಗಳ ತ್ಯಾಜ್ಯ ವಿಂಗಡಣೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಇವುಗಳ ಸಂಗ್ರಹಣೆ, ಸಾಗಾಣಿಕೆ ಹಾಗೂ ಸಂಸ್ಕರಣೆ, ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕೆಂದು ಸೂಚಿಸಿದರು. ನೂತನ ನಿಯಮ ಉಲ್ಲಂಘನೆ ಮಾಡುವ ವ್ಯಕ್ತಿ, ಸಂಘ–ಸಂಸ್ಥೆಗಳ ವಿರುದ್ಧ ಕಡ್ಡಾಯವಾಗಿ ದಂಡ ವಿಧಿಸಬೇಕು ಎಂದರು.

ಸ್ಥಳೀಯ ಸಂಸ್ಥೆಗಳು ಪ್ರತ್ಯೇಕವಾಗಿ ಸಂಗ್ರಹಿಸಿದ ಒಣ ತ್ಯಾಜ್ಯವನ್ನು ಎಂ.ಆರ್.ಎಫ್ ಘಟಕಗಳಲ್ಲಿ ಮರುಬಳಕೆ ಮಾಡಬಹುದಾದ ವಸ್ತುಗಳು, ಮರುಬಳಕೆ ಮಾಡಲಾಗದ ವಸ್ತುಗಳು, ದಹನಕಾರಿ ತ್ಯಾಜ್ಯ ನಿಷ್ಕ್ರಿಯ ತ್ಯಾಜ್ಯಗಳು ಎಂದು ಮರು ವಿಂಗಡಣೆ ಮಾಡಿ, ನಿಯಮಾನುಸಾರ ವಿಲೇವಾರಿ ಮಾಡಬೇಕು ಎಂದು ಸೂಚಿಸಿದರು.

ಹಸಿಕಸ ಮತ್ತು ಒಣ ಕಸವನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡುವುದು ಪ್ರತಿಯೊಬ್ಬ ಪ್ರಜ್ಞಾವಂತರ ಕರ್ತವ್ಯ. ನಮ್ಮ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛತೆಯಿಂದ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಹೇಳಿದರು.

ಜನರ ಮನಸ್ಥಿತಿಯನ್ನು ಬದಲಾಯಿಸಿ ಆರೋಗ್ಯಕರ ಸಮಾಜವನ್ನು ಸೃಷ್ಟಿಸಬೇಕು ಆದ್ದರಿಂದ ಸಾರ್ವಜನಿಕರು ಸರಿಯಾದ ರೀತಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡಬೇಕು. ತರಬೇತಿ ಕಾರ್ಯಾಗಾರ ಕಾರ್ಯಕ್ರಮವನ್ನು ಸಮರ್ಪಕವಾಗಿ ಅರ್ಥೈಸಿಕೊಂಡು ಸದುಪಯೋಗ ಪಡೆದು ಪಾಲಿಕೆ ಆರೋಗ್ಯ ಅಧಿಕಾರಿಗಳು, ಪರಿಸರ ಇಂಜಿನಿಯರ್‌ಗಳು ಮತ್ತು ಪೌರಕಾರ್ಮಿಕರು ವಾರ್ಡ್‌ಗಳಿಗೆ ಭೇಟಿ ನೀಡಿ ಕಸ ವಿಂಗಡನೆಯ ಸರಿಯಾದ ಪದ್ಧತಿಯನ್ನು ಪ್ರಾತ್ಯಕ್ಷಿಕೆ (Demonstration) ಮೂಲಕ ಜನರಿಗೆ ತಿಳಿಸಬೇಕು.ತರಬೇತಿ ಕಾರ್ಯಾಗಾರ ಕಾರ್ಯಕ್ರಮವನ್ನು ಸಮರ್ಪಕವಾಗಿ ಅರ್ಥೈಸಿಕೊಂಡು ಸದುಪಯೋಗ ಪಡೆದು ಕೊಳ್ಳುವುದರ ಜೊತೆಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದು ತುಂಬಾ ಅಗತ್ಯ ಎಂದು ತಿಳಿಸಿದರು.

ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾಧಿಕಾರಿ ನರಸಿಂಹಮೂರ್ತಿ ಮಾತನಾಡಿ ಘನತ್ಯಾಜ್ಯಗಳನ್ನು ನಾಲ್ಕು ವಿಧದ ತ್ಯಾಜ್ಯಗಳಾದ ಹಸಿ ತ್ಯಾಜ್ಯ, ಒಣ ತ್ಯಾಜ್ಯ,ಸ್ಯಾನಿಟರಿ ತ್ಯಾಜ್ಯ ಹಾಗೂ ಸ್ಪೆಷಲ್ ಕೇರ್ ತ್ಯಾಜ್ಯಗಳ (ಬಲ್ಬ್ ಗಳು, ಬ್ಯಾಟರಿ, ಅವಧಿ ಮೀರಿದ ಔಷಧಗಳು,ಪೇಂಟ್ ಡಬ್ಬಿಗಳು ಇತ್ಯಾದಿ) ವಿಂಗಡಣೆ ಯನ್ನು ಸಾರ್ವಜನಿಕರಿಂದ ಮಾಡಿಸಿ, ಸಂಗ್ರಹಿಸಿ, ಅವುಗಳನ್ನು ಸಾಗಾಣಿಕೆ ಮಾಡಿ ಸಂಸ್ಕರಣೆ ಹಾಗೂ ವಿಲೇವಾರಿಯನ್ನು ವೈಜ್ಞಾನಿಕವಾಗಿ ಮಾಡಬೇಕು ಎಂದು ತಿಳಿಸಿದರು.

ತರಬೇತಿ ಕಾರ್ಯಾಗಾರ ಕಾರ್ಯಕ್ರಮವನ್ನು ಸಮರ್ಪಕವಾಗಿ ಅರ್ಥೈಸಿಕೊಂಡು ಸದುಪಯೋಗ ಪಡೆದು ಕೊಳ್ಳುವುದರ ಜೊತೆಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದು ತುಂಬಾ ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಪರ ಪೊಲೀಸ್ ಅಧೀಕ್ಷಕರು ತಿಮ್ಮಯ್ಯ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಶ್ರೀನಿವಾಸ್, ನಗರಸಭೆಯ ಪೌರಯುಕ್ತರಾದ ಪಂಪಶ್ರೀ, ನಗರಸಭೆಯ ಕಾರ್ಯಪಾಲಕ ಅಭಿಯಂತರರು ಪ್ರತಾಪ್, ಸುಂದರ್ ರಾಜ್, ಸಂಪನ್ಮೂಲ ವ್ಯಕ್ತಿ ರಾಘವೇಂದ್ರ ರವರು ಉಪಸ್ಥಿತರಿದ್ದರು.

# ರೈತರ ಬದುಕಿನ ನೈಜತೆ ತೆರೆದಿಡುವ ಅನ್ನಂ ಪರಬ್ರಹ್ಮ ಸ್ವರೂಪಂ ಚಿತ್ರಕ್ಕೆ ಬೆಂಬಲ ಕೋರಿಕೆ



**ಮಂಡ್ಯ:** ರಾಜವೀರ ನಿರ್ಮಾಣದ ಸೃಷ್ಟಿಕರ್ತ ಫಿಲಂಸ್ ಬ್ಯಾನರ್‌ನಡಿ ನಿರ್ಮಿತ ರೈತರ ಸಾಧಕ–ಬಾಧಕಗಳ ಆಧಾರಿತ ?ಅನ್ನಂ ಪರಬ್ರಹ್ಮ ಸ್ವರೂಪಂ? ಚಲನಚಿತ್ರ ಪ್ರದರ್ಶನಗೊಳ್ಳುತ್ತಿದ್ದು, ಜಿಲ್ಲೆಯ ರೈತ ಬಂಧುಗಳು ಹಾಗೂ ಸಿನಿರಸಿಕರು ವೀಕ್ಷಿಸಿ ಬೆಂಬಲಿಸಬೇಕು ಎಂದು ಚಿತ್ರದ ನಿರ್ದೇಶಕ ರಾಜೇಗೌಡ ಮನವಿ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಚಿತ್ರವು ಮಂಡ್ಯ ತಾಲೂಕಿನ ಸಾತನೂರು ಗ್ರಾಮದ ವೆಂಕಟೇಶ್ವರ ಚಿತ್ರಮಂದಿರದಲ್ಲಿ ಪ್ರತಿದಿನ ನಾಲ್ಕು ಪ್ರದರ್ಶನಗಳಲ್ಲಿ ಪ್ರದರ್ಶಿತವಾಗುತ್ತಿದೆ ಎಂದು ಹೇಳಿದರು.

ರೈತ ನಾಯಕ ಕೆ.ಎಸ್. ಪುಟ್ಟಣ್ಣಯ್ಯ ಅವರ ಕನಸಿನ ಚಿತ್ರವಾಗಿರುವ ಇದು, ಅವರ ಸಹಕಾರದೊಂದಿಗೆ ಎಂಟು ವರ್ಷಗಳ ಸುದೀರ್ಘ ಅವಧಿಯಲ್ಲಿ ಚಿತ್ರೀಕರಣ ಪೂರ್ಣಗೊಂಡಿದೆ. ತಮಿಳುನಾಡಿನೊಂದಿಗೆ ನೀರಿನ ಹಂಚಿಕೆ ವಿವಾದ, ರೈತರ ಜೀವನದ ನೈಜತೆ, ಜೀವನ ಶೈಲಿ ಮತ್ತು ಸಂಕಷ್ಟಗಳನ್ನು ತೋರಿಸುವುದು ಚಿತ್ರದ ಮುಖ್ಯ ಉದ್ದೇಶವಾಗಿದೆ ಎಂದು ವಿವರಿಸಿದರು.

ಮದ್ದೂರು ತಾಲೂಕಿನ ದೇಶಹಳ್ಳಿ ಗ್ರಾಮದ ಮೂಲದ ನಾನು ಹಲವು ವರ್ಷಗಳಿಂದ ಚಲನಚಿತ್ರೋದ್ಯಮದಲ್ಲಿ ತೊಡಗಿಕೊಂಡಿದ್ದು, ಕೋಲಾರ ದಲ್ಲಿಯೂ 10 ಎಕರೆ ಜಮೀನನ್ನು ಭೋಗ್ಯಕ್ಕೆ ಪಡೆದು ಕೃಷಿ ಮಾಡುತ್ತಿದ್ದೇನೆ. ರೈತನಾಗಿ ರೈತರ ಬದುಕಿನ ನಿಜಸ್ಥಿತಿಯನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ರಾಮನಗರ, ಮಂಡ್ಯ ಮತ್ತು ಮೈಸೂರು ಪ್ರದೇಶಗಳಲ್ಲಿ ಈ ಚಿತ್ರವನ್ನು ಚಿತ್ರೀಕರಿಸಲಾಗಿದೆ ಎಂದು ತಿಳಿಸಿದರು. ಗೋಷ್ಠಿಯಲ್ಲಿ ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜೇಗೌಡ, ತಾಲೂಕು ಅಧ್ಯಕ್ಷ ಬೂದನೂರು ಪುಟ್ಟಸ್ವಾಮಿ, ವಿಜಯ್, ಸೂರ್ಯಗೌಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೆಲ–ಜಲ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಸಿ.ಕೆ. ಬಾಲಮನೋಹರ

**ಕೆ.ಆರ್.ನಗರ:** ಪ್ರತಿಯೊಬ್ಬರೂ ನೆಲ ಮತ್ತು ಜಲದ ಸಂರಕ್ಷಣೆಗೆ ಮುಂದಾಗಬೇಕು ಎಂದು ಪ್ರಗತಿಪರ ರೈತ ಮುಖಂಡ ಸಿ.ಕೆ. ಬಾಲಮನೋಹರ ಹೇಳಿದರು.

ತಾಲೂಕಿನ ಮುದ್ದನಹಳ್ಳಿ ಗ್ರಾಮದಲ್ಲಿ ಜಲಸಂಪನ್ಮೂಲ ಇಲಾಖೆ ಹಾಗೂ ಧಾರವಾಡದ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ ಆಯೋಜಿಸಿದ್ದ ಸಮಗ್ರ ಜಲ ಸಂಪನ್ಮೂಲ ಸಂರಕ್ಷಣೆ ಮತ್ತು ನಿರ್ವಹಣೆ ಕುರಿತ ಗ್ರಾಮ ಮಟ್ಟದ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಣ್ಣಿನ ಸವಕಳಿ ತಪ್ಪಿಸಲು ನೀರನ್ನು ಮಿತವಾಗಿ ಬಳಸುವುದು ಅಗತ್ಯ ಎಂದರು.



ಯಾವ ಬೆಳೆಗಳಿಗೆ ಎಷ್ಟು ನೀರು ಬೇಕು ಅಷ್ಟೇ ಪ್ರಮಾಣದಲ್ಲಿ ನೀರನ್ನು ಬಳಸಬೇಕು. ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು. ಮಣ್ಣಿನ ಪರೀಕ್ಷೆ ಮಾಡಿಸುವ ಮೂಲಕ ಯಾವ ಮಣ್ಣಿನಲ್ಲಿ ಯಾವ ಬೆಳೆ ಬೆಳೆಸಬೇಕು ಎಂಬುದು ತಿಳಿದು ನಷ್ಟವನ್ನು ತಪ್ಪಿಸಬಹುದು ಎಂದು ತಿಳಿಸಿದರು. ಮಣ್ಣಿನ ಫಲವತ್ತತೆಯನ್ನು ಕಾಪಾಡಲು ಹಸಿರೆಲೆ ಗೊಬ್ಬರವನ್ನು ಬಳಸಬೇಕು ಹಾಗೂ ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಬೇಕು ಎಂದು ಸಲಹೆ ನೀಡಿದರು. ಕಾರ್ಯಾಗಾರದಲ್ಲಿ ನೀರು ಬಳಕೆದಾರರ ಸಹಕಾರ ಸಂಘದ ಅಧ್ಯಕ್ಷ ಸದಾಶಿವಕೀರ್ತಿ, ಮಾಜಿ ಅಧ್ಯಕ್ಷ ತಿಮ್ಮೇಗೌಡ, ಉಪಾಧ್ಯಕ್ಷ ತಮ್ಮೇಗೌಡ, ನಿರ್ದೇಶಕರು ರಾಜೇಗೌಡ, ಕ್ಷೇತ್ರಪಾಲ, ಗೀತಾ ಮಹೇಶ್, ಸಿಇಒ ಮಹೇಶ್ ಸೇರಿದಂತೆ ಹಲವು ಗಣ್ಯರು ಹಾಗೂ ರೈತರು ಭಾಗವಹಿಸಿದ್ದರು.

# ರೈತನಿಗೆ ಉತ್ಪಾದನೆಯಲ್ಲಿ ಗೆಲುವು ಮಾರುಕಟ್ಟೆಯಲ್ಲಿ ಸೋಲು

## ನೇರ ಮಾರುಕಟ್ಟೆ ನೇಗಿಲ ಸೇನೆ ಲೋಕಾರ್ಪಣೆ: ಯೋಗೀಶ್ ಅಪ್ಪಾಜಯ್ಯ

**ಮಂಡ್ಯ:** ರೈತ ಉತ್ಪಾದನೆಯಲ್ಲಿ ಗೆಲ್ಲುತ್ತಿದ್ದಾನೆ, ಮಾರುಕಟ್ಟೆಯಲ್ಲಿ ಸೋಲುತ್ತಿದ್ದಾನೆ. ರೈತ ಗೆಲ್ಲಬೇಕು. ನನ್ನ ದೃಷ್ಟಿಯಲ್ಲಿ ರೈತನ ಬೆವರು ಬ್ರಾಂಡ್ ಆಗಬೇಕು. ಸಮಾಜದ ಪ್ರತಿಯೋಬ್ಬ ನಾಗರಿಕ ರೈತ ಬ್ರಾಂಡ್ ಗಳ ರಾಯಭಾರಿ ಆಗಬೇಕು ಎಂದು ರೈತ ಮಾರುಕಟ್ಟೆ ಮೆಂಟರ್ ಯೋಗಿಶ್ ಅಪ್ಪಾಜಯ್ಯ ತಿಳಿಸಿದರು.

ಕ್ಯಾತುಂಗೆರೆಯ ವಿಕಸನ ಜೋಗುಳ ದತ್ತು ಕೇಂದ್ರದಲ್ಲಿ ಮೇ 26, ಮಂಗಳವಾರ ಬೆಳಿಗ್ಗೆ ಆಯೋಜಿಸಿದ್ದ 'ಕರ್ನಾಟಕ ರಾಜ್ಯ ರೈತ ಬ್ರ್ಯಾಂಡ್ ಗಳ(ಉತ್ಪನ್ನಗಳ) ನೇರ ಮಾರಾಟ ಅಭಿವೃದ್ಧಿ ವೇದಿಕೆ–ನೇಗಿಲ ಸೇನೆ' ತಂತ್ರಜ್ಞಾನ ಆಧರಿತ ರೈತ ಮಾರುಕಟ್ಟೆ ಸಂಸ್ಥೆಯ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ನೇರ ಮಾರಾಟ ವೆಬ್ ಸೈಟ್, ಆಪ್, ಸಾಮಾಜಿಕ ಜಾಲತಾಣಗಳನ್ನು ಪರಿಚಯಿಸಿ ಮಾತನಾಡಿದರು.



ನಮ್ಮ ಆಹಾರ ಪದ್ಧತಿ ಬದಲಾಗಿ ನಮ್ಮ ಮಾರುಕಟ್ಟೆಗೆ ನಾವೇ ಮುಳುವಾಗಿದ್ದೇವೆ. ಚಪಾತಿ ತಿನ್ನುವ ಮೂಲಕ ರಾಗಿ ಬೇಡಿಕೆ ಕಡಿಮೆಯಾಗಿದೆ. ಹಾಗಾಗಿ ನಮ್ಮ ರೈತರು ರಾಗಿಯನ್ನು ಬೆಳೆಯುವುದನ್ನು ಬಿಟ್ಟಿದ್ದಾರೆ ಎಂದು ರೈತರ ಅವನತಿಯನ್ನು ಅವಲೋಕಿಸಿದರು.

ರೈತ ಮತ್ತು ಕೃಷಿ ಐಸಿಯುನಲ್ಲಿದೆ. ಯುವಕರು ಹಳ್ಳಿಯಲ್ಲಿ ನಿಲ್ಲುತ್ತಿಲ್ಲ. ಕೃಷಿ ಕಡೆಗಣಿಸಿದ್ದಾರೆ. ಕೃಷಿ ಬದುಕು ಬಹಳ ಸಂದಿಗ್ಧ ಪರಿಸ್ಥಿತಿಯಲ್ಲಿದೆ. ರೈತನನ್ನು ಮಾರುಕಟ್ಟೆಯಲ್ಲಿ ಗೆಲ್ಲಿಸುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕನ ಮೇಲಿದೆ ಎಂದು ತಿಳಿಸಿದರು.

ನಾವೇಕೆ ಕಿರಾಣಿ ಅಂಗಡಿ ಹೋಗಬೇಕು? ಮಾಲ್ ಗಳಿಗೆ ಮಣಿಯಬೇಕು. ರೈತ ಉತ್ಪಾದಕ ಕಂಪನಿಗಳು, ಸ್ವಸಹಾಯ ಸಂಘಗಳು, ಸ್ತ್ರೀ ಶಕ್ತಿ ಸಂಘಗಳನ್ನು ಆಶ್ರಯ ತಾಣಗಳನ್ನಾಗಿ (ಸ್ಟಾಕ್ ಸೆಂಟರ್) ಮಾಡಿ, ಎಲ್ಲರೂ ರೈತ ರಾಯಭಾರಿಗಳಾಗಿ ಗ್ರಾಹಕರಾದರೆ ನೇರ ಮಾರುಕಟ್ಟೆ ರೂಪುಗೊಳ್ಳುತ್ತದೆ. ರೈತರ ಬೆಳೆಗಳಿಗೆ ಯೋಗ್ಯ ಬೆಲೆ ದೊರೆತಂತಾಗುತ್ತದೆ ಎಂದು ನೇಗಿಲ ಸೇನೆ ಮಾರುಕಟ್ಟೆ ಪರಿಕಲ್ಪನೆಯನ್ನು ವಿವರಿಸಿದರು.

ಮಂಡ್ಯ, ರಾಮನಗರ, ಚಾಮರಾಜನಗರ, ಮೈಸೂರು ಜಿಲ್ಲೆಗಳಲ್ಲಿ ನೇಗಿಲ ಸೇನೆಯನ್ನು ಪ್ರಾಯೋಗಿಕವಾಗಿ ಜಾರಿ ಮಾಡಿ ನಂತರ ರಾಜ್ಯ, ದೇಶದಾದ್ಯಂತ ಅನುಷ್ಠಾನಗೊಳಿಸಲಾಗುವುದು. ಇದು ರೈತರನ್ನು ಸ್ವಾವಲಂಬನೆಯನ್ನಾಗಿಸುವುದು. ರೈತ ಬ್ರಾಂಡ್ ಗಳನ್ನು ಬಳಸಿ, ಉಳಿಸಿ, ಬೆಳಸಿ ಎಂದು ಮನವಿ ಮಾಡಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ವಿ.ಎಸ್. ಅಶೋಕ್ ಅವರು ರೈತ ಬ್ರಾಂಡ್ ಉತ್ಪನ್ನಗಳಾದ ಟೀ ಶರ್ಟ್, ಬ್ಯಾಡ್ಜ್, ಟೋಪಿ ಬಿಡುಗಡೆ ಮಾಡಿ ಮಾತನಾಡಿ, ರೈತನ ಪರಿಸ್ಥಿತಿ ಮೊದಲಿಗಿಂತ ಕೆಟ್ಟದ್ದಾಗಿದೆ. ಅವನ ಪರಿಸ್ಥಿತಿ ಯಾರಿಗೂ ಅರ್ಥ ವಾಗುತ್ತಿಲ್ಲ. ಅನಿವಾರ್ಯವಾಗಿ ತಮ್ಮದೇ ಬ್ರಾಂಡ್ ಸೃಷ್ಟಿಸಿಕೊಳ್ಳಬೇಕಿದೆ. ಬ್ರಾಂಡ್ ಮಾಡಿಕೊಳ್ಳಲು 5–6 ವರ್ಷಗಳಿಂದ ಹೇಳಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 5 ಲಕ್ಷ 60 ಸಾವಿರ ರೈತರಿದ್ದಾರೆ. ವ್ಯವಸಾಯ ಅನಿವಾರ್ಯವಾಗಿ ಮಾಡಲೇಬೇಕಿದೆ. ಮುಂದಿನ ದಿನಗಳಲ್ಲಿ ಆಹಾರ ಬೆಲೆಯೂ ಜಾಸ್ತಿಯಾಗಲಿದೆ. ಹಾಗಾಗದಂತೆ ನೋಡಿ ಕೊಳ್ಳಬೇಕಿದೆ. ಆ ನಿಟ್ಟಿನಲ್ಲಿ ಸರ್ಕಾರ ಯೋಚಿಸುತ್ತಿದೆ ಎಂದು ತಿಳಿಸಿದರು.

# ಗ್ರಾಮಗಳಲ್ಲಿ ಕುಡಿಯುವ ನೀರಿಗೆ ತೊಂದರೆ ಆಗದಂತೆ ಕ್ರಮ

## ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯಲ್ಲಿ ಸಿಇಒ ನಂದಿನಿ ಕೆ.ಆರ್. ಸೂಚನೆ

**ಮಂಡ್ಯ:** ಜಿಲ್ಲೆಯ ಯಾವುದೇ ಗ್ರಾಮದಲ್ಲಿಯೂ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಎದುರಾಗದಂತೆ ನಿಯಮಾನುಸಾರ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಮತ್ತು ಉಪವಿಭಾಗದ ಅಧಿಕಾರಿಗಳಿಗೆ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಸೂಚಿಸಿದರು.

ಮಂಗಳವಾರ ಜಿ.ಪಂ. ಸಿಇಓರವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ನ ಕೆಸ್ವಾನ್ ಸಭಾಂಗಣದಲ್ಲಿ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಆದ್ಯತೆ ಹಾಗೂ ಅವಶ್ಯಕತೆಯ ಆಧಾರದಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ತೆಗೆದುಕೊಂಡು ಸಾರ್ವಜನಿಕರಿಗೆ ನೀರು ಸರಬರಾಜಿನಲ್ಲಿ ಯಾವುದೇ ವ್ಯತ್ಯಯವಾಗದಂತೆ ನೀರು ಸರಬರಾಜು ಮಾಡಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ಯಾವುದೇ ಗ್ರಾಮದಲ್ಲಿ ನೀರಿನ ಗುಣಮಟ್ಟದಲ್ಲಾಗಲೀ, ನೀರಿನ ಪ್ರಮಾಣದಲ್ಲಾಗಲೀ ವ್ಯತ್ಯಾಸವಾಗಬಾರದು ಹಾಗೂ ಕಟ್ಟ ಕಡೆಯ ವ್ಯಕ್ತಿಗೂ ನಿಗಧಿತ ಪ್ರಮಾಣದ ನೀರು ಲಭ್ಯವಾಗುವಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು. ಸಮಸ್ಯೆ ಎದುರಾಗಬಹುದೆಂದು ಗುರುತಿಸಲಾಗಿರುವ



ಗ್ರಾಮಗಳಲ್ಲಿ ಸಮಸ್ಯೆಯ ಸ್ವರೂಪ, ಸಮಸ್ಯೆ ಪರಿಹರಿಸಲು ತೆಗೆದುಕೊಳ್ಳಬಹುದಾದ ಕ್ರಮ ಹಾಗೂ ಸದರಿ ಕ್ರಮಕ್ಕೆ ತಗಲುವ ವೆಚ್ಚದ ಕುರಿತು ಕ್ರಿಯಾ ಯೋಜನೆ ಸಿದ್ಧಪಡಿಸಿ ಸಲ್ಲಿಸಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಕೊರತೆ, ಬೋರ್‌ವೆಲ್‌ಗಳಲ್ಲಿ ನೀರಿನ ಮಟ್ಟ ಕುಸಿತ, ಪೈಪ್‌ಲೈನ್ ದುರಸ್ತಿ, ವಿದ್ಯುತ್ ಸಮಸ್ಯೆಗಳಿಂದ ನೀರು ಸರಬರಾಜಿನಲ್ಲಿ ಉಂಟಾಗುತ್ತಿರುವ ವ್ಯತ್ಯಯ ಸೇರಿದಂತೆ ಹಲವು ವಿಷಯಗಳ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು. ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಅಗತ್ಯವಿರುವ ಗ್ರಾಮಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಿಇಓ ಸೂಚಿಸಿದರು.

ಗ್ರಾಮಗಳಲ್ಲಿನೀರಿನಸಮಸ್ಯೆಗಂಭೀರವಾಗಿರುವ ಪ್ರದೇಶಗಳನ್ನು ಗುರುತಿಸಿ, ಹೊಸ ಬೋರ್‌ವೆಲ್ ಕೊರೆಸುವುದು, ಕೆಟ್ಟು ನಿಂತಿರುವ ಮೋಟಾರ್ ಮತ್ತು ಪಂಪ್‌ಸೆಟ್‌ಗಳನ್ನು ದುರಸ್ತಿಗೊಳಿಸುವುದು, ಅಗತ್ಯವಿದ್ದಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡುವುದು, ತಾತ್ಕಾಲಿಕ ಪೈಪ್‌ಲೈನ್ ವ್ಯವಸ್ಥೆ ಕಲ್ಪಿಸುವುದು ಸೇರಿದಂತೆ ತುರ್ತು ಕ್ರಮಗಳನ್ನು ತಕ್ಷಣ ಜಾರಿಗೊಳಿಸುವಂತೆ ತಿಳಿಸಲಾಯಿತು.

ಸಹಾಯವಾಣಿಗೆ ಸ್ವೀಕೃತವಾಗುವ ದೂರು/ಮನವಿಗಳ ವಿವರ ನೀಡಿ: ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಾರ್ವಜನಿಕರಿಂದ ದೂರುಗಳು ಮತ್ತು ಮನವಿಗಳನ್ನು ತಕ್ಷಣ ಸ್ವೀಕರಿಸಿ ಅಗತ್ಯ ಕ್ರಮ ಕೈಗೊಳ್ಳುವ ಉದ್ದೇಶದಿಂದ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಹಾಯವಾಣಿಗಳನ್ನು ತೆರೆಯಲಾಗಿದ್ದು, ಪ್ರತೀ ವಾರ ಸ್ವೀಕೃತವಾದ ದೂರುಗಳು ಮತ್ತು ಅವುಗಳಿಗೆ ತೆಗೆದುಕೊಳ್ಳಲಾದ ಕ್ರಮಗಳ ಬಗ್ಗೆ ಪ್ರತೀ ವಾರ ಮಾಹಿತಿ ಸಲ್ಲಿಸುವಂತೆ ಅಧಿಕಾರಿಗಳು ತಿಳಿಸಿದರು.

ಜಲ ಜೀವನ ಮಿಷನ್ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳ ಕುರಿತು ತಾಲ್ಲೂಕುವಾರು ಪರಿಶೀಲನೆ ನಡೆಸಿ, ಮನೆಮನೆಗೆ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶದ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು. ಕಾಮಗಾರಿಗಳಲ್ಲಿ ವಿಳಂಬವಾಗುತ್ತಿರುವ ಸ್ಥಳಗಳಲ್ಲಿ ಗುತ್ತಿಗೆದಾರರೊಂದಿಗೆ ಸಮನ್ವಯ ಸಾಧಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.


ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳ ಪ್ರಗತಿಯನ್ನು ಕೂಡ ಸಭೆಯಲ್ಲಿ ಪರಿಶೀಲಿಸಲಾಯಿತು. ಗ್ರಾಮೀಣ ಪ್ರದೇಶಗಳಲ್ಲಿ ನಿರಂತರ ಹಾಗೂ ಸುರಕ್ಷಿತ ನೀರು ಸರಬರಾಜು ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಶೀಘ್ರ ಪೂರ್ಣಗೊಳಿಸಬೇಕೆಂದು ಸಿಇಓರವರು ಸೂಚಿಸಿದರು.

# ಓಟದ ಬಿರುಗಾಳಿ: ಗುರಿಂದರ್‌ವೀರ್



ಡಾ.ಸುಧಾಕರ.ಜಿ.ಲಕ್ಕವಳ್ಳಿ

ದೇಶದ ತುಂಬಾ ಕ್ರಿಕೆಟ್ ಆಟದ ದೊಡ್ಡ ಸುದ್ದಿ ಇರುವಾಗ,ಯಾವ ಸದ್ದಿಲ್ಲದೆ ಭಾರತದ ಓಟದ ಹಾದಿಯಲ್ಲಿ ಹೊಸ ಇತಿಹಾಸ ಬರೆದ ಹೆಸರು ಗುರಿಂದರ್‌ವೀರ್ ಸಿಂಗ್. ಇತ್ತೀಚೆಗೆ ನೂರು ಮೀಟರ್ ಓಟವನ್ನು ಕೇವಲ 10.09 ಸೆಕೆಂಡುಗಳಲ್ಲಿ ಓಡಿ ಮುಗಿಸಿ,ಇವರು ಭಾರತದ ಅತಿ ವೇಗದ ಓಟಗಾರ ಎನಿಸಿಕೊಂಡಿದ್ದಾರೆ. ಮಿಂಚು ಬೆಳಕು ಇಲ್ಲದ ಕಡೆ ಬೆವರು ಸುರಿಸಿ ದೇಶದ ಹೆಸರು ಬೆಳಗಬಹುದು ಎಂದು ಇವರು ತೋರಿಸಿಕೊಟ್ಟಿದ್ದಾರೆ.




ಸ್ಫೂರ್ತಿ ಸುಧೆ - 29

ಪಂಜಾಬ್‌ನ ಸಣ್ಣ ಹಳ್ಳಿಯಿಂದ ಬಂದ ಗುರಿಂದರ್‌ವೀರ್‌ಗೆ ದಾರಿ ಸುಲಭವಾಗಿರಲಿಲ್ಲ. ಒಳ್ಳೆಯ ಮೈದಾನ ಇರಲಿಲ್ಲ, ಬೇಕಾದ ನೆರವು ಸಿಗಲಿಲ್ಲ, ಪದೇ ಪದೇ ಗಾಯ ಕಾಡಿತು, ಅನೇಕರು ಇವರನ್ನು ನಂಬಲಿಲ್ಲ. ಆದರೂ ಅವರು ಎದೆಗುಂದಲಿಲ್ಲ. ಸೋತಾಗ ನಾನು ಇನ್ನೂ ಮುಗಿದಿಲ್ಲ, ಕಾಯಿರಿ ಮತ್ತು ನೋಡಿ ಎಂದು ಫಲಕ ಹಿಡಿದು ನಿಂತರು. ಆ ಒಂದೇ ಮಾತು ಅವರ ಧೈರ್ಯಕ್ಕೆ ಸಾಕ್ಷಿ ಆಯಿತು.

ಗೆಲುವು ಒಂದೇ ದಿನದಲ್ಲಿ ಬರುವುದಿಲ್ಲ. ವರ್ಷಗಟ್ಟಲೆ ಮೌನವಾಗಿ ಅಭ್ಯಾಸ, ದಿನವೂ ತನ್ನ ಹಳೆಯ ಓಟಕ್ಕಿಂತ ಸ್ವಲ್ಪ ವೇಗವಾಗಿ ಓಡುವ ಹಠ ಬೇಕು ಎಂದು ಗುರಿಂದರ್‌ವೀರ್ ತೋರಿಸಿದ್ದಾರೆ. ಒಂದು ಸೆಕೆಂಡಿನ ಸಣ್ಣ ಪಾಲಿಗಾಗಿ ಅವರು ಹರಿಸಿದ ಬೆವರು ನಮಗೆ ದೊಡ್ಡ ಪಾಠ.

ಎಲ್ಲರೂ ಕ್ರಿಕೆಟ್‌ನ ಮಿಂಚಿಗೆ ಮಾರುಹೋದಾಗ, ಓಟದ ಹಾದಿಯಲ್ಲಿ ದೇಶದ ಬಾವುಟ ಎತ್ತಿ ಹಿಡಿದ ಈ ಓಟ ಭಾರತದ ಯುವಶಕ್ತಿಯ ಸಾಮರ್ಥ್ಯಕ್ಕೆ ಕನ್ನಡಿ. ಕನಸು ಕಾಣಿ, ಕಷ್ಟಪಡಿ,ಎಂದಿಗೂ ಬಿಡಬೇಡಿ ಇದೇ ಗುರಿಂದರ್‌ವೀರ್ ಕೊಡುವ ಹುರುಪು.

# ಭಾರತೀಯರಲ್ಲಿ ನಾಗರಿಕ ಪ್ರಜ್ಞೆಯ ಕೊರತೆ

ಒಂದು ದೇಶದ ಪ್ರಗತಿಯನ್ನು ಕೇವಲ ಅಲ್ಲಿನ ಒಟ್ಟು ದೇಶಿ ಉತ್ಪನ್ನ (GDP), ಗಗನಚುಂಬಿ ಕಟ್ಟಡಗಳು ಅಥವಾ ಆಧುನಿಕ ಹೆದ್ದಾರಿಗಳಿಂದ ಅಳೆಯಲು ಸಾಧ್ಯವಿಲ್ಲ. ನಿಜವಾದ ರಾಷ್ಟ್ರೀಯ ಪ್ರಗತಿ ಇರುವುದು ಆ ದೇಶದ ಸಾಮಾನ್ಯ ಪ್ರಜೆ ಸಾರ್ವಜನಿಕ ಸ್ಥಳಗಳಲ್ಲಿ ಹೇಗೆ ವರ್ತಿಸುತ್ತಾನೆ ಎಂಬುದರ ಮೇಲೆ. ಇಂದು ಭಾರತವು ಜಾಗತಿಕವಾಗಿ ಆರ್ಥಿಕ ಮತ್ತು ತಾಂತ್ರಿಕ ಮಹಾಶಕ್ತಿಯಾಗಿ ಹೊರಹೊಮ್ಮುತ್ತಿದೆ. ಆದರೆ, ಇಂದಿಗೂ ಸಾರ್ವಜನಿಕ ಸ್ಥಳಗಳಲ್ಲಿ ಸಾಲಿನಲ್ಲಿ ನಿಲ್ಲುವುದು, ರಸ್ತೆಯಲ್ಲಿ ಕಸ ಹಾಕದಿರುವುದು ಅಥವಾ ಸಂಚಾರ ನಿಯಮಗಳನ್ನು ಪಾಲಿಸುವಂತಹ ಕನಿಷ್ಠ 'ನಾಗರಿಕ ಪ್ರಜ್ಞೆ'ಯ (Civic Sense) ವಿಚಾರಕ್ಕೆ ಬಂದಾಗ ನಾವು ಜಾಗತಿಕ ಮಟ್ಟದಲ್ಲಿ ತಲೆತಗ್ಗಿಸುವಂತಾಗಿದೆ.

ನಾಗರಿಕ ಪ್ರಜ್ಞೆ ಎಂದರೆ ಕೇವಲ ಕಾನೂನಿಗೆ ಹೆದರುವುದಲ್ಲ; ಅದು ನಮ್ಮ ಜೊತೆ ಬದುಕುವ ಸಹಜೀವಿಗಳಿಗೆ ಮತ್ತು ನಾವು ಬಳಸುವ ಸಾರ್ವಜನಿಕ ಆಸ್ತಿಗೆ ನೀಡುವ ಕನಿಷ್ಠ ಗೌರವ. ಇದು ನಮ್ಮ ಸಾಮಾಜಿಕ ಪ್ರಬುದ್ಧತೆಯ ಅಳತೆಗೋಲು ಕೂಡ ಹೌದು. ಭಾರತದಂತಹ ವೇಗವಾಗಿ ಬೆಳೆಯುತ್ತಿರುವ ರಾಷ್ಟ್ರದಲ್ಲಿ, ಕೇವಲ ಮೂಲಸೌಕರ್ಯಗಳನ್ನು ನಿರ್ಮಿಸುವುದಕ್ಕಿಂತಲೂ ಹೆಚ್ಚಾಗಿ ಜನರ ನಡವಳಿಕೆಯಲ್ಲಿ ಸುಧಾರಣೆ ತರುವುದು ಇಂದು ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ನಮ್ಮ ಸಮಾಜದ ಸವಾಲುಗಳು, ಸಾಂಸ್ಕೃತಿಕ ಮನಸ್ಥಿತಿ ಮತ್ತು ಪರಿಹಾರಗಳನ್ನು ಆಳವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ.

**1. ನಮ್ಮ ಮುಂದಿರುವ ಪ್ರಮುಖ ಸವಾಲುಗಳು :**

ನಮ್ಮ ದೇಶದಲ್ಲಿ ವೈಯಕ್ತಿಕ ಸ್ವಚ್ಛತೆಗೆ ಅತಿ ಹೆಚ್ಚು ಒತ್ತು ನೀಡಲಾಗುತ್ತದೆ. ಪ್ರತಿ ದಿನ ಸ್ನಾನ ಮಾಡುವುದು, ಮನೆಯನ್ನು ಗುಡಿಸಿ ಸಾರಿಸುವುದು ನಮ್ಮ ಸಂಪ್ರದಾಯದ ಭಾಗ. ಆದರೆ, "ನನ್ನ ಮನೆ" ಎಂಬ ಪರಿಕಲ್ಪನೆ ನಮ್ಮ ಹೊಸ್ತಿಲಲ್ಲೇ ಮುಗಿದುಹೋಗುತ್ತದೆ. ಮನೆಯ ಕಸವನ್ನು ಹೊರಗಿನ ರಸ್ತೆಗೆ ಎಸೆಯುವಾಗ ಅದು ನಮ್ಮ ಸಾರ್ವಜನಿಕ ಆಸ್ತಿ ಮತ್ತು ಆರೋಗ್ಯದ ಮೇಲೆ ಬೀರುವ ಪರಿಣಾಮದ ಅರಿವು ನಮಗಿರುವುದಿಲ್ಲ. ಅಂದರೆ, ನಮ್ಮ ಸ್ವಚ್ಛತೆಯ ಪರಿಕಲ್ಪನೆಯು 'ನನ್ನದು' ಮತ್ತು 'ಬೇರೆಯವರದ್ದು' ಎಂಬ ಭೇದದ ಮೇಲೆ ನಿಂತಿದೆ.


ಮನಃಶಾಸ್ತ್ರದಲ್ಲಿ 'ಒಡೆದ ಕಿಟಕಿ ಸಿದ್ಧಾಂತ' (Broken Windows Theory) ಎಂಬ ಪರಿಕಲ್ಪನೆಯಿದೆ. ಒಂದು ಕಟ್ಟಡದ ಒಂದು ಕಿಟಕಿ ಒಡೆದಿದ್ದು, ಅದನ್ನು ಯಾರೂ ಸರಿಪಡಿಸದಿದ್ದರೆ, ಜನರು ಉಳಿದ ಕಿಟಕಿಗಳನ್ನೂ ಒಡೆಯಲು ಹಿಂಜರಿಯುವುದಿಲ್ಲ. ರಸ್ತೆ ಬದಿಯ ಕಸದ ವಿಚಾರದಲ್ಲೂ ಇದೇ ಆಗುತ್ತದೆ. ಒಬ್ಬ ಕಸ ಹಾಕಿದ ಜಾಗವನ್ನು ನೋಡಿ ಉಳಿದ ಹತ್ತು ಜನರೂ ಅಲ್ಲೇ ಕಸ ಹಾಕುತ್ತಾರೆ. "ನಾನೊಬ್ಬ ಮಾಡಿದರೆ ಏನಾಗುತ್ತದೆ?" ಎಂಬ ಗುಂಪು ಮನಸ್ಥಿತಿ (Mob Mentality)ನಮ್ಮಲ್ಲಿದೆ. ತಪ್ಪು ಮಾಡುವುದು ಸಾಮಾನ್ಯ ಎಂಬ ಸಾಮಾಜಿಕ ಒಪ್ಪಿಗೆ ಸಿಕ್ಕಂತಾದಾಗ, ಅದು ವ್ಯವಸ್ಥಿತ 'ಬ್ಲ್ಯಾಕ್ ಸ್ಪಾಟ್' ಆಗಿ ಬದಲಾಗುತ್ತದೆ.

ಇದಕ್ಕೆ ಪೂರಕವೆಂಬಂತೆ, ನಗರದ ಗೋಡೆಗಳು, ಬಸ್ ನಿಲ್ದಾಣದ ಮೂಲೆಗಳು ಅಥವಾ ಮೆಟ್ರೋ ಪಿಲ್ಲರ್‌ಗಳು ಇಂದು ಪಾನ್ ಜಗಿದು ಉಗುಳುವವರ ಸ್ವತ್ತಾಗಿ ಮಾರ್ಪಟ್ಟಿವೆ. ಸಾಂಕ್ರಾಮಿಕ ರೋಗಗಳಿಗೆ ಮುಕ್ತ ಆಹ್ವಾನ ನೀಡುವ ಈ ವರ್ತನೆ ಅತ್ಯಂತ ಅಸಹ್ಯಕರ. ಇನ್ನು ಸಾರ್ವಜನಿಕ ಶೌಚಾಲಯಗಳಿದ್ದರೂ ರಸ್ತೆ ಬದಿಯ ಗೋಡೆಗಳ ಮೇಲೆ ಮೂತ್ರ ವಿಸರ್ಜನೆ ಮಾಡುವುದು ನಮ್ಮ ಸಮಾಜದಲ್ಲಿ ಎಷ್ಟು ಸಾಮಾನ್ಯೀಕರಣಗೊಂಡಿದೆ ಎಂದರೆ, ಅದನ್ನು ತಡೆಯಲು ಗೋಡೆಗಳ ಮೇಲೆ ದೇವರ ಚಿತ್ರಗಳನ್ನು ಬಿಡಿಸಬೇಕಾದ ಅನಿವಾರ್ಯತೆ ನಮಗಿದೆ. ಇದು ನಮ್ಮ ಸಾಂಸ್ಕೃತಿಕ ಅವನತಿಯನ್ನು ಬಿಂಬಿಸುತ್ತದೆ.

**2. ರಸ್ತೆ ಮತ್ತು ಪಾದಚಾರಿ ಮಾರ್ಗಗಳ ದುರುಪಯೋಗ**

ಭಾರತದ ರಸ್ತೆಗಳಲ್ಲಿ ಸಂಚಾರ ನಿಯಮಗಳನ್ನು ಪಾಲಿಸುವುದು ಕಡ್ಡಾಯವಲ್ಲ, ಅದು ಕೇವಲ ಒಂದು 'ಸಲಹೆ' ಎಂಬಂತೆ ಜನರು ವರ್ತಿಸುತ್ತಾರೆ. ಸಿಗ್ನಲ್ ಹಳದಿ ಬಣ್ಣಕ್ಕೆ ತಿರುಗುತ್ತಿದ್ದಂತೆ ವಾಹನದ ವೇಗವನ್ನು ಕಡಿಮೆ ಮಾಡುವ ಬದಲು, ರೆಡ್ ಲೈಟ್ ಬೀಳುವ ಮುನ್ನ ಹೇಗಾದರೂ ದಾಟಬೇಕೆಂಬ ಧಾವಂತದಲ್ಲಿ 'ಸಿಗ್ನಲ್ ಜಂಪ್' ಮಾಡುವುದು ದೈನಂದಿನ ದೃಶ್ಯವಾಗಿದೆ. ಹೆಲ್ಮೆಟ್ ಧರಿಸದಿರುವುದು ಅಥವಾ ರಾಂಗ್ ರೂಟ್‌ನಲ್ಲಿ ಬರುವುದು ಕೇವಲ ಅವಸರದ ಪ್ರಶ್ನೆಯಲ್ಲ, ಬದಲಿಗೆ ಇತರರ ಬದುಕುವ ಹಕ್ಕನ್ನು ಕಸಿದುಕೊಳ್ಳುವ ಉದಾಸೀನತೆ ಮತ್ತು ಕಾನೂನಿನ ಮೇಲಿರುವ ಅಹಂಕಾರ.

ಇದರೊಂದಿಗೆ, ನಮ್ಮ ನಗರಗಳಲ್ಲಿ ಪಾದಚಾರಿಗಳ ಬದುಕು ಅತ್ಯಂತ ದುಸ್ತರವಾಗಿದೆ. ಒಂದು ಕಡೆ, ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಆದ ತಕ್ಷಣ ದ್ವಿಚಕ್ರ ವಾಹನ ಸವಾರರು ಯಾವುದೇ ಹಿಂಜರಿಕೆಯಿಲ್ಲದೆ ಫುಟ್‌ಪಾತ್‌ಗಳ ಮೇಲೆ ವಾಹನ ಚಲಾಯಿಸಲು ಆರಂಭಿಸುತ್ತಾರೆ. ಪಾದಚಾರಿಗಳ ಜೀವಕ್ಕೆ ಕುತ್ತು ತರುವ ಈ ವರ್ತನೆ ನಾಗರಿಕ ಪ್ರಜ್ಞೆಯ ಸಂಪೂರ್ಣ ದಿವಾಳಿತನವನ್ನು ತೋರಿಸುತ್ತದೆ. ಇನ್ನೊಂದು ಕಡೆ, ಪಾದಚಾರಿಗಳಿಗಾಗಿ




ನಿರ್ಮಿಸಲಾದ ಮಾರ್ಗಗಳನ್ನು ತರಕಾರಿ ವ್ಯಾಪಾರಿಗಳು, ಸಣ್ಣ ಅಂಗಡಿಗಳು ಅಥವಾ ಹೋಟೆಲ್‌ಗಳು ಆಕ್ರಮಿಸಿಕೊಳ್ಳುತ್ತವೆ. ಇದರಿಂದಾಗಿ ಜನರು ಜೀವದ ಹಂಗು ತೊರೆದು ಮುಖ್ಯ ರಸ್ತೆಯಲ್ಲೇ ನಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಮತ್ತೊಂದು ವಿಪರ್ಯಾಸವೆಂದರೆ, ಕೋಟಿಗಟ್ಟಲೆ ರೂಪಾಯಿ ವೆಚ್ಚ ಮಾಡಿ ರಸ್ತೆ ದಾಟಲು ಸರ್ಕಾರಗಳು ಸ್ಕೈವಾಕ್ ಅಥವಾ ಪಾದಚಾರಿ ಮೇಲ್ಸೇತುವೆಗಳನ್ನು ನಿರ್ಮಿಸುತ್ತವೆ. ಆದರೆ ಜನರು ನಾಲ್ಕು ಮೆಟ್ಟಿಲು ಹತ್ತಲು ಸೋಮಾರಿತನ ಪಟ್ಟು, ಬಿಡುವಿಲ್ಲದೆ ವಾಹನಗಳು ಚಲಿಸುವ ಅಪಾಯಕಾರಿ ಹೆದ್ದಾರಿಗಳಲ್ಲೇ ಜೀವವನ್ನು ಪಣಕ್ಕಿಟ್ಟು ರಸ್ತೆ ದಾಟುತ್ತಾರೆ. ಸ್ವಯಂ ಶಿಸ್ತು ಮತ್ತು ಸುರಕ್ಷತೆಯ ಅರಿವು ನಮ್ಮಲ್ಲಿ ಎಷ್ಟು ಕಡಿಮೆ ಇದೆ ಎಂಬುದಕ್ಕೆ ಈ ಸೋಮಾರಿ ಮನಸ್ಥಿತಿಗಿಂತ ದೊಡ್ಡ ಉದಾಹರಣೆ ಬೇಕಿಲ್ಲ.

**3. ಸಾರ್ವಜನಿಕ ಸೌಲಭ್ಯಗಳು ಮತ್ತು ಸ್ಥಳೀಯ ಸಂಸ್ಥೆಗಳೊಂದಿಗೆ ಸಹಕಾರ**

ಬಸ್ ನಿಲ್ದಾಣಗಳು, ಉದ್ಯಾನವನಗಳು ಮತ್ತು ಪ್ರಮುಖವಾಗಿ ಸಾರ್ವಜನಿಕ ಶೌಚಾಲಯಗಳು ಅತಿ ಶೀಘ್ರವಾಗಿ ಹಾಳಾಗಲು ನಮ್ಮ ನಿರ್ಲಕ್ಷ್ಯವೇ ಕಾರಣ. "ಇದು ಸರ್ಕಾರಿ ಆಸ್ತಿ, ನನಗೇನು?" ಎಂಬ ಧೋರಣೆ ಬದಲಾಗಬೇಕು. ಸಾರ್ವಜನಿಕ ಆಸ್ತಿಯು ವಾಸ್ತವವಾಗಿ ನಮ್ಮ ತೆರಿಗೆ ಹಣದಿಂದ ನಿರ್ಮಿತವಾದ 'ನಮ್ಮದೇ ಆಸ್ತಿ' ಎಂಬ ಅರಿವು ಮೂಡಬೇಕಿದೆ. "ಹಣ ಕೊಟ್ಟು ಬಳಸುವ ಶೌಚಾಲಯವಾದರೂ ಅದನ್ನು ನಮಗಿಂತ ಮುಂಚೆ ಬಳಸಿದವರು ಹೇಗೆ ಬಿಟ್ಟು ಹೋಗಿದ್ದಾರೋ, ನಾವೂ ಹಾಗೇ ಬಿಟ್ಟು ಬರಬಹುದು" ಎಂಬ ಕೊಳಕು ಧೋರಣೆಯನ್ನು ಬಿಟ್ಟು, ಬಳಸಿದ ನಂತರ ಕಡ್ಡಾಯವಾಗಿ ಫ್ಲಶ್ ಮಾಡುವುದು ಮತ್ತು ನೀರನ್ನು ಪೋಲು ಮಾಡದಿರುವುದು ಕನಿಷ್ಠ ನಾಗರಿಕ ಧರ್ಮವಾಗಿದೆ.

ಪೌರ ಕಾರ್ಮಿಕರು ಅಥವಾ ಸಂಚಾರ ಪೊಲೀಸರು ನಮ್ಮ ಶತ್ರುಗಳಲ್ಲ, ಬದಲಿಗೆ ಅವರು ನಮ್ಮ ಜೀವನವನ್ನು ಸುಗಮಗೊಳಿಸುವ ಸಮಾಜದ 'ಆರೋಗ್ಯ ರಕ್ಷಕರು'. ನಾಗರಿಕರು ಸ್ಥಳೀಯ ಸಂಸ್ಥೆಗಳೊಂದಿಗೆ ಸಹಕರಿಸಲು ಮೂಲದಲ್ಲೇ ತ್ಯಾಜ್ಯ ವಿಂಗಡಣೆ (Source Segregation) ಮಾಡುವುದು ಅತ್ಯಗತ್ಯ. ಹಸಿ ಕಸ, ಒಣ ಕಸ ಮತ್ತು ಸ್ಯಾನಿಟರಿ ತ್ಯಾಜ್ಯವನ್ನು ಮನೆಯಲ್ಲೇ ಬೇರ್ಪಡಿಸಿ ಕೊಡುವುದು ನಮ್ಮ ಪ್ರಾಥಮಿಕ ಕರ್ತವ್ಯ. ಮಿಶ್ರ ಕಸವನ್ನು ಪ್ರಕ್ರಿಯೆಗೊಳಿಸುವುದು ನಾಗರಿಕ ಸಂಸ್ಥೆಗಳಿಗೆ ಅಸಾಧ್ಯವಾದ ಕೆಲಸ. ಇದರೊಂದಿಗೆ, ಇಂದು ಬಹುತೇಕ ನಗರಗಳಲ್ಲಿ ದೂರು ಮತ್ತು ಪರಿಹಾರಕ್ಕಾಗಿ ಮೊಬೈಲ್ ಆ?ಯಪ್ಗಳಿವೆ (ಉದಾಹರಣೆಗೆ ಸ್ವಚ್ಛತಾ ಆ?ಯಪ್). ರಸ್ತೆ ಆಕ್ರಮಣ, ರಸ್ತೆ ಗುಂಡಿ ಅಥವಾ ಒಡೆದ ಪೈಪ್ಲೈನ್ ಸಮಸ್ಯೆಯನ್ನು ಕಂಡಾಗ ಕೇವಲ ವ್ಯವಸ್ಥೆಯನ್ನು ಬೈಯುವ ಬದಲು, ಡಿಜಿಟಲ್ ಸಹಭಾಗಿತ್ವದ ಮೂಲಕ ಜವಾಬ್ದಾರಿಯುತವಾಗಿ ದೂರು ದಾಖಲಿಸಬೇಕು.

ನಮ್ಮ ದೇಶದ ಬೃಹತ್ ಜನಸಂಖ್ಯೆಯೂ ಈ ಸವಾಲುಗಳಿಗೆ ಒಂದು ಕಾರಣವಿರಬಹುದು. ಸೀಮಿತ ಸೌಲಭ್ಯಗಳಿಗಾಗಿ ಅಸಂಖ್ಯಾತ ಜನರು ಸ್ಪರ್ಧಿಸಬೇಕಾದಾಗ, 'ನನಗೆ ಸಿಗುವುದೇ?' ಎಂಬ ಆತಂಕ ಹುಟ್ಟುತ್ತದೆ. ಈ ಆತಂಕವೇ ರೈಲ್ವೇ ನಿಲ್ದಾಣಗಳಲ್ಲಿ ಅಥವಾ ಬಸ್ ನಿಲ್ದಾಣಗಳಲ್ಲಿ ಸಾಲನ್ನು ಮುರಿದು ಮುನ್ನುಗ್ಗುವಂತೆ ಮಾಡುತ್ತದೆ. ಬದುಕುಳಿಯುವ ಈ ನಿರಂತರ ಸಂಘರ್ಷದಲ್ಲಿ 'ಸಹನೆ' ಮತ್ತು 'ನಾಗರಿಕ ಪ್ರಜ್ಞೆ' ಹಿನ್ನೆಲೆಗೆ ಸರಿಯುತ್ತವೆ.

4. ನಡವಳಿಕೆಯಲ್ಲಿ ಬದಲಾವಣೆ ಮತ್ತು ಕಠಿಣ ಕಾನೂನು ಜಾರಿ

ಜನರನ್ನು ಕೇವಲ ಬಲವಂತದಿಂದ ಅಥವಾ ಭಾಷಣಗಳಿಂದ ಬದಲಾಯಿಸಲು ಸಾಧ್ಯವಿಲ್ಲ. ಅದಕ್ಕೆ ಮನಃಶಾಸ್ತ್ರಜ್ಞರು 'ನಡ್ಜ್ ಸಿದ್ಧಾಂತ'ವನ್ನು (Nudge Theory) ಪ್ರಸ್ತಾಪಿಸುತ್ತಾರೆ. ಅಂದರೆ ಜನರಿಗೆ ತಿಳಿಯದಂತೆ ಅವರ ನಡವಳಿಕೆಯನ್ನು ಧನಾತ್ಮಕವಾಗಿ ಬದಲಾಯಿಸುವುದು. ಉದಾಹರಣೆಗೆ, ಕಸ ಹಾಕುವ ಜಾಗಗಳಲ್ಲಿ ಗಿಡಗಳನ್ನು ಇಡುವುದು ಅಥವಾ ಸುಂದರವಾದ ಗೋಡೆಚಿತ್ರಗಳನ್ನು ಬಿಡಿಸುವುದರಿಂದ ಜನರು ಅಲ್ಲಿ ಕಸ ಹಾಕಲು ಅಥವಾ ಉಗುಳಲು ಹಿಂಜರಿಯುತ್ತಾರೆ. ಇದರೊಂದಿಗೆ 'ಸಾಮಾಜಿಕ ಬಹಿಷ್ಕಾರ' (ಖಂಛಿಚಿಟ ಖುಚಿಟುಟಿಂ) ಕೂಡ ಕೆಲಸ ಮಾಡಬೇಕು. ನಿಯಮ ಮುರಿಯುವವರನ್ನು ಸಮಾಜದ ಇತರರು ತಕ್ಷಣವೇ ಸೌಮ್ಯವಾಗಿ ಪ್ರಶ್ನಿಸಬೇಕು. ಒಬ್ಬ ವ್ಯಕ್ತಿ ರಸ್ತೆಯಲ್ಲಿ ಕಸ ಹಾಕಿದಾಗ ಜತೆಯಲ್ಲಿದ್ದವರು "ಅಲ್ಲಿ ಕಸದ ಬುಟ್ಟಿಯಿದೆ, ಅಲ್ಲಿ ಹಾಕಿ" ಎಂದು ಧೈರ್ಯವಾಗಿ ಹೇಳುವ ವಾತಾವರಣ ನಿರ್ಮಾಣವಾಗಬೇಕು. ಮೌನವಾಗಿರುವುದೇ ಇಂತಹ ತಪ್ಪುಗಳಿಗೆ ದೊಡ್ಡ ಪ್ರೋತ್ಸಾಹ.

ಆದರೆ ಕೇವಲ ಜಾಗೃತಿ ಸಾಲದು, ಭಾರತದಲ್ಲಿ ಕಾನೂನುಗಳಿವೆಯಾದರೂ ಅವುಗಳ ಜಾರಿ ಅಷ್ಟೊಂದು ಕಟ್ಟುನಿಟ್ಟಾಗಿಲ್ಲದಿರುವುದರಿಂದ "ಯಾರು ನೋಡುತ್ತಿದ್ದಾರೆ?" ಎಂಬ ಉದಾಸೀನ ಮನೋಭಾವ ಬೇರೂರಿದೆ. ಆದ್ದರಿಂದ, ತಪ್ಪು ಮಾಡಿದವರಿಗೆ ಭಾರಿ ದಂಡ ಮತ್ತು ಕಠಿಣ ಶಿಕ್ಷೆಯ ಭಯವಿರಬೇಕು:

ತಂತ್ರಜ್ಞಾನ ಆಧಾರಿತ ನಿಗಾ: ಪ್ರತಿಯೊಂದು ಮುಖ್ಯ ಜಂಕ್ಷನ್, ಸ್ಕೈವಾಕ್ ಮತ್ತು ಫುಟ್‌ಪಾತ್‌ಗಳ ಬಳಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (ಂಖ) ಮೂಲಕ ಫುಟ್‌ಪಾತ್ ಮೇಲೆ ವಾಹನ ಚಲಾಯಿಸುವವರನ್ನು, ಕಸ ಹಾಕುವವರನ್ನು ಅಥವಾ ಸಿಗ್ನಲ್ ಜಂಪ್ ಮಾಡುವವರನ್ನು ಗುರುತಿಸಿ ನೇರವಾಗಿ ಅವರ ಮನೆಗೆ ಇ-ಚಲನ್ (ಇ-ಛುಚಿಟಟಚಿಟಿ) ಕಳುಹಿಸುವ ವ್ಯವಸ್ಥೆ ಕಟ್ಟುನಿಟ್ಟಾಗಬೇಕು.

ಸಮುದಾಯ ಸೇವೆ (ಅಂಟಟಣಟಿಣಥಿ ಖಜಡಿತುಛಿಜ): ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವವರಿಗೆ ಅಥವಾ ಕಸ ಹಾಕುವವರಿಗೆ ಕೇವಲ ಆರ್ಥಿಕ ದಂಡ ವಿಧಿಸುವುದಷ್ಟೇ ಅಲ್ಲದೆ, ಅವರಿಂದಲೇ ಆ ಸ್ಥಳವನ್ನು ಸ್ವಚ್ಛಗೊಳಿಸುವ ಕಡ್ಡಾಯ 'ಸಮುದಾಯ ಸೇವೆ'ಯ ಶಿಕ್ಷೆಯನ್ನು ಕಾನೂನಿಗೆ ತರಬೇಕು.

**5. ಶಿಕ್ಷಣದ ಪಾತ್ರ ಮತ್ತು ಜಾಗತಿಕ ಶ್ರೇಷ್ಠ ಮಾದರಿಗಳು**

ಪಾಶ್ಚಿಮಾತ್ಯ ಮತ್ತು ಕೆಲವು ಏಷ್ಯನ್ ದೇಶಗಳಲ್ಲಿ ಜನರು ಹುಟ್ಟುತ್ತಲೇ ಶಿಸ್ತುಬದ್ಧರಾಗಿರುವುದಿಲ್ಲ. ಅಲ್ಲಿನ ಕಟ್ಟುನಿಟ್ಟಾದ ಕಾನೂನು ಮತ್ತು ಬಾಲ್ಯದಿಂದಲೇ ನೀಡುವ ಶಿಕ್ಷಣ ಅವರನ್ನು ನಾಗರಿಕ ಪ್ರಜ್ಞೆ ತೋರುವಂತೆ ಮಾಡುತ್ತದೆ. ನಮ್ಮ ಶಿಕ್ಷಣ ವ್ಯವಸ್ಥೆಯು ಅಂಕಗಳಿಗೆ ಮತ್ತು ವೃತ್ತಿಗೆ ಹೆಚ್ಚು ಒತ್ತು ನೀಡುತ್ತದೆಯೇ ಹೊರತು, ಉತ್ತಮ ಪ್ರಜೆಯನ್ನು ರೂಪಿಸುವಲ್ಲಿ ಅಲ್ಲ. ಶಾಲೆಯಲ್ಲಿ ಓದಿದ 'ನೈತಿಕ ಶಿಕ್ಷಣ' ಕೇವಲ ಪುಸ್ತಕಕ್ಕೆ ಸೀಮಿತವಾಗುತ್ತಿದೆ. ಮಗುವೊಂದು ಮನೆಯಲ್ಲಿ ತನ್ನ ಪೋಷಕರು ಕೆಂಪು ದೀಪವಿದ್ದರೂ ವಾಹನ ಚಲಾಯಿಸುವುದನ್ನು ನೋಡಿದರೆ, ಆ ಮಗು ಶಾಲೆಯಲ್ಲಿ ಕಲಿತ ಪಾಠಕ್ಕಿಂತ ಪೋಷಕರ ವರ್ತನೆಯನ್ನೇ ಮಾದರಿಯಾಗಿ ತೆಗೆದುಕೊಳ್ಳುತ್ತದೆ. ಭಾರತದ ಪಠ್ಯಕ್ರಮದಲ್ಲಿ ನಾಗರಿಕ ಜವಾಬ್ದಾರಿಗಳನ್ನು ಕೇವಲ ಒಂದು ಪಾಠವನ್ನಾಗಿ ಮಾಡದೆ, ಪ್ರಾಯೋಗಿಕ ಚಟುವಟಿಕೆಯನ್ನಾಗಿ ಅಳವಡಿಸಬೇಕು.

ನಾವು ಜಗತ್ತಿನ ಇತರ ದೇಶಗಳಿಂದ ಕಲಿಯಬೇಕಾದ್ದು ಸಾಕಷ್ಟಿದೆ:

ಜಪಾನ್ನ 'ಸೋಜಿಕಾ' (ಖಂರಿಇಚಿ) ಪದ್ಧತಿ: ಜಪಾನ್ ದೇಶದ ಪ್ರಾಥಮಿಕ ಶಾಲೆಗಳಲ್ಲಿ ಯಾವುದೇ ಸ್ವಚ್ಛತಾ ಸಿಬ್ಬಂದಿ ಇರುವುದಿಲ್ಲ. ಮಕ್ಕಳು ತರಗತಿ, ಕಾರಿಡಾರ್ ಮತ್ತು ಶೌಚಾಲಯಗಳನ್ನು ತಾವೇ ಸ್ವಚ್ಛಗೊಳಿಸುತ್ತಾರೆ. ಇದರಿಂದ ಅವರಿಗೆ ಶ್ರಮದ ಗೌರವ ಮತ್ತು ಸ್ವಚ್ಛತೆಯ ಅರಿವು ಬಾಲ್ಯದಲ್ಲೇ ಮೂಡುತ್ತದೆ. ಕ್ರೀಡಾಂಗಣಗಳಲ್ಲಿ ಪಂದ್ಯ ಮುಗಿದ ನಂತರವೂ ಜಪಾನ್ ಜನರು ತಾವಿದ್ದ ಜಾಗವನ್ನು ಸ್ವಚ್ಛಗೊಳಿಸಿ ಹೋಗುವುದನ್ನು ನಾವು ಜಾಗತಿಕ ವೇದಿಕೆಗಳಲ್ಲಿ ನೋಡಿದ್ದೇವೆ.

ರುವಾಂಡಾದ 'ಉಮುಗಂಡ' (Umuganda): ಆಫ್ರಿಕಾದ ರುವಾಂಡಾ ದೇಶದಲ್ಲಿ ಪ್ರತಿ ತಿಂಗಳ ಕೊನೆಯ ಶನಿವಾರ 'ಉಮುಗಂಡ' ಎಂಬ ಕಡ್ಡಾಯ ಸಮುದಾಯ ಸ್ವಚ್ಛತಾ ಕಾರ್ಯಕ್ರಮ ನಡೆಯುತ್ತದೆ. ಅಧ್ಯಕ್ಷರಿಂದ ಹಿಡಿದು ಸಾಮಾನ್ಯ ಪ್ರಜೆಯವರೆಗೆ ಇಡೀ ದೇಶದ ನಾಗರಿಕರು ಅಂದು ಒಟ್ಟಾಗಿ ರಸ್ತೆ ಮತ್ತು ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸುತ್ತಾರೆ. ಇಂದು ಆಫ್ರಿಕಾದಲ್ಲೇ ಅತಿ ಸ್ವಚ್ಛ ದೇಶವಾಗಿ ರುವಾಂಡಾ ಹೊರಹೊಮ್ಮಲು ಇದುವೇ ಕಾರಣ.

ಸಿಂಗಾಪುರ: ಇಲ್ಲಿ ಸಾರ್ವಜನಿಕ ಸ್ಥಳದಲ್ಲಿ ಕಸ ಹಾಕಿದರೆ ಅಥವಾ ಚೂಯಿಂಗಮ್ ಅಗಿದು ಉಗುಳಿದರೆ ಭಾರಿ ಆರ್ಥಿಕ ದಂಡದ ಜೊತೆಗೆ ಕಠಿಣ ಜೈಲು ಶಿಕ್ಷೆಯ ಭಯವಿರುತ್ತದೆ, ಇದು ಅಲ್ಲಿನ ಶಿಸ್ತಿಗೆ ಕಾರಣವಾಗಿದೆ.

6. ಭಾರತದ ಭರವಸೆಯ ಕಿರಣಗಳು: ಯಶಸ್ವಿ ನಗರಗಳ ಯಶೋಗಾಥೆ

ಭಾರತದಲ್ಲೇ , ಕೆಲವು ನಗರಗಳು ತಮ್ಮ ಕಟ್ಟುನಿಟ್ಟಾದ ಆಡಳಿತ ಮತ್ತು ಜನರ ಸಹಭಾಗಿತ್ವದಿಂದ ಇಡೀ ದೇಶಕ್ಕೆ ಮಾದರಿಯಾಗಿ ನಿಂತಿವೆ.

ಮಧ್ಯಪ್ರದೇಶದ ಇಂದೋರ್ ನಗರವು ಸತತವಾಗಿ ಭಾರತದ ಅತ್ಯಂತ ಸ್ವಚ್ಛ ನಗರವಾಗಿ ಆಯ್ಕೆಯಾಗುತ್ತಿರುವುದು ಒಂದು ಮೈಲಿಗಲ್ಲು. ಅಲ್ಲಿನ ಯಶಸ್ಸಿನ ರಹಸ್ಯವೆಂದರೆ 100% ಮನೆಯಲ್ಲೇ ಕಸವನ್ನು ಹಸಿ, ಒಣ ಹಾಗೂ ಅಪಾಯಕಾರಿ ಸೇರಿದಂತೆ 6 ವಿಧಗಳಾಗಿ ವಿಂಗಡಿಸಲಾಗುತ್ತದೆ. ಇದರೊಂದಿಗೆ, ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವವರಿಗೆ ಕಠಿಣ ಸ್ಪಾಟ್ ಫೈನ್ ವಿಧಿಸಲಾಗುತ್ತದೆ ಮತ್ತು ರಾತ್ರಿ ವೇಳೆಯೂ ರಸ್ತೆಗಳನ್ನು ಸ್ವಚ್ಛಗೊಳಿಸುವ ವ್ಯವಸ್ಥೆಯಿದೆ.

ಗುಜರಾತ್ನ ಸೂರತ್ ನಗರವು ಒಂದು ಕಾಲದಲ್ಲಿ ಪ್ಲೇಗ್ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ, ನಂತರ ತನ್ನನ್ನು ತಾನು ಸಂಪೂರ್ಣವಾಗಿ ಬದಲಾಯಿಸಿಕೊಂಡ ಕಥೆ ರೋಮಾಂಚನಕಾರಿ. ಇಂದು ಸೂರತ್ ದೇಶದ ಮುಂಚೂಣಿಯ ಸ್ವಚ್ಛ ನಗರವಾಗಿದ್ದು, ಡಿಜಿಟಲ್ ನಿಗಾ ವ್ಯವಸ್ಥೆ, ಫುಟ್‌ಪಾತ್ ಆಕ್ರಮಣಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಮತ್ತು ಅತ್ಯಾಧುನಿಕ ಜೈವಿಕ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಹೊಂದಿದೆ.

ಅದೇ ರೀತಿ, ಮಹಾರಾಷ್ಟ್ರದ ನವಿ ಮುಂಬೈ ತನ್ನ ವ್ಯವಸ್ಥಿತ ನಗರಾಡಳಿತ, ಸಂಚಾರ ನಿಯಮಗಳ ಕಟ್ಟುನಿಟ್ಟಿನ ಪಾಲನೆ, ಸಾರ್ವಜನಿಕ ಸೌಲಭ್ಯಗಳ ಅತ್ಯುತ್ತಮ ನಿರ್ವಹಣೆ ಮತ್ತು ಮುನ್ಸಿಪಾಲಿಟಿಯೊಂದಿಗೆ ನಾಗರಿಕರ ನಿರಂತರ ಸಹಭಾಗಿತ್ವದಿಂದ ಹೆಸರುವಾಸಿಯಾಗಿದೆ. ನಮ್ಮ ಕರ್ನಾಟಕದಲ್ಲೂ ಮೈಸೂರು ಸೇರಿದಂತೆ ಹಲವು ನಗರಗಳು ನಾಗರಿಕ ಪ್ರಜ್ಞೆಯಲ್ಲಿ ಉತ್ತಮ ಪರಂಪರೆಯನ್ನು ಹೊಂದಿವೆ. ಈ ನಗರಗಳ ಯಶಸ್ಸು ತೋರಿಸುವುದೇನೆಂದರೆ, ಆಡಳಿತ ಮಂಡಳಿಯ ಕಠಿಣ ನಿರ್ಧಾರ ಮತ್ತು ಜನರ ಸಹಭಾಗಿತ್ವ ಒಂದಾದರೆ ಭಾರತದ ಯಾವುದೇ ನಗರವನ್ನು ಸ್ವಚ್ಛ ಮತ್ತು ಶಿಸ್ತುಬದ್ಧವಾಗಿಡಲು ಸಾಧ್ಯ.

**ನಮ್ಮ ವೈಯಕ್ತಿಕ ಜೀವನಕ್ಕಾಗಿ 5 ಸರಳ ಸೂತ್ರಗಳು**

ಬದಲಾವಣೆ ಬೇರೆಯವರಿಂದ ನಿರೀಕ್ಷಿಸುವ ಮುನ್ನ ನಮ್ಮ ದೈನಂದಿನ ಜೀವನದಲ್ಲಿ ಈ ಐದು ಸರಳ ನಿಯಮಗಳನ್ನು ರೂಢಿಸಿಕೊಳ್ಳಬೇಕಿದೆ:

1 "ನನ್ನ ಕಸ, ನನ್ನ ಜವಾಬ್ದಾರಿ": ಚಾಕೊಲೇಟ್ ಕಾಗದ, ನೀರಿನ ಬಾಟಲಿಗಳಂತಹ ಸಣ್ಣ ಕಸವನ್ನು ತಕ್ಷಣವೇ ರಸ್ತೆಗೆ ಎಸೆಯದೆ, ಹತ್ತಿರದಲ್ಲಿ ಕಸದ ಬುಟ್ಟಿ ಇಲ್ಲದಿದ್ದರೆ ಬ್ಯಾಗ್ ಅಥವಾ ಜೇಬಿನಲ್ಲಿಟ್ಟುಕೊಂಡು ಮನೆಗೆ ಬಂದ ನಂತರ ವಿಲೇವಾರಿ ಮಾಡುವುದು.

2 ಮೂಲದಲ್ಲೇ ಕಸದ ವಿಂಗಡಣೆ: ಮನೆಯ ಕಸವನ್ನು ಪೌರಕಾರ್ಮಿಕರಿಗೆ ಕೊಡುವಾಗ ಕಡ್ಡಾಯವಾಗಿ ಹಸಿ ಕಸ ಮತ್ತು ಒಣ ಕಸವನ್ನು ಬೇರ್ಪಡಿಸಿ ಕೊಡುವುದು.

3 ಸಂಚಾರ ನಿಯಮಗಳ ಸ್ವಯಂಪ್ರೇರಿತ ಪಾಲನೆ: ಪೊಲೀಸರು ಇಲ್ಲದಿದ್ದಾಗಲೂ ಸಿಗ್ನಲ್ ಪಾಲಿಸುವುದು, ಅನಗತ್ಯವಾಗಿ ಹಾರ್ನ್ ಮಾಡದಿರುವುದು ಮತ್ತು ಫುಟ್‌ಪಾತ್‌ಗಳ ಮೇಲೆ ವಾಹನ ಚಲಾಯಿಸದೆ ಪಾದಚಾರಿಗಳಿಗೆ ಗೌರವ ನೀಡುವುದು.

4 ಸಾರ್ವಜನಿಕ ಶೌಚಾಲಯಗಳ ಜವಾಬ್ದಾರಿಯುತ ಬಳಕೆ: ಶೌಚಾಲಯಗಳನ್ನು ಬಳಸಿದ ನಂತರ ಕಡ್ಡಾಯವಾಗಿ ಫ್ಲಶ್ ಮಾಡುವುದು ಮತ್ತು ನಮ್ಮ ಮುಂದಿನ ಬಳಕೆದಾರರಿಗೆ ಶುಚಿಯಾದ ಪರಿಸರವನ್ನು ಬಿಟ್ಟುಕೊಡುವುದು.

5 'ಮೌನ ಪ್ರೇಕ್ಷಕ'ರಾಗುವುದನ್ನು ನಿಲ್ಲಿಸುವುದು: ನಮ್ಮ ಕಣ್ಣೆದುರೇ ಯಾರಾದರೂ ಸಂಚಾರ ನಿಯಮ ಮುರಿಯುತ್ತಿದ್ದರೆ ಅಥವಾ ಸಾರ್ವಜನಿಕ ಸ್ಥಳದಲ್ಲಿ ಕಸ ಹಾಕುತ್ತಿದ್ದರೆ ಅತ್ಯಂತ ಸೌಮ್ಯವಾಗಿ ಮತ್ತು ದೃಢವಾಗಿ ಅದನ್ನು ಪ್ರಶ್ನಿಸುವುದು.

ನಾಗರಿಕ ಪ್ರಜ್ಞೆ ಎಂಬುದು ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಅದು ಪ್ರತಿಯೊಬ್ಬ ನಾಗರಿಕನ ಆತ್ಮಸಾಕ್ಷಿಯ ಪ್ರಶ್ನೆ. ದೇಶಪ್ರೇಮ ಎಂದರೆ ಕೇವಲ ರಾಷ್ಟ್ರಗೀತೆ ಹಾಡುವುದಾಗಲಿ ಅಥವಾ ಗಡಿಯಲ್ಲಿ ಘೋಷಣೆ ಕೂಗುವುದಾಗಲಿ ಅಲ್ಲ; ನಮ್ಮ ದೇಶದ ರಸ್ತೆಗಳನ್ನು, ಪಾದಚಾರಿ ಮಾರ್ಗಗಳನ್ನು ಮತ್ತು ನಮ್ಮ ಸಹನಾಗರಿಕರ ಬದುಕನ್ನು ಗೌರವಿಸುವುದೂ ಹೌದು. ಬದಲಾವಣೆ ರಾತ್ರೋರಾತ್ರಿ ಆಗುವುದಿಲ್ಲ, ಆದರೆ ಅದು ನಮ್ಮಿಂದಲೇ ಆರಂಭವಾಗಬೇಕಿದೆ?ಒಂದು ಸಣ್ಣ ಸಿಗ್ನಲ್ಗಾಗಿ ತಾಳ್ಮೆಯಿಂದ ಕಾಯುವ, ಸ್ಕೈವಾಕ್ ಬಳಸುವ ಅಥವಾ ಕಸವನ್ನು ಸರಿಯಾದ ಜಾಗಕ್ಕೆ ತಲುಪಿಸುವ ನಮ್ಮ ಸಣ್ಣ ಸಣ್ಣ ನಿರ್ಧಾರಗಳ ಮೂಲಕ.



| ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email : Swamynathann@gmail.com


# ಪದ್ಮಿನಿ ಏಕಾದಶಿಯ ಮಹತ್ವ



| ಗಿರಿಜಾ.ಎಸ್. ದೇಶಪಾಂಡೆ. ಬೆಂಗಳೂರು.

ಪದ್ಮಿನಿ ಏಕಾದಶಿಯು ಅಧಿಕ ಮಾಸದಲ್ಲಿ (ಮೂರು ವರ್ಷಕ್ಕೊಮ್ಮೆ) ಬರುವ ಅತ್ಯಂತ ಪವಿತ್ರವಾದ ಏಕಾದಶಿ.ಈ ಏಕಾದಶಿಗೆ ಕಮಲ ಏಕಾದಶಿಯಂದೂ ಕರೆಯಲಾಗುತ್ತದೆ.2026ರ ಮೇ 27ರಂದು ಆಚರಿಸಲಾಗುವ ಈ ಏಕಾದಶಿಯು ವಿಷ್ಣುಪೂಜೆಗೆ ಶ್ರೇಷ್ಠವಾಗಿದ್ದು ,ಪಾಪನಾಶ,ಐಶ್ವರ್ಯ ಮತ್ತು ಶ್ರೀಕೃಷ್ಣನ ಆಶೀರ್ವಾದ ಆಚರಿಸುವ ಎಲ್ಲ ಭಕ್ತರ ಮೇಲಿರುತ್ತದೆ.ಇದು ಅಧಿಕಮಾಸ ಅಥವಾ ಪುರುಷೋತ್ತಮ ಮಾಸದ ಸಮಯದಲ್ಲಿ ಶುಕ್ಲಪಕ್ಷದ ಏಕಾದಶಿ ತಿಥಿಯಂದು ಬರುತ್ತದೆ.ಈ ವಿಶೇಷ ಅವಧಿಯು ಪಾಪಗಳ ಕ್ಷಮೆ ಪಡೆಯಲು,ಮನಸ್ಸು,ದೇಹ ಮತ್ತು ಆತ್ಮದ ಶುದ್ಧೀಕರಣಕ್ಕೆ ಸೂಕ್ತವಾಗಿದೆ.

**ಪದ್ಮಿನಿ ಏಕಾದಶಿಯ ಮಹತ್ವ:** ಪದ್ಮಿನಿ ಏಕಾದಶಿಯ ಶ್ರೇಷ್ಟತೆಯನ್ನು 'ಸ್ಕಂದಪುರಾಣ'ದಂತಹ ಹಿಂದೂ ಗ್ರಂಥಗಳಲ್ಲಿ ಓದಬಹುದು. ಏಕಾದಶಿಯ ಮಹತ್ವವನ್ನು ಶ್ರೀಕೃಷ್ಣ ಪರಮಾತ್ಮನು ಧರ್ಮರಾಜ,ಯುಧಿಷ್ಟಿರನಿಗೆ ವಿವರಿಸಿದನು.ಪದ್ಮಿನಿ ಏಕಾದಶಿಯನ್ನು ಮೊದಲು ಕಾರ್ತವೀರ್ಯನ ರಾಣಿ ಪದ್ಮಿನಿ ಆಚರಿಸಿದಳು. ಅವಳ ಸಮರ್ಪಣೆಯಿಂದಾಗಿ ಈ ಏಕಾದಶಿಗೆ ಅವಳ ಹೆಸರು ಇಡಲಾಯಿತು.ಪದ್ಮಿನಿ ಏಕಾದಶಿಯ



ಪದ್ಧತಿಗಳನ್ನು ವರ್ತಮಾನ ಮತ್ತು ಹಿಂದಿನ ಜನ್ಮದ ಪಾಪತೊಳೆಯಲು ನಡೆಸಲಾಗುತ್ತದೆ.ಕೊನೆಯಲ್ಲಿ ಆಚರಿಸುವ ಭಕ್ತರು ವಿಷ್ಣು ವಾಸಸ್ಥಾನವಾದ ವೈಕುಂಠದಲ್ಲಿ ಸ್ಥಾನ ಪಡೆಯುತ್ತಾರೆ.

**ಆಚರಣೆ:** ಪದ್ಮಿನಿ ಏಕಾದಶಿ ಆಚರಿಸುವವರು ಸೂರ್ಯೋದಯದ ಸಮಯದಲ್ಲಿ ಎದ್ದು ಆತ್ಮ ದೇಹ ಶುದ್ಧಿಕರಿಸಲು ಸ್ನಾನ ಮಾಡಿ ವೃತ ಆಚರಿಸುತ್ತಾರೆ. ಉದ್ದಿನಬೇಳೆ,ಅಕ್ಕಿ,ಪಾಲಕ,ಕಡಲೆ,ಜೇನುತುಪ್ಪದಂತಹ ಪಾದದ ವಸ್ತುಗಳನ್ನು ತಿನ್ನಲು ಅನುಮತಿಯಿರುವದಿಲ್ಲ. ಹಾಲು,ಹಣ್ಣು,ಫಲಹಾರ ತಿನ್ನುವ ಮೂಲಕ ವೃತ ಆಚರಿಸುತ್ತಾರೆ.ಭಕ್ತಿಪೂರ್ವಕವಾಗಿ ವಿಷ್ಣುವನ್ನು ಪೂಜಿಸಲಾಗುತ್ತದೆ.ದಾನವು ಈ ದಿನದ ಮತ್ತೊಂದು ಪ್ರಮುಖ ಆಚರಣೆಯಾಗಿದೆ.ಆ ಶುಭದಿನದಂದು ಬ್ರಾಹ್ಮಣರಿಗೆ ಆಹಾರ,ವಸ್ತ್ರಗಳನ್ನು ದಾನ ಮಾಡಲಾಗುತ್ತದೆ.ನಾವೂ ಭಗವಾನ್ ವಿಷ್ಣುವನ್ನು ಪೂಜಿಸಿ ಭಗವಂತನ ಆಶೀರ್ವಾದ ಪಡೆಯೋಣ.

ಸರ್ವೇ ಜನ ಸುಖಿನೋ ಭವಂತು.ಶುಭಮಸ್ತು.

# ಬದುಕಿನಲ್ಲಿ ಪರಸ್ಪರ ಸ್ಫೂರ್ತಿ ತುಂಬುವ ಕಾರ್ಯ ನಮ್ಮ ನಡುವೆಯೇ ನಡೆಯುತ್ತಿರಬೇಕು



| ಪುಷ್ಪ ಪ್ರಸಾದ್

ಜೀವನದಲ್ಲಿ ಪ್ರತಿದಿನವೂ ಹೊಸ ಚೈತನ್ಯದಿಂದಿರಲು ಮತ್ತು ಸದಾ ಸ್ಫೂರ್ತಿಯಿಂದ ಮುನ್ನಡೆಯಲು ನಮ್ಮ ಆಲೋಚನೆಗಳು ಮತ್ತು ಸಂಬಂಧಗಳು ಸಕಾರಾತ್ಮಕವಾಗಿರಬೇಕು. ಸಂಬಂಧಗಳು ಸ್ಫೂರ್ತಿ ತುಂಬುವಂತಿರಬೇಕು ಮತ್ತು ಆತ್ಮವಿಶ್ವಾಸ ಆ ಸಂಬಂಧಗಳಿಗಿಂತಲೂ ಹೆಚ್ಚು ಪ್ರಭಾವಶಾಲಿಯಾಗಿರಬೇಕು. ಬದುಕಿನಲ್ಲಿ ಯಶಸ್ವಿಯಾದ ವ್ಯಕ್ತಿಯ ಬಳಿ ಪ್ರಶ್ನೆ ಕೇಳಿದರೆ ಸಾಮಾನ್ಯವಾಗಿ, ತನ್ನ ಯಶಸ್ಸಿಗೆ ತಾನೇ ಕಾರಣ ಅನ್ನುವ ಉತ್ತರ ಯಾರು ಸಹ ಕೊಡುವುದಿಲ್ಲ. ಪ್ರತಿಯೊಬ್ಬರ ಜೀವನದ ಯಶೋಗಾತೆಯ ಹಿಂದೆ, ಸ್ಫೂರ್ತಿಯ ಚಿಲುಮೆಯಾಗಿ ಯಾರಾದರೂ ಇದ್ದೇ ಇರುತ್ತಾರೆ. ಕನಸು ಕಾಣದವರು ಯಾರಿದ್ದಾರೆ? ಆದರೆ ಅದೆಷ್ಟೋ ಸಲ ಕನಸುಗಳಿಗೆ ಸೂಕ್ತ ಒತ್ತಾಸೆ ದೊರೆಯದೆ, ಅವು ಮೊಗ್ಗಿನಲ್ಲೇ ಮುದುಡಿ ಹೋಗಿಬಿಡುತ್ತವೆ. ಬದುಕೆಂಬುದು ಪ್ರತಿಕ್ಷಣ ಸವಾಲಾಗಿರಬೇಕಾದರ? ನಮ್ಮ ಸಂಬಂಧಗಳು ಪರಸ್ಪರ ಸ್ಫೂರ್ತಿ ತುಂಬಬೇಕೇ ಹೊರತು  ನಿರಾಶೆಯ ಕೂಪಕ್ಕೆ ತಳ್ಳಬಾರದು. ಎಷ್ಟೋ ಸಲ ಆನೆಬಲದ ಸಾಮರ್ಥ್ಯ ನಮ್ಮೊಳಗೇ ಇರುತ್ತದೆ. ಆದರೆ ನಮ್ಮೊಳಗಿನ ಅಳುಕುಗಳು ಎನ್ನಬಹುದಾದ ಒಂದು ಸಣ್ಣ ದಾರ ಕೂಡ ನಮ್ಮನ್ನು ಪ್ರಯತ್ನ ಮಾಡದಂತೆ ಕಟ್ಟಿಹಾಕಿ ಬಿಟ್ಟಿರುತ್ತದೆ. ನಾವು ಆ ದಾರಕ್ಕಿಂತ ಶಕ್ತಿಶಾಲಿ ಎನ್ನುವ ಅರಿವು ಮೂಡಿಸುವ ಪ್ರೇರಕ ಶಕ್ತಿ ನಮಗೆ ಸಿಗದಿದ್ದರೆ ನಾವು ಬೆಳೆಯಲು ಎಂದಿಗೂ ಸಾಧ್ಯವಾಗುವುದಿಲ್ಲ. ಆದರೆ ಪ್ರತಿ ಸಂದರ್ಭದಲ್ಲೂ, ನಮ್ಮೊಂದಿಗೆ ಯಾರಾದರೂ ಸ್ಫೂರ್ತಿಯಾಗಿ ನಮ್ಮ ಜೊತೆಗಿರುತ್ತಾರೆ ಎಂದು



ಹೇಳಲು ಸಾಧ?ಯವಿಲ್ಲ. ನಮ್ಮ ಆತ್ಮವಿಶ್ವಾಸವನ್ನು ಕುಗ್ಗಿಸುವ ಸಲುವಾಗಿ, ನಮ್ಮ ಜೀವನದಲ್ಲಿ ಬರುವ ಪ್ರತಿ ವ್ಯಕ್ತಿಯೂ ಕೂಡ ಆ ಸಣ್ಣ ಹಗ್ಗದಂತೆ. ಅಯ್ಯೋ ನಿನಗೆ ಅಂತಹ ಅರ್ಹತೆ ಇಲ್ಲ. ನಮಗೆ ಇವೆಲ್ಲಾ ಏಕೆ ಬೇಕು? ಅವೆಲ್ಲ ಯಾವ ಕಾರಣಕ್ಕೂ ಸಾಧ್ಯವಿಲ್ಲ ಬಿಡು. ಈ ರೀತಿಯಾಗಿ ಮಾತನಾಡುವ ಜನರಿಗೇನು ಕೊರತೆಯಿಲ್ಲ. ಇಂತಹ ಜನರೊಂದಿಗಿನ ಸಂಬಂಧಗಳಿಗಿಂತಲೂ, ನಮಗೆ ನಮ್ಮ ಮೇಲಿರುವ ಆತ್ಮವಿಶ್ವಾಸ, ಗಟ್ಟಿಯಾಗಿರಬೇಕು. ಕಾಲೆಳೆಯುವವರು ತುಂಬಾ ಜನ ಇರುತ್ತಾರೆ. ಅವರ ಮಾತುಗಳಿಗೆ ಕೆಲವೊಮ್ಮೆ ನಾವು ಕಿವುಡರಾಗಿರಬೇಕಾಗುತ್ತದೆ.

?ಒಮ್ಮೆ ಕುರಿಗಳ ಹಿಂಡೊಂದು ರಸ್ತೆಯಲ್ಲಿ ಸವಾರಿ ಹೊರಟಿದ್ದವು. ಅವುಗಳಲ್ಲಿ ಒಂದು ಕುರಿ ಆಯತಪ್ಪಿ ಒಂದು ಹೊಂಡದೊಳಗಡೆ ಬಿದ್ದುಬಿಡುತ್ತದೆ, ಅದನ್ನು ನೋಡಲೆತ್ನಿಸಿದ ಮತ್ತೊಂದು ಕುರಿಯು ಬೀಳುತ್ತದೆ. ಉಳಿದ ಕುರಿಗಳಿಗೆ ಅವುಗಳಿಗೆ ಮೇಲೆ ಬರಲು ಆಗುವುದಿಲ್ಲ ಎಂದೆನಿಸುತ್ತದೆ. ಅಷ್ಟರಲ್ಲಿ ಕೆಳಗೆ ಬಿದ್ದ, ಆ ಕುರಿಗಳು ಹೊರಕ್ಕೆ ಬರಲು ಪ್ರಯತ್ನ ಮಾಡುತ್ತವೆ. ಆಗ ಉಳಿದ ಕುರಿಗಳು ಜೋರಾಗಿ ಕೂಗಿ, ಹೀಗೆ ಹೇಳುತ್ತವೆ ನಿಮಗೆ ಮೇಲೆ ಬರಲು ಸಾಧ್ಯವಿಲ್ಲ ಹಾಗಾಗಿ ನೀವು ಅಲ್ಲೆ ಕೆಳಗೇ ಇರಬೇಕು, ಅವುಗಳ ಮಾತು ಕೇಳಿದ ಒಂದು ಕುರಿ ತನ್ನ ಪ್ರಯತ್ನ ಬಿಟ್ಟು ಬಿಡುತ್ತದೆ. ಆದರೆ ಮತ್ತೊಂದು ಕುರಿ ಸುಮ್ಮನೆ ಕೈಚೆಲ್ಲಿ ಕೂರುವುದಿಲ್ಲ. ಕಡೆಗೂ ಪ್ರಯತ್ನಪಟ್ಟು ಹೊರಗಡೆ ಬಂದು ತನ್ನ ಪ್ರಾಣ ಉಳಿಸಿಕೊಂಡು ಬಿಡುತ್ತದೆ, ಏಕೆಂದರೆ ಆ ಕುರಿ ಕಿವುಡು ಹಾಗಾಗಿ ಉಳಿದ ಕುರಿಗಳು ಕೂಗಿ ಹೇಳಿದ್ದು ಅದಕ್ಕೆ ಕೇಳಿಸಿರುವುದಿಲ್ಲ. ನಿಜ, ಜನರ ಮಾತುಗಳು ನಮ್ಮ ಜೀವನದ ಮೇಲೆ ತುಂಬಾ ಪರಿಣಾಮ ಬೀರುತ್ತವೆ. ಹಾಗಾಗಿ ನಾವು ಕೆಲವೊಮ್ಮೆ ನಿರಾಶೆಯ ಮಾತುಗಳಿಗೆ ಕಿವುಡರಾಗಬೇಕಾಗುತ್ತದೆ. ಅಷ್ಟೇ ಅಲ್ಲ ಮಾತನಾಡುವಾಗಲೂ ಕೂಡ ತುಂಬಾ ಯೋಚನೆ ಮಾಡಿ ಮಾತನಾಡಬೇಕು. ಯಾರಾದರೂ ಸಲಹೆ ಕೇಳಿದಾಗ ಸುಮ್ಮನೆ ಬಾಯಿಗೆ ಬಂದ ಹಾಗೆ ಬಿಟ್ಟಿ ಸಲಹೆಗಳನ್ನು ಕೊಡಬಾರದು. ಕೆಲವೊಮ್ಮೆ ನಮ್ಮ ಸಲಹೆಗಳು ಇತರರ ಬದುಕು ಮತ್ತು ಸಾವಿನ ನಡುವಿನ ಪ್ರಶ್ನೆಯ ಸುತ್ತಲಿನ ಸಂದರ್ಭದ ಮೇಲೆ ಪ್ರಭಾವ ಬೀರಬಹುದು. ಆದಕಾರಣ ನಾಲ್ಕು ದಿನದ ಬದುಕಿನಲ್ಲಿ ಪರಸ್ಪರ ಸ್ಫೂರ್ತಿ ತುಂಬುವ ಕಾರ್ಯ ನಮ್ಮ ನಡುವೆ ನಡೆಯಬೇಕು.ಒಬ್ಬರ ಕನಸುಗಳು ಮತ್ತು ಗುರಿಗಳನ್ನು ಇನ್ನೊಬ್ಬರು ಗೌರವಿಸುತ್ತಾ ಆತ್ಮವಿಶ್ವಾಸ ಬೆಳೆಸಿಕೊಂಡು ಪರಸ್ಪರ ಸ್ಫೂರ್ತಿ ತುಂಬುವ ಕೆಲಸ ಮಾಡಬೇಕು.



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,